ಸಂಪುಟ: ೦೭/ ಸಂಚಿಕೆ: ೧೭೩/ ಶುಕ್ರವಾರ ದಿನಾಂಕ : ೨೯-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

■ ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 173/ FRIDAY Date : 29-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಲಕ್ಷಾಂತರ ರೈತರಿಗೆ ಕೋಟ್ಯಂತರ ರೂ. ಸಾಲ ವಿತರಣೆಯ ಗುರಿ : ಮುಖ್ಯಮಂತ್ರಿ



**ಬೆಂಗಳೂರು,** : ರಾಜ್ಯದಲ್ಲಿ ಪ್ರಸ್ತುತ ವಾರ್ಷಿಕ ಸಾಲಿನಲ್ಲಿ 37 ಲಕ್ಷ ರೈತರಿಗೆ 28 ಸಾವಿರ ಕೋಟಿ ರೂಪಾಯಿ ಸಾಲ ವಿತರಣೆ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಗುರುವಾರ ಗೃಹ ಕಚೇರಿ ಕೃಷ್ಣದಲ್ಲಿ ಸಹಕಾರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಇದೇ ವರ್ಷದ ಜುಲೈ ಅಂತ್ಯದವರೆಗೆ 8,69,284 ರೈತರಿಗೆ 8362.68 ಕೋಟಿ ರೂಪಾಯಿ ಸಾಲ ವಿತರಣೆ ಮಾಡಲಾಗಿದೆ. ಒಟ್ಟಾರೆ, ಪ್ರಸ್ತುತ ವಾರ್ಷಿಕ ಸಾಲಿನಲ್ಲಿ 37 ಲಕ್ಷ ರೈತರಿಗೆ 28 ಸಾವಿರ ಕೋಟಿ ರೂಪಾಯಿ ಸಾಲ ವಿತರಣೆ ಗುರಿ ಹೊಂದಲಾಗಿದೆ. ಈ ಬಗ್ಗೆ ರೈತರಿಗೆ ಸಕಾಲದಲ್ಲಿ ಕೃಷಿ ಸಾಲವನ್ನು ಸಿಗುವುದನ್ನು ಅಧಿಕಾರಿಗಳು ಖಾತ್ರಿಪಡಿಸಬೇಕು ಎಂದು ಸೂಚಿಸಿದರು.

ನಬಾರ್ಡ್ ರಿಯಾಯಿತಿ ಬಡ್ಡಿ ದರದ ಸಾಲದ ಮಿತಿಯನ್ನು ಹಿಂದಿನ ಸಾಲಿನಲ್ಲಿದ್ದ 5,600 ಕೋಟಿಗಳಿಂದ 3,236.11 ಕೋಟಿಗೆ ಅಂದರೆ ಶೇ.42.21ರಷ್ಟು ಕಡಿಮೆ ಮಾಡಿದೆ. ಆದರೂ ಸಾಲ ವಿತರಣೆಯಲ್ಲಿ ಶೇ.96.07 ರಷ್ಟು ಪ್ರಗತಿ ಸಾಧಿಸಲಾಗಿದೆ. 2024-25ನೆ ಸಾಲಿನಲ್ಲಿ 29,75,598 ರೈತರಿಗೆ 25,939.09 ಕೋಟಿ ಕೃಷಿ ಸಾಲ ವಿತರಣೆ ಮಾಡಲಾಗಿದೆ ಎಂದು ಅವರು ಉಲ್ಲೇಖಿಸಿದರು.

ರಾಜ್ಯದಲ್ಲಿ 28,516 ಸಹಕಾರ ಸಂಘಗಳು ಲಾಭದಲ್ಲಿದ್ದು, 14,670 ಸಂಘಗಳು ನಷ್ಟದಲ್ಲಿವೆ. ಸಾಲ ವಸೂಲಾತಿ ಸರಿಯಾಗಿ ಆಗದ ಕಾರಣ ಬಹುತೇಕ ಸಂಘಗಳು ನಷ್ಟದಲ್ಲಿದ್ದು, ಅಂತಹ ಸಾಲ ವಸೂಲಾತಿಗೆ ಕೈಗೊಂಡ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಬೇಕು. ಇದರಲ್ಲಿ 2,200 ಹಾಲು ಉತ್ಪಾದಕ ಸಂಘಗಳು ನಷ್ಟದಲ್ಲಿವೆ. ಹಾಲು ಉತ್ಪಾದಕ ಸಹಕಾರ ಸಂಘಗಳ ವೆಚ್ಚದ ಮೇಲೆ ನಿಗಾ ಇರಿಸಬೇಕು. ಹಾಲು ಉತ್ಪಾದನೆಯನ್ನು ಹೆಚ್ಚಿಸುವುದು ಸಂಘಗಳ ಕಾರ್ಯದರ್ಶಿಗಳ ಜವಾಬ್ದಾರಿ. ಹಾಲು ಉತ್ಪಾದಕ ಸಹಕಾರ ಸಂಘಗಳ ಪುನಶ್ಚೇತನಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಸಹಕಾರ ಸಂಘಗಳ ಹಿರಿಯ ನಿರೀಕ್ಷಕರ 126 ಹುದ್ದೆಗಳು ಹಾಗೂ ಸಹಕಾರ ಸಂಘಗಳ ನಿರೀಕ್ಷಕರ 403 ಹುದ್ದೆಗಳು ಖಾಲಿಯಿವೆ. ಹುದ್ದೆಗಳ ಭರ್ತಿಗೆ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದ ಅವರು, ಸಹಕಾರ ಸಂಘಗಳ ನಿಬಂಧಕರ ಕಚೇರಿಯ ವ್ಯಾಪ್ತಿಯ ಸೇವೆಗಳನ್ನು ಗಣಕೀಕರಿಸುವ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯದಲ್ಲಿ 7074 ಗಿರವಿದಾರ ಸಂಸ್ಥೆಗಳು ಹಾಗೂ 1,468 ಚೀಟಿ ಸಂಸ್ಥೆಗಳು ಕರ್ನಾಟಕ ಲೇವಾದೇವಿಗಾರರ ಅಧಿನಿಯಮ 1961, ಕರ್ನಾಟಕ ಗಿರವಿದಾರರ ಅಧಿನಿಯಮ 1961 ಮತ್ತು ಚೀಟಿನಿಧಿಗಳ ಅಧಿನಿಯಮ 1982ರಡಿ ನೋಂದಣಿಯಾಗಿವೆ. ಅನಧಿಕೃತವಾಗಿ ಕಾರ್ಯಾಚರಿಸುತ್ತಿರುವ ಗಿರವಿದಾರ ಸಂಸ್ಥೆಗಳು ಹಾಗೂ ಚೀಟಿ ಸಂಸ್ಥೆಗಳ ಮೇಲೆ ನಿಗಾ ಇರಿಸಬೇಕು ಎಂದು ಮುಖ್ಯಮಂತ್ರಿ ಹೇಳಿದರು.

ರಾಜ್ಯದಲ್ಲಿ ಸಹಕಾರಿ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುವುದು. ಸಹಕಾರ ಇಲಾಖೆ ಅಧಿಕಾರಿಗಳು ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದೂ ಅಧಿಕಾರಿಗಳಿಗೆ ಸಿದ್ದರಾಮಯ್ಯ ಸೂಚನೆ ನೀಡಿದರು.

ಸಭೆಯಲ್ಲಿ ಮುಖ್ಯಮಂತ್ರಿ ಅವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ, ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಕಾನೂನು ಸಲಹೆಗಾರ ಎ. ಎಸ್.ಪೊನ್ನಣ್ಣ, ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಅಂಜುಮ್ ಪರ್ವೇಝ್ ಸೇರಿದಂತೆ ಪ್ರಮುಖರಿದ್ದರು.

## ಅಕ್ರಮ ಹಣ ವರ್ಗಾವಣೆ ಪ್ರಕರಣ

### ಶಾಸಕ ವೀರೇಂದ್ರ ಪಪ್ಪಿ ಮತ್ತೆ 6 ದಿನ ಈ.ಡಿ. ವಶಕ್ಕೆ



**ಬೆಂಗಳೂರು,** : ಅಕ್ರಮ ಹಣ ವರ್ಗಾವಣೆ ಹಾಗೂ ಆನ್‌ಲೈನ್ ಗೇಮಿಂಗ್ ಆಯಪ್‌ಗಳಿಗೆ ಹಣ ಪೂರೈಕೆ ಆರೋಪದಡಿ ಬಂಧನಕ್ಕೊಳಗಾಗಿದ್ದ ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿ ಅವರನ್ನು ಮತ್ತೆ 6 ದಿನಗಳವರೆಗೆ ಜಾರಿ ನಿರ್ದೇಶನಾಲಯ(ಈ.ಡಿ.)ದ ಅಧಿಕಾರಿಗಳ ವಶಕ್ಕೆ ನೀಡಿ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಗುರುವಾರ ಆದೇಶಿಸಿದೆ.

ಕಸ್ಟಡಿ ಅವಧಿ ಅಂತ್ಯಗೊಂಡ ಹಿನ್ನೆಲೆ ಆ.28ರಂದು ಬೆಂಗಳೂರಿನ ಶಾಂತಿನಗರದಲ್ಲಿರುವ ಈ.ಡಿ. ಕಚೇರಿಯಿಂದ ವೀರೇಂದ್ರ ಪಪ್ಪಿ ಅವರನ್ನು ಅಧಿಕಾರಿಗಳು ನ್ಯಾಯಾಲಯಕ್ಕೆ ಹಾಜರುಪಡಿಸಿದರು.

ಅಕ್ರಮ ಹಣ ವರ್ಗಾವಣೆ ಹಾಗೂ ಆನ್‌ಲೈನ್ ಗೇಮಿಂಗ್ ಆ?ಯಪ್‌ಗಳಿಗೆ ಹಣ ಪೂರೈಕೆ ಪ್ರಕರಣ ಸಂಬಂಧ ವಕೀಲರ ವಾದ ಪ್ರತಿವಾದಗಳನ್ನು ಆಲಿಸಿದ ಬಳಿಕ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶರು ಶಾಸಕ ಪಪ್ಪಿ ಅವರ ಕಸ್ಟಡಿ ವಿಸ್ತರಣೆ ಮಾಡಿ ಆದೇಶಿಸಿದರು.

ಅಲ್ಲದೇ, ಪಪ್ಪಿ ಅವರಿಗೆ 24 ಗಂಟೆಗಳಿಗೊಮ್ಮೆ ವೈದ್ಯಕೀಯ ತಪಾಸಣೆ ಮಾಡಿಸಬೇಕು. ಇದರೊಂದಿಗೆ ಶುದ್ಧವಾದ ಆಹಾರ, ನೀರು, ಅಗತ್ಯ ಓಷಧಿಗಳನ್ನು ನೀಡಬೇಕು. ಆರೋಪಿಗೆ ಸ್ವಲ್ಪ ವಿಶ್ರಾಂತಿ ಕೊಟ್ಟು ವಿಚಾರಣೆ ಮಾಡಬೇಕು. ಪ್ರತಿ ದಿನ 30 ನಿಮಿಷಗಳ ಕಾಲ ವಕೀಲರ ಭೇಟಿಗೆ ಅವಕಾಶ ನೀಡಬೇಕು, ರಾತ್ರಿ 9 ಗಂಟೆ ನಂತರ ವಿಚಾರಣೆ ನಡೆಸಬಾರದು ಎಂದು ನ್ಯಾಯಾಧೀಶಕರು ಈ.ಡಿ. ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ.ಡಿ. ಪರ ವಕೀಲ ಪ್ರಮೋದ್ ಚಂದ್ರ ವಾದ ಮಂಡಿಸಿದರೆ, ಆರೋಪಿ ವೀರೇಂದ್ರ ಪಪ್ಪಿ ಪರ ಹಿರಿಯ ವಕೀಲ ಕಿರಣ್ ಜವಳಿ ಹಾಗೂ ಚಂದ್ರಮೌಳಿ ವಾದ ಮಂಡಿಸಿದರು.


ಏನಿದು ಪ್ರಕರಣ?: ಆನ್‌ಲೈನ್ ಗೇಮಿಂಗ್ ಆಯಪ್‌ಗಳಿಗೆ ಅಕ್ರಮವಾಗಿ ಹಣ ವರ್ಗಾವಣೆ, ಅಕ್ರಮ ಆಸ್ತಿ ಮತ್ತು ತೆರಿಗೆ ವಂಚನೆ ಆರೋಪ ಶಾಸಕ ವೀರೇಂದ್ರ ಪಪ್ಪಿ ವಿರುದ್ಧ ಕೇಳಿಬಂದಿತ್ತು. ಈ ಕುರಿತು ಗೋವಾದಲ್ಲಿ 2 ಪ್ರಕರಣ ದಾಖಲಾಗಿತ್ತು. ಈ ಸಂಬಂಧವಾಗಿ ಈ.ಡಿ. ಶೋಧ ನಡೆಸಿ ನಗದು, ಚಿನ್ನಾಭರಣ ವಶಪಡಿಸಿಕೊಂಡು ಸಿಕ್ಕಿಂನಲ್ಲಿ ಪಪ್ಪಿ ಅವರನ್ನು ಬಂಧಿಸಿತ್ತು.

## ಅಪರಿಚಿತ ಮಹಿಳೆ ಸಾವು

ಹಾವೇರಿ. : ಹುಬ್ಬಳ್ಳಿ ರೈಲ್ವೆ ನಿಲ್ದಾಣದ ವೇದಿಕೆ ನಂ.6ರಲ್ಲಿ 50 ರಿಂದ 55 ವರ್ಷದ ಅಸ್ವಸ್ಥಗೊಂಡ ಅಪರಿಚಿತ ಮಹಿಳೆಯನ್ನು ಚಿಕಿತ್ಸೆಗೆಂದು ಹುಬ್ಬಳ್ಳಿ ಕಿಮ್ಸ್‌ಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೇ ಮಹಿಳೆ ಮೃತಪಟ್ಟಿದ್ದು, ಮೃತ ಮಹಿಳೆ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ಮೃತ ವ್ಯಕ್ತಿಯು 5 ಅಡಿ ಎತ್ತರ, ಗೋದಿ ಮೈಬಣ್ಣ, ಕೋಲು ಮುಖ, ತೆಳ್ಳನೆ ಶರೀರ ಹೊಂದಿದ್ದು, ಬಿಳಿ ಬಣ್ಣದ ಡೈಪರ್ ಧರಿಸಿದ್ದು, ಕೈಗಳಿಗೆ ಮತ್ತು ಕಾಲುಗಳಿಗೆ ಬಿಳಿ ಬಟ್ಟೆ ಕಟ್ಟಲಾಗಿದೆ. ಈ ವ್ಮೃತ ಮಹಿಳೆಯ ವಾರಸುದಾರರು ಇದ್ದಲ್ಲಿ ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣೆ ದೂರವಾಣಿ 0838-2384751 ಹಾಗೂ ಮೊ.9480802126 ಸಂಪರ್ಕಿಸಬಹುದೆಂದು ಹುಬ್ಬಳ್ಳಿ ರೈಲ್ವೆ ಪೊಲೀಸ್ ಠಾಣೆ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಹದಿಂದ ಜಮೀನಿಗೆ ನೀರು ಪರಿಹಾರಕ್ಕೆ ರೈತರಿಂದ ಆಗ್ರಹ



**ಜಮಖಂಡಿ:** ತಾಲೂಕಿನಲ್ಲಿ ಧಾರಕಾರವಾಗಿ ಸುರಿದ ಮಳೆಯಿಂದ ಮತ್ತು ಕೃಷ್ಣಾನದಿ ಪ್ರವಾಹದಿಂದ ರೈತರ ಜಮೀನುಗಳಿಗೆ ನೀರು ನುಗ್ಗಿರುವ ಹಿನ್ನಲೆಯಲ್ಲಿ ರೈತರ ಪರಿಹಾರ ನೀಡಬೇಕೆಂದು ತಾಲೂಕಿನ ರೈತ ಸಂಘ ಮತ್ತು ಕಬ್ಬು ಬೆಳೆಗಾರರ ಸಂಘದ ಸದಸ್ಯರು ಪ್ರತಿಭಟನೆ ನಡೆಸುವ ಮೂಲಕ ಉಪವಿಭಾಗಾಧಿಕಾರಿಗಳಿಗೆ ಶ್ವೇತಾ ಬೀಡಕರ ಅವರಿಗೆ ಮನವಿ ಸಲ್ಲಿಸಿದರು.

ನಗರದ ತಾಲೂಕಾಡಳಿತ ಸೌಧ ಆವರಣದಲ್ಲಿ ರೈತಮುಖಂಡರು ಮಾತನಾಡಿ, ಕೃಷ್ಣಾನದಿಗೆ ಪ್ರವಾಹ ಎದುರಾಗಿದ್ದ ಸಂದರ್ಭದಲ್ಲಿ ಪರಿಹಾರ ವಿತರಣೆ ಅನ್ಯಾಯವಾಗುತ್ತಿದ್ದು, ಹಲವು ಬಾರಿ ಅಧಿಕಾರಿಗಳ ವಿರುದ್ಧ ಖಂಡನೆ ಮಾಡಲಾಗಿದೆ. ಈ ವರ್ಷ ಕೂಡ ಕೃಷ್ಣಾನದಿ ಪ್ರವಾಹದಿಂದ ನೂರಾರು ಎಕರೆ ಜಮೀನುಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ನೀರು ನುಗ್ಗಿದೆ. ಉಪವಿಭಾಗಾಧಿಕಾರಿಗಳ ನೇತೃತ್ವದಲ್ಲಿ ತಂಡ ರಚಿಸುವ ಮೂಲಕ ಪಾರದರ್ಶಕ ವಾಗಿ ಸರ್ವೇ ಮಾಡಿಸುವ ಮೂಲಕ ರೈತರ ಜಮೀನುಗಳಿಗೆ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು.

ಪ್ರವಾಹದಲ್ಲಿ ಬೆಳೆಗಳಾದ ಕಬ್ಬು, ಉದ್ದು, ಹೆಸರು, ಮೆಕ್ಕೆಜೋಳ, ಶೇಂಗಾ, ಉಳ್ಳಾಗಡ್ಡಿ ಸಹಿತ ತೋಟಗಾರಿಕೆ ಬೆಳೆಗಳು ನೀರಿನಲ್ಲಿ ಮುಳಗಿದ್ದು ಅಂದಾಜು ಒಂದು ಎಕರೆಗೆ ಕನಿಷ್ಠ 30 ರಿಂದ 40 ಸಾವಿರ ಪರಿಹಾರ ಧನ ನೀಡಬೇಕು. ರೈತರ ಸಮಸ್ಯೆಗಳಿಗೆ ತಾಲೂಕಾಡಳಿತ ಶೀಘ್ರದಲ್ಲಿ ಸ್ಪಂದಿಸುವ ಮೂಲಕ ಫಲಾನುಭವಿಗಳ ರೈತರಿಗೆ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕಲ್ಲಪ್ಪ ಬಿರಾದಾರ, ರಾಜು ನದಾಫ, ಶ್ರೀಶೈಲ ಭೂಮಾರ, ಬಸವರಾಜ ಬಿರಾದಾರ, ಮಹಾಬಲ ನ್ಯಾಮಗೌಡ, ಹನಮಂತ ಬಿರಾದಾರ, ಹನಮಂತ ಪಾಟೀಲ, ಸಿದ್ದನಗೌಡ ಪಾಟೀಲ, ಬಾಹುಬಲಿ ನ್ಯಾಮಗೌಡ, ನಾಗಪ್ಪ ಕುರಣಿ ಸಹಿತ ವಿವಿಧ ಗ್ರಾಮಗಳ ರೈತರು ಪಾಲ್ಗೊಂಡಿದ್ದರು.

## ಮುಧೋಳ: ಅಮೆರಿಕದಲ್ಲಿ ಕುಳಿತು ಮನೆ ಕಳ್ಳತನ ತಪ್ಪಿಸಿದ ಯುವತಿ

**ಬಾಗಲಕೋಟೆ:** ಟೆಕ್ಕಿ ಯುವತಿಯೊಬ್ಬರು ಅಮೆರಿಕದಲ್ಲಿ ಕುಳಿತೇ ತನ್ನ ಮನೆಯಲ್ಲಿ ನಡೆಯಬಹುದಾದ ಕಳ್ಳತನವನ್ನು ತಪ್ಪಿಸಿದ್ದಾರೆ.

ಮುಧೋಳ ನಗರದ ಸಿದ್ರಾಮೇಶ್ವರ ಕಾಲೋನಿಯಲ್ಲಿ ನೆಲೆಸಿರುವ ನಿವೃತ್ತ ಎಂಜಿನಿಯರ್ ಹನಮಂತಗೌಡ ಅವರ ಪುತ್ರಿ ಶೃತಿ ಅಮೆರಿಕದಲ್ಲಿ ಉದ್ಯೋಗದಲ್ಲಿದ್ದಾರೆ. ವಿದೇಶದಲ್ಲಿದ್ದರೂ ಸಮಯಪ್ರಜ್ಞೆ ಮೆರೆಯುವ ಮೂಲಕ ಮನೆಗೆ ನುಗ್ಗಿದ್ದ ಕಳ್ಳರನ್ನು ಓಡಿಸುವಲ್ಲಿ ಶೃತಿ ಯಶಸ್ವಿಯಾಗಿದ್ದಾರೆ.

ಕೆಲ ವರ್ಷಗಳ ಹಿಂದೆ ಸ್ವದೇಶ ಆಗಮಿಸಿದ್ದಾಗ ಶೃತಿ ಮನೆಗೆ ಸಿಸಿ ಕ್ಯಾಮೆರಾ ಅಳವಡಿಸಿದ್ದರು. ಅಳವಡಿಸಿದ್ದು ಮಾತ್ರವಲ್ಲ ಅದರ ದೃಶ್ಯ ತನ್ನ ಮೊಬೈಲಿಗೆ ಬರುವಂತೆ ಸಿಂಕ್ ಮಾಡಿದ್ದರು. ಮಂಗಳವಾರ ತಡರಾತ್ರಿ 1 ರಿಂದ 2 ಗಂಟೆಯ ಮಧ್ಯೆ ಚಡ್ಡಿ ಗ್ಯಾಂಗ್ ಇಬ್ಬರು ಹನಮಂತಗೌಡ ಸಂಕಪ್ಪನವರ್ ಮನೆಗೆ ನುಗ್ಗಿದ್ದಾರೆ. ಮನೆಗೆ ಸಿಸಿಟಿವಿ ಕ್ಯಾಮರಾ ಹಾಕಿಸಿದ್ದಾರೆ. ಹನುಮಂತಗೌಡರ ಅಮೆರಿಕದಲ್ಲಿರುವ ಪುತ್ರಿ ಶ್ರುತಿ ತನ್ನ ಮೊಬೈಲ್‌ಗೆ ಸಿಸಿ ಕ್ಯಾಮರಾ ಕನೆಕ್ಟ್ ಮಾಡಿಕೊಂಡ್ದು, ಅಲ್ಲಿಂದಲೇ ಮನೆಯವರನ್ನು ಗಮನಿಸುತ್ತಿದ್ದರು ಮುಧೋಳದಲ್ಲಿ ಮಧ್ಯರಾತ್ರಿ ಆಗಿದ್ದರೆ ಅಮೆರಿಕದಲ್ಲಿ ಮಧಾಹ್ನದ 3:30ರ ಸಮಯವದು. ಹೀಗೆ ಮೊಬೈಲ್ ನೋಡುತ್ತಿದ್ದಾಗ ಮನೆಗೆ ಕಳ್ಳರು ನುಗ್ಗಿದ ದೃಶ್ಯವನ್ನು ನೋಡಿ ಕೂಡಲೇ ಶೃತಿ ಪೋಷಕರಿಗೆ ಕರೆ ಮಾಡಿದ್ದಾರೆ. ತಕ್ಷಣ ಎಚ್ಚೆತ್ತ ಪೋಷಕರು ಬಾಗಿಲು ತೆರೆಯದೇ ಮನೆಯ ಎಲ್ಲಾ ದೀಪ ಆನ್ ಮಾಡಿ ಕೂಗಾಡಿದ್ದಾರೆ. ದಿಢೀರ್ ಮನೆಯ ಲೈಟ್ ಆನ್ ಆಗಿದ್ದನ್ನು ಕಂಡು ಕಳ್ಳರು ಶಾಕ್‌ಗೆ ಒಳಗಾಗಿ ಸ್ಥಳದಿಂದ ಪರಾರಿಯಾಗಿದ್ದಾರೆ. ಎಚ್ಚೆತ್ತ ಹನುಮಂತಗೌಡ, ಮನೆ ಬಾಗಿಲು ತೆರೆದಾಗ ಚಡ್ಡಿ ಗ್ಯಾಂಗ್ ಅಲ್ಲಿಂದ ಕಾಲ್ಕಿತ್ತಿದೆ. ಒಬ್ಬನ ಮುಖಕ್ಕೆ ಮಂಕಿ ಕ್ಯಾಪ್, ಮತ್ತೊಬ್ಬನ ಮುಖದಲ್ಲಿ ಮಾಸ್ಕ್, ಮೈಮೇಲೆ ಶರ್ಟ್ ಇದೆ ಆದರೆ ಪ್ಯಾಂಟೇ ಇಲ್ಲ. ಇರೋದು ಬರೀ ಚಡ್ಡಿ ಧರಿಸಿದ್ದರು. ಸದ್ಯ, ಅಮೆರಿಕದಲ್ಲಿ ನೆಲೆಸಿದ್ದ ಸಾಫ್ಟ್‌ವೇರ್ ಎಂಜಿನಿಯರ್ ಶ್ರುತಿ ಸಮಯಪ್ರಜ್ಞೆಯಿಂದ ಮನೆ ಕಳ್ಳತನ ತಪ್ಪಿದೆ.

ಇದೀಗ ಚಡ್ಡಿ ಗ್ಯಾಂಗ್ ಬಗ್ಗೆ ಕೇಸ್ ದಾಖಲಿಸಿಕೊಂಡಿರುವ ಮುಧೋಳ ಪೊಲೀಸರು, ತನಿಖೆ ಆರಂಭಿಸಿದ್ದಾರೆ. ಒಟ್ಟಿನಲ್ಲಿ ಮುಧೋಳ ಕಳ್ಳತನ ಪ್ರಕರಣ ಅಮೆರಿಕದಿಂದ ಬಯಲಾಗಿದ್ದು, ಪೊಲೀಸರು ಚಡ್ಡಿ ಗ್ಯಾಂಗ್ ಅನ್ನು ಆದಷ್ಟು ಬೇಗ ಹಿಡಿದು, ಮುಂದೆ ಆಗಬಹುದಾದ ಇನ್ನಷ್ಟು ಕಳ್ಳತನ ಪ್ರಕರಣಗಳನ್ನು ತಡೆಯಬೇಕಾಗಿದೆ.

## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ

### ಜಾತಿಗಳು ಬಿಟ್ಟು ಹೋಗಿದ್ದರೆ ಮಾಹಿತಿ ನೀಡಲು ಸೆ.1 ರವರೆಗೆ ಅವಧಿ ವಿಸ್ತರಣೆ

**ಬೆಂಗಳೂರು,** ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರಕಾರದ ಆದೇಶಾನುಸಾರ ಕೈಗೊಂಡಿದೆ.

ಈ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳು ಮತ್ತು ಇತರೆ ಜಾತಿ/ಉಪಜಾತಿಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ಆ.22ರಂದು ಮಾಧ್ಯಮಗಳಿಗೆ ಸುದ್ದಿ ಬಿಡುಗಡೆ ಮಾಡಿ ಯಾವುದೇ ಜಾತಿ/ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆಗಳು ಇದ್ದಲ್ಲಿ, 7 ದಿನಗಳ ಒಳಗೆ ನೀಡಲು ಕೋರಲಾಗಿತ್ತು.

ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಈ ಅವಧಿಯನ್ನು ವಿಸ್ತರಿಸಲು ಕೋರಿರುವ ಕಾರಣ, ಈ ಬಗ್ಗೆ ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ಸೆ.1.ರ ಸಂಜೆ 5ಗಂಟೆಯವರೆಗೆ ವಿಸ್ತರಿಸಲಾಗಿದೆ. ಸಂಗ್ರಹಿಸಲಾದ ಜಾತಿ/ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು. ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು 'ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ, ಬೆಂಗಳೂರು' ಅಥವಾ ಇ-ಮೇಲ್ ವಿಳಾಸ **kscbcbgmail.com** ಗೆ ಕಳುಹಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ದೂರವಾಣಿ ಸಂಖ್ಯೆ 080-29506668 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಒಳಮೀಸಲಾತಿ ಹಂಚಿಕೆ ವಿಚಾರದಲ್ಲಿ ಸರಕಾರದ ತಾರತಮ್ಮಯವನ್ನು ಖಂಡಿಸಿ : ಬೃಹತ್ ಪ್ರತಿಭಟನೆ



**ಮುಧೋಳ:** ಒಳಮೀಸಲಾತಿ ಹಂಚಿಕೆ ವಿಚಾರದಲ್ಲಿ ಸರಕಾರದ ತಾರತಮ್ಮಯವನ್ನು ಖಂಡಿಸಿ ಹಾಗು 73 ಸಮುದಾಯಗಳಿಗೆ ನ್ಯಾಯವನ್ನು ಒದಗಿಸುವ ಮತ್ತು ಮೀಸಲಾತಿ ಪ್ರಮಾಣವನ್ನು ಶೇ.7.ರಷ್ಟು ಹೆಚ್ಚಿಸಬೇಕು ಎಂದು ಆಗ್ರಹಿಸಿ ಪರಿಶಿಷ್ಟ ಜಾತಿಯ ಸ್ಪೃಶ್ಯರು ಬೃಹತ್ ಪ್ರತಿಭಟನೆ ನಡೆಸಿದರು.

ಗುರುವಾರ ಒಳಮೀಸಲಾತಿ 63 ಸಮುದಾಯಗಳ ಒಕ್ಕೂಟದವರು ನೂರಾರು ಸಂಖ್ಯೆಯಲ್ಲಿ ನಗರದ ಅಂಬೇಡ್ಕರ್ ವೃತ್ತದಿಂದ ಶಿವಾಜಿ, ಗಡದನ್ನವರ ಹಾಗು ರನ್ನ ವೃತ್ತಗಳ ಮೂಲಕ ತಹಸೀಲ್ದಾರರ ಕಚೇರಿಯವರೆಗೆ ಸರಕಾರದ ವಿರುದ್ಧ ಘೋಷನೆ ಮೊಳಗಿಸುತ್ತ ಬೃಹತ್ ಪ್ರತಿಭಟನೆ ನಡೆಸಿ ಸಿ.ಎಂ.ಗೆ ಬರೆದ ಮನವಿ ಪತ್ರವನ್ನು ಉಪತಹಸೀಲ್ದಾರ ಆರ್.ಎ. ನಾಯಕರಿಗೆ ಸಲ್ಲಿಸಿದರು.

ಬೇಡಿಕೆಗಳು: ನ್ಯಾ.ಡಾ. ನಾಗಮೋದಾಸ ಅವರು ನೀಡಿದ ಜಾರಿ ಸಮೀಕ್ಷಾ ವರದಿಯ ಮೀಸಲಾತಿ ವಂಚಿತರು ಶಿರ್ಷಿಕೆಯ 231 ಪುಟ ಸಂಖ್ಯೆಯಲ್ಲಿ ದಾಖಲಿದೆ. ಸಾಮಾಜಿಕ ನ್ಯಾಯದಡಿ ನಮ್ಮ ಹಕ್ಕು, ಒಳಮೀಸಲಾತಿಯಲ್ಲಿ ನಮಗೆ ಅನ್ಯಾಯವಾಗಿದೆ, ಇಲ್ಲಿಯವರೆಗೆ ನಾವು ಅಭ್ಯುದಯ ಬಯಸುತ್ತಾರೆ ಎಂದು ಭಾವಿಸಿದ್ದೆವೆ ಆದರೆ ಆಗಲಿಲ್ಲ.

ಪ-ಜಾ. ಜನರನ್ನು ಸ್ಪೃಶ್ಯರು(ಟಚೆಬಲ್)ಅಂತಾ ಭಾವಿಸಿ ಪ್ರತ್ಯೇಕ ಕೆಟೆಗೆರಿ ರಚಿಸಿ ಮೀಸಲಾತಿ ಪ್ರಮಾಣವನ್ನು ಕಡಿಮೆಗೊಳಿಸಿರುವದು ನಮಗೆ ಮಾಡಿ ದೊಡ್ಡ ಅನ್ಯಾಯವಾಗಿದೆ. ಕಾರಣ ಸ್ಪೃಶ್ಯರು ಅಂತಾ ಉಲ್ಲೇಖಿಸಿರುವದನ್ನು ಕೂಡಲೇ ಹಿಂದಕ್ಕೆ ಪಡೆಯಬೇಕು ಮೀಸಲಾತಿ ಹಂಚಿಕೆಯಲ್ಲಿ ನಮ್ಮ ಜನಾಂಗಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಿ ಇದರ ಪ್ರಮಾಣವನ್ನು ಶೇ.7.ರಷ್ಟು ಹೆಚ್ಚಿಸಬೇಕು. ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ರಂಗದಲ್ಲಿ ತೀರಾ ಹಿಂದು ಆದವರಿಗೆ ಆಗಿರುವ ಅನ್ಯಾಯವನ್ನು ಅಪಮಾನವನ್ನು ಹಾಗು ದೌರ್ಜನ್ಯವನ್ನು ಹೇಳಲಿಕ್ಕೂ ಆಗದೇ ಸಹಿಸಿಕೊಂಡು ನೊಂದಿದ್ದೆವೆ. ಇದು ಮುಂದುವರೆಬಾರದು ಎಂದು ವಿನಂತಿಸಿಕೊಳ್ಳುತ್ತೆವೆ.

ಮಾನ್ಯರ ಸಮಗ್ರ ಸಮೀಕ್ಷೆಯ ದತ್ತಾಂಶದ ಪ್ರಕಾರ ತಾರತಮ್ಯಕ್ಕೆ ಜಾತಿಗಳು ತಲೆಬರಹದಲ್ಲಿ ಪೇಜ್ ನಂ. 231.ರಲ್ಲಿ ಶೇ.75. ಜನರು ಇಂದಿಗೂ ಸಹ ಅಸ್ಪೃಶ್ಯತೆಗೆ ಒಳಗಾಗಿರುವುದು ಕಂಡುಬರುತ್ತದೆ. ಬಲತ್ಕಾರ ಮತ್ತು ದೌರ್ಜನ್ಯಗಳ ಹೆಸರಿನಲ್ಲಿ ತಾರತಮ್ಯ ಜಾರಿಯಲ್ಲಿದೆ ಅಂತಾ ವರದಿಯಲ್ಲಿ ಪ್ರತಿಪಾದಿಸಿದ್ದಾರೆ. ಈ ಅಂಶ ಯಥಾವತ್ತಾಗಿ ಜಾರಿಗೊಂಡರೆ ಭವಿಷ್ಯದಲ್ಲಿ ಸಾಮಾಜಿಕ ನ್ಯಾಯ ಸಿಗಬಹುದಾಗಿದೆ ನಂಬಿದವರಿ ಭಾರಿ ಅನ್ಯಾಯವಾಗಿದೆ. ಕಾರಣ ಮತ್ತೊಮ್ಮೆ ಪರಿಶಿಲಿಸಿ 63.ಜಾತಿ ಜನರನ್ನು ಪ.ಜಾ. ಸ್ಪೃಶ್ಯರು ಇದ್ದಿದ್ದು ರದ್ದು ಪಡಿಸಿ ಅಸ್ಪೃಶ್ಯರು ಅಂತಾ ದಾಖಲಿಸಬೇಕು ಅದರನ್ವಯ ಒಳಮೀಸಲಾತಿ ಶೇ.7.ರಷ್ಟು ಪ್ರಮಾಣ ಹೆಚ್ಚಿಸಿ ಆಗಿರುವ ಅನ್ಯಾಯ ಸರಿಗೋಗಿಸಲು ವಿನಂತಿಸುತ್ತೇವೆ. ಇಲ್ಲದಿದ್ದರೆ ಅನಿರ್ದಿಷ್ಟಾವಧಿಯ ಹೋರಾಟ ಮುಂದುವರೆಸುತ್ತೆವೆ. ಮುಂದೆ ಆಗುವ ಅನಾಹುತಗಳಿಗೆ ಸರಕಾರವೇ ಹೊಣೆ ಆಗುತ್ತದೆ ಎಂದು ಒಕ್ಕೂದವರು ಮನವಿಯಲ್ಲಿ ತಿಳಿಸಿದ್ದಾರೆ.

**ವಿಶೇಷತೆ** : ಪ್ರತಿಭಟನೆಯಲ್ಲಿ ಲಂಬಾಣಿ ಜನಾಂಗದವರು ಕಟ್ಟಿಗೆ, ತಮ್ಮದೇ ಆದ ವೇಷಭೂಷಣ ಜತೆ ನೃತ್ಯ, ವಡ್ಡರ ಸಮುದಾಯದವರು, ಕಲ್ಲು ಮತ್ತು ಸುತ್ತಿಗೆ ಹಾರಿ, ಭಜಂತ್ರಿ ಸಮಾಜದವರು ಪುಟ್ಟಿ, ಹಗ್ಗ ಇತರೆ ಸಾಮಗ್ರಿ ಹೀಗೆ ವಿವಿಧ ಸಮುದಾಯದವರು ತಮ್ಮ ಕಸುಬುಗಳ ಸಲಕರಣೆಗಳು ಮೆರವಣಿಗೆಯಲ್ಲಿ ವಿಶೇಷತೆ ಕಂಡು ಬಂದಿತು.

ಬಂಜಾರ ಸಮಾಜದ ಗುರು ಸೋಮಲಿಂಗ ಮಹಾರಾಜರು, ಮುಖಂಡ ಶಂಕರ ನಾಯಕ, ಗಣೇಶ ರಾಠೋಡ, ವಡ್ಡರ ಸಮಾಜದ ಪ್ರಮುಖ ತಿರುಪತಿ ಬಂಡಿವಡ್ಡರ, ಕಳ್ಳೊಳೆಪ್ಪ ಶಿ. ಬಂಡಿವಡ್ಡರ, ಸೈದು ಬಂಡಿವಡ್ಡರ, ಹಣಮಂತ ಭಜಂತ್ರಿ, ಶಂಕರ ಭಜಂತ್ರಿ, ಭೀಮಶಿ ಕೊರವರ, ಬಸು ಚವ್ಹಾಣ, ಕುಮಾರ ಪಮ್ಮಾರ, ಕೃಷ್ಣಾ ಕಾರಭಾರಿ, ಕರಿಯಪ್ಪ ಅಂಗಡಿ, ಓಂಪ್ರಕಾಶ ನಾಯಕ, ನಾಗಪ್ಪ ಭಜಂತ್ರಿ, ರಮೇಶ ಭಜಂತ್ರಿ ಇತರರಿದ್ದರು.

## ವೈಷ್ಣೋ ದೇವಿ ದೇಗುಲದ ಬಳಿ ಭೂ ಕುಸಿತ ದುರಂತದಲ್ಲಿ 41ಮಂದಿ ಸಾವು



**ಶ್ರೀನಗರ,** ಜಮು ಮತ್ತು ಕಾಶೀರದಲ್ಲಿ ನಿರಂತರ ಮಳೆಯಿಂದಾಗಿ ಭೂಕುಸಿತ ಉಂಟಾಗಿ ಹಲವೆಡೆ ಭಾರೀ ಹಾನಿ ಸಂಭವಿಸಿದ್ದು, ಕನಿಷ್ಟಪಕ್ಷ 41 ಮಂದಿ ಸಾವನ್ನಪ್ಪಿ, 20 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಅವಶೇಷಗಳಡಿ ಮತ್ತಷ್ಟು ಜನ ಸಿಲುಕಿರುವ ಶಂಕೆಯಿದ್ದು, ರಕ್ಷಣಾ ಕಾರ್ಯ ಮುಂದುವರಿದೆ.

ವೈಷ್ಣೋದೇವಿ ದೇಗುಲಕ್ಕೆ ಹೋಗುವ ಮಾರ್ಗದ ಅರ್ಧಕುವರಿಯಲ್ಲಿರುವ ಇಂದಪ್ರಸ್ಥ ಭೋಜನಾಲಯದ ಬಳಿ ಭೂ ಕುಸಿತ ಉಂಟಾಗಿದ್ದರೆ, ದೋಡಾ ಜಿಲ್ಲೆಯಲ್ಲಿ ಮೇಘಸ್ಫೋಟ ಸಂಭವಿಸಿ ನಾಲ್ವರು ಮೃತರಾಗಿದ್ದಾರೆ.

ಕೇಂದ್ರಾಡಳಿತ ಪ್ರದೇಶದ ಹೆಚ್ಚಿನ ಪ್ರದೇಶಗಳಲ್ಲಿ ಭಾರೀ ಮಳೆಯಾಗುತ್ತಿದ್ದು, ಹಲವಾರು ಸ್ಥಳಗಳಲ್ಲಿ ಪ್ರವಾಹ ಉಂಟಾಗಿದೆ. ಕತ್ರಾದ ವೈಷ್ಣೋದೇವಿ ದೇವಾಲಯದ ಬಳಿ ಭಾರೀ ಮಳೆಯಿಂದಾಗಿ ಉಂಟಾದ ಭೂಕುಸಿತದಲ್ಲಿ 41 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಕನಿಷ್ಠ 20 ಜನರು ಗಾಯಗೊಂಡಿದ್ದಾರೆ. ಅವರೆಲ್ಲರನ್ನೂ ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ.

ನೂರಾರು ಮನೆಗಳು, ಸೇತುವೆಗಳು, ನೀರಿನಲ್ಲಿ ಕೊಚ್ಚಿ ಹೋಗಿವೆ. ಎಲ್ಲಾ ಜಲಾಶಯಗಳು ತುಂಬಿ ತುಳುಕುತ್ತಿದ್ದು ನದಿಗಳಿಗೆ ನೀರು ಬಿಡಲಾಗಿದೆ. ನದಿಪಾತ್ರಗಳು ಮುಳುಗಿದ್ದು ಜನಜೀವನ ಅಸ್ತವ್ಯಸ್ತವಾಗಿದೆ. ಮೊಬೈಲ್ ಟವರ್‌ಗಳು ಮತ್ತು ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದರಿಂದ ಮೂಲಸೌಕರ್ಯ ತೀವ್ರವಾಗಿ ಹಾನಿಗೊಳಗಾಗಿದೆ.

ಪಂಜಾಬ್‌ನ ಪ್ರವಾಹ ಪೀಡಿತ ಗ್ರಾಮದಿಂದ 22 ಸಿಆರ್‌ಪಿಎಫ್ ಸಿಬ್ಬಂದಿ ಮತ್ತು ಮೂವರು ನಾಗರಿಕರನ್ನು ಸೇನಾ ಹೆಲಿಕಾಪ್ಟರ್‌ನಲ್ಲಿ ರಕ್ಷಣೆ ಮಾಡಲಾಗಿದೆ. ಸೇನಾ ಹೆಲಿಕಾಪ್ಟರ್ ತೆರಳುತ್ತಿದ್ದಂತೆ ಇತ್ತ ಯೋಧರು ಆಶ್ರಯ ಪಡೆದಿದ್ದ ಕಟ್ಟಡ ಕೆಲವೇ ಕ್ಷಣಗಳಲ್ಲಿ ಕುಸಿದುಬಿದ್ದಿದೆ.

ಗುರುದಾಸ್‌ಪುರದ ಕರ್ತಾರಪುರ ಕಾರಿಡಾರ್ ಮುಳುಗಡೆಯಾಗಿದೆ. ಹಿಮಾಚಲಪ್ರದೇಶದ ಮಂಡಿ ಜಿಲ್ಲೆಯಲ್ಲಿ ಬಿಯಾಸ್ ನದಿಯ ಪ್ರವಾಹದ ಆತಂಕ ತರಿಸಿದೆ. ಉತ್ತರಾಖಂಡ್‌ನಲ್ಲಿ ಜೀವಗಂಗೆ, ಯಮುನೆಯ ರುದ್ರತಾಂಡವ ಹೇಳತೀರದಾಗಿದೆ.

ಜಮು ಮತ್ತು ಕಾಶೀರದ ಸಿಎಂ ಒಮರ್ ಅಬ್ದುಲ್ಲಾ ಶ್ರೀನಗರದಿಂದ ಜಮುವಿಗೆ ಧಾವಿಸಿ ಪರಿಸ್ಥಿತಿಯನ್ನು ಅವಲೋಕಿಸಿದ್ದು, ಭಾರೀ ಮಳೆ ಮತ್ತು ಪ್ರವಾಹದಿಂದ ಉಂಟಾದ ಪರಿಸ್ಥಿತಿಯ ಬಗ್ಗೆ ಪ್ರಧಾನಿ ನರೇಂದ್ರಮೋದಿ ಅವರಿಗೆ ಮಾಹಿತಿ ನೀಡಿದ್ದಾರೆ.

ಮುಂದಿನ ಸೂಚನೆ ಬರುವವರೆಗೂ ಯಾತ್ರೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಶ್ರೀ ಮಾತಾ ವೈಷ್ಣೋದೇವಿ ದೇವಾಲಯ ಮಂಡಳಿಯು ಎಕ್ಸ್‌ನಲ್ಲಿ ತಿಳಿಸಿದೆ. ಹವಾಮಾನವನ್ನು ಗಮನದಲ್ಲಿಟ್ಟುಕೊಂಡು ಯಾತ್ರಿಕರು ತಮ ಯೋಜನೆಗಳನ್ನು ಮರುನಿಗದಿಪಡಿಸುವಂತೆ ಮಂಡಳಿಯು ಮನವಿ ಮಾಡಿಕೊಂಡಿದೆ.

ಭೂಕುಸಿತದ ಹಿನ್ನೆಲೆಯಲ್ಲಿ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದ್ದು, +91 9906019460, +91 9906019446, +91 9103491554 ಸಂಪರ್ಕಿಸಲು ತಿಳಿಸಲಾಗಿದೆ. ಈತನಧ್ಯೆ, ಕಳೆದ ಎರಡು ದಿನಗಳಿಂದ ಜಮುಕಾಶೀರದಲ್ಲಿ ಮಳೆ ಮುಂದುವರೆದಿದ್ದು, ದೈನಂದಿನ ಜನಜೀವನ ಅಸ್ತವ್ಯಸ್ತಗೊಂಡಿದೆ, ಹೆದ್ದಾರಿ ಮುಚ್ಚುವಿಕೆ, ಶಾಲೆಗಳು ಬಂದ್ ಮತ್ತು ರೈಲು ಸೇವೆಗಳು ರದ್ದಾಗಿವೆ.

ಜಮುವಿನಲ್ಲಿ ಭಾರೀ ಮತ್ತು ನಿರಂತರ ಮಳೆಯಿಂದಾಗಿ ತಾವಿ ನದಿ ಉಕ್ಕಿ ಹರಿಯುತ್ತಿದ್ದು, ನಾಲ್ಕನೇ ತಾವಿ ಸೇತುವೆ ಬಳಿಯ ರಸ್ತೆ ಕೊಚ್ಚಿಹೋಗಿ, ಪ್ರದೇಶದಾದ್ಯಂತ ಸಾಮಾನ್ಯ ಜನಜೀವನ ಅಸ್ತವ್ಯಸ್ತಗೊಂಡಿದೆ. ಅಧಿಕಾರಿಗಳು ಪ್ರವಾಹ ಎಚ್ಚರಿಕೆ ನೀಡಿದ್ದಾರೆ.

ಸಾರ್ವಜನಿಕ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುತ್ತಿರುವುದರಿಂದ ನದಿಗಳು ಮತ್ತು ನಲ್ಲಾಗಳ ಬಳಿ ಹೋಗುವುದನ್ನು ತಪ್ಪಿಸಿ ಎಂದು ಜಮುವಿನ ಉಪಪೊಲೀಸ್ ಮಹಾನಿರ್ದೇಶಕ (ಡಿಐಜಿ) ಶಿವಕುಮಾರ್ ಶರ್ಮಾ ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

ವೈಷ್ಣೋದೇವಿ ದೇಗುಲದ ಬಳಿ ಸಂಭವಿಸಿದ ಭೂಕುಸಿತವನ್ನು ಭೀಕರ ದುರಂತಕ್ಕೆ ಕೇಂದ್ರ ಗೃಹಸಚಿವ ಅಮಿತ್ ಶಾ ಪ್ರತಿಕ್ರಿಯಿಸಿದ್ದು, ಮತ್ತು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಮತ್ತು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಅವರೊಂದಿಗೆ ಮಾತನಾಡಿದ್ದೇನೆ ಮತ್ತು ಕೇಂದ್ರದಿಂದ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ಘಟನೆಯ ನಂತರ ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ (ಎನ್‌ಡಿಆರೆಫ್) ತಂಡಗಳನ್ನು ಈಗಾಗಲೇ ಸ್ಥಳಕ್ಕೆ ರವಾನಿಸಲಾಗಿದೆ ಎಂದು ಶಾ ಹೇಳಿದ್ದಾರೆ.

# ಮನುಷ್ಯ ಸದೃಢವಾಗಿ ಇರಬೇಕೆಂದರೆ ಪ್ರತಿದಿನ ಯೋಗ- ಕ್ರೀಡೆಯಲ್ಲಿ ಭಾಗವಹಿಸುವುದು ಅತಿ ಮುಖ್ಯ



**ಮುದ್ದೇಬಿಹಾಳ** :ಕ್ರೀಡೆ ಇಲ್ಲದ ಜೀವನ ಕೀಟ ತಿಂದ ಹಣ್ಣಿನಂತೆ, ಮನುಷ್ಯ ಸದೃಢವಾಗಿ ಇರಬೇಕೆಂದರೆ ಪ್ರತಿದಿನ ಯೋಗ, ಕ್ರೀಡೆಯಲ್ಲಿ ಭಾಗವಹಿಸುವುದು ಅತಿ ಮುಖ್ಯ, ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸು ಎನ್ನುವಂತೆ , ದೇಹವನ್ನು ದಂಡಿಸಿದಾಗ ಮಾತ್ರ ಆರೋಗ್ಯದಿಂದಿರಲು ಸಾಧ್ಯ ಎಂದು ಸರಕಾರಿ ಗ್ರೇಡ್ 1 ದೈಹಿಕ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಎ ಸಿ ಕೆರೂರ ಹೇಳಿದರು.

ತಾಲ್ಲೂಕಿನ ಅಡವಿ ಹುಲಗಬಾಳ ಗ್ರಾಮದ ಅಹಿಲ್ಯದೇವಿ ಹೋಳ್ಕರ್ ಶಿಕ್ಷಣ ಸಂಸ್ಥೆಯಲ್ಲಿ 2025–26 ನೇ ಸಾಲಿನ ನಾಲತವಾಡ ವಲಯ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದ,– ಈಗ ಎಲ್ಲರೂ ಯಂತ್ರಗಳಿಗೆ ಮೊರೆ ಹೋಗುವುದರಿಂದ ದೇಹವನ್ನು ದಂಡಿಸಲು ಆಗುತ್ತಿಲ್ಲ ಹಾಗಾಗಿ ರೋಗ–ರುಜಿಗಳಿಗೆ ಹಣಿ ಆಗುತ್ತಿದ್ದಾನೆ, ಸೋಲು ಗೆಲುವನ್ನು ಸಮಾನತೆಯಿಂದ ಕಾಣುವ ಗುಣವನ್ನು ಹೊಂದಿರಬೇಕು , ಕ್ರೀಡಾಪಟುಗಳೊಂದಿಗೆ ಬಂದಂತಹ ಹಿತೈಷಿಗಳು ಯಾವುದೇ ರೀತಿಯಾಗಿ ಜಗಳಕ್ಕೆ ಹಣಿ ಯಾಗದಂತೆ, ಕ್ರೀಡೆಯಲ್ಲಿ ಭಾಗವಹಿಸಬೇಕು. ಈ ವರ್ಷ ಅರ್ಹತಾ ಪ್ರಮಾಣ ಪತ್ರವನ್ನು ಆನ್ಲೈನ್ ಮುಖಾಂತರವಾಗಿ ತೆಗೆದುಕೊಳ್ಳುತ್ತಿರುವುದ–ರಿಂದ ಬೇರೆ ವಿದ್ಯಾರ್ಥಿಗಳನ್ನು ಕರೆದುಕೊಂಡು ಕ್ರೀಡಾಕೂಟದಲ್ಲಿ ಭಾಗವಹಿಸಲು ಕಡಿವಾನವನ್ನು ಸರಕಾರ ಹಾಕಿದ್ದು ತುಂಬಾ ಸಂತೋಷ. ಕ್ರೀಡೆಯಲ್ಲಿ ಭಾಗವಹಿಸುವ ಕ್ರೀಡಾಪಟುಗಳು ನಿರ್ಣಾಯಕರು ಕೊಟ್ಟಂತಹ ನಿರ್ಣಯಗಳಿಗೆ ಬದ್ಧರಾಗಬೇಕು, ಮತ್ತು ನಿರ್ಣಾಯಕರು ಸಹ ನೀಡುವ ತೀರ್ಪು ಎಲ್ಲರೂ ಒಪ್ಪುವಂತಿರಬೇಕು, ಒಳ್ಳೆಯ ಮತ್ತು ನೈಜ ಪ್ರತಿಭಾವಂತ ಕ್ರೀಡಾಪಟುಗಳನ್ನು ವಲಯ, ತಾಲೂಕು, ಜಿಲ್ಲಾ ,ವಿಭಾಗ , ರಾಜ್ಯಮಟ್ಟಕ್ಕೆ ಕಳಿಸುವರು ನಾವು ಆಗಬೇಕು, ಆಡಿಸುವರ ಕಣ್ಣು ಎರಡು ಆದರೆ ನೋಡುವವರ ಕಣ್ಣು ನೂರಾರು ಆಗಿರುತ್ತವೆ, ಹಾಗಾಗಿ ತೀರ್ಪು ನ್ಯಾಯ ಸಮ್ಮತವಾಗಿರಬೇಕು ಎಲ್ಲ ಮಕ್ಕಳು ನಮ್ಮ ಶಾಲೆಯ ಮಕ್ಕಳು ಎಂದು ನಿರ್ಣಯವನ್ನು ನೀಡಬೇಕು ಎಂದರು.

ಅತಿಥಿಯಾಗಿ ಆಗಮಿಸಿದ್ದ ದೈ.ಶಿ.ಶಿ. ಸಂಘ ತಾಳಿಕೋಟೆ ಅಧ್ಯಕ್ಷ ರಾಹುತ ಪೂಜಾರಿ ಅವರ ಮಾತನಾಡಿ ಎಲ್ಲಿ ಕ್ರೀಡಾಂಗಣಗಳು ಕ್ರೀಡಾಪಟುಗಳಿಂದ ತುಂಬಿರುತ್ತವೆ ಆ ಊರಲ್ಲಿ ಆಸ್ಪತ್ರೆಗಳು ಖಾಲಿ ಖಾಲಿ ಇರುತ್ತವೆ, ಕ್ರೀಡೆ, ಕ್ರೀಡಾ ಸ್ಫೂರ್ತಿಯಿಂದ ನ್ಯಾಯಯುತವಾಗಿ ಮಾಡಬೇಕು, ಆಟದಿಂದ ನಾಯಕತ್ವವನ್ನು ಹೊಂದಾಣಿಕೆ ಗುಣ ಬೆಳೆಸಿಕೊಳ್ಳಬೇಕು ಹೊರತು ಸಿಟ್ಟು, ದ್ವೇಷ, ಗುಣದಿಂದ ದೂರ ಇರಬೇಕು.

ಈ ವಲಯದ ಕ್ರೀಡಾಪಟುಗಳು ರಾಜ್ಯಮಟ್ಟದವರೆಗೆ ಆಡಿ ನಮ್ಮ ವಲಯದ ಕೀರ್ತಿಯನ್ನು ತರಬೇಕು ಎಂದರು.

ಅಧ್ಯಕ್ಷತೆ ವಹಿಸಿದ ಕಿರಣ್ ಮದರಿ , ಅಧ್ಯಕ್ಷರು ಅಹಿಲ್ಯ ದೇವಿ ಹೋಳ್ಕರ್ ಶಿಕ್ಷಣ ಸಂಸ್ಥೆ ಅಡವಿ ಹುಲಗಬಾಳ ಶುಭವನ್ನು ಕೋರಿದರು . ಕ್ರೀಡಾ ಧ್ವಜಾರೋಹಣವನ್ನು ಅಂಬರೀಶ್ ಮದರಿ, ನಿರ್ದೇಶಕರು ಅಹಿಲ್ಯ ದೇವಿ ಶಿಕ್ಷಣ ಸಂಸ್ಥೆ ಅಡವಿ ನಿರ್ವಹಿಸಿದರು, ವೇದಿಕೆ ಮೇಲಿದ್ದ ಕಿರಣ್ ಮದರಿ , ಎ.ಸಿ.ಕೆರೂರ, ಎಂ.ಎಸ್. ಗುಡಗುಂಟಿ, ಬಿ.ಬಿ.ಪೂಜಾರಿ,ರಾಹುತ್ ಪೂಜಾರಿ,ಮಲ್ಲಿಕಾರ್ಜುನ ರಾಯಗೊಂಡ, ಪಾರಿವಾಳಗಳನ್ನು ಹಾರಿ ಬಿಡುವುದರಿಂದ ಕ್ರೀಡಾರ್ಕೂಟಕ್ಕೆ ಚಾಲನೆ ನೀಡಿದರು .

ಕಾರ್ಯಕ್ರಮದಲ್ಲಿ ಪ್ರಾರ್ಥನೆಯನ್ನು ರೇಖಾ ಹಿರೇಮಠ, ಸ್ವಾಗತವನ್ನು ಅಭ್ಯುದಯ ಪ್ರೌಢಶಾಲೆ ಮುಖ್ಯಗುರು ಬಿ.ಕೆ.ಪೂಜಾರಿ ನಿರೂಪಣೆ,ಬಿ.ಬಿ.ತಳವಾರ ಶಿಕ್ಷಕರು ಅಭ್ಯುದಯ ಪ್ರೌಢಶಾಲೆ ಅಡವಿಹುಲಗಬಾಳ ನಿರ್ವಹಿಸಿದರು.

ಈ ಸಂದರ್ಭದಲ್ಲಿ ವಲಯದ ಕ್ರೀಡಾಪಟುಗಳು ತಂಡದ ವ್ಯವಸ್ಥಾಪಕ ಮತ್ತು ನಿರ್ಣಾಯಕರಾಗಿ ಬಲಭೀಮ ಮಾದರ್, ಎಸ್. ಎಸ್.ಹಿರೇಮಠ್ , ಎಸ್.ಪಿ.ಹಂಡರಗಲ್, ಪ್ರಕಾಶ್ ಜಂಬಗಿ, ಎನ್.ವಿ. ಪತ್ತಾರ್, ಎಚ್.ಎಲ್. ಭಜಂತ್ರಿ, ಎಚ್.ಕೆ.ನಾಟಿಕರ್, ವಿಶ್ವನಾಥ್ ಪಾಟೀಲ್, ಬಸವರಾಜ್ ಚಳ್ಳಗಿ, ಡಿ.ಎ.ಜಾವೂರ್, ಡಿ.ಎ.ಮಂಕಣಿ, ಗೀತಾ ಯರಂತಲಿಮಠ, ಡಿ.ಬಿ.ಪೂಜಾರಿ, ಮತ್ತಿತರ ಇದ್ದರು.

***

# ಶಿಸ್ತು ಪಾಲನೆಗಾಗಿ ಪೊಲೀಸರಿಂದ ಶಿಸ್ತಿನ ಪಥಸಂಚಲನ



**ಜಮಖಂಡಿ:** ನಗರದಲ್ಲಿ ನಡೆಯಲಿರುವ ಸಂಭ್ರಮದ ಗಣೇಶೋತ್ಸವ ಮತ್ತು ಈದ್–ಮಿಲಾದ್ ಹಬ್ಬದ ಆಚರಣೆ ನಿಮಿತ್ತ ತಾಲೂಕಿನ ಜನತೆ ಶಾಂತ ರೀತಿಯಲ್ಲಿ ಆಚರಿಸಬೇಕೆಂದು ಪೊಲೀಸ್ ನಗರ ಮತ್ತು ಗ್ರಾಮೀಣಪ್ರದೇಶದಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಆಕರ್ಷಕ ಪಥಸಂಚಲನ ಮೂಲಕ ಗಮನ ಸೆಳೆದರು.

ನಗರದ ಎ.ಜಿ.ದೇಸಾಯಿ ವೃತ್ತದಲ್ಲಿ ಡಿ.ವೈಎಸ್.ಪಿ. ರೋಷನ್ ಪಥಸಂಚಲನಕ್ಕೆ ಚಾಲನೆ ನೀಡಿದರು. ಸಿಪಿಐ ಮಲ್ಲಪ್ಪ ಮಡ್ಡಿ, ಪಿಎಸ್.ಐಗಳಾದ ಅನೀಲ ಕುಂಬಾರ ಎ.ಎಸ್.ಪೂಜಾರ ಸಹಿತ ಆರಕ್ಷಕರು, ಸಿಬ್ಬಂದಿಯವರು ಪಾಲ್ಗೊಂಡಿದ್ದರು.

ಆರಕ್ಷಕರ ಪಥಸಂಚಲನ ಎ.ಜಿ.ದೇಸಾಯಿ ವೃತ್ತದಿಂದ ಡಾ.ರಾಜಕುಮಾರ ರಸ್ತೆ ಮಾರ್ಗವಾಗಿ ಅಶೋಕ ವೃತ್ತ, ಅರ್ಬನ ಬ್ಯಾಂಕ ರಸ್ತೆ, ಹಳೇ ತಹಶೀಲ್ದಾರ ಕಚೇರಿ, ಗವಳಿಗಲ್ಲಿ, ರಾಮದೇವ ಗಲ್ಲಿ, ಮಲ್ಲಿಕಾರ್ಜುನ ಗಲ್ಲಿ, ಮುಧೋಳ ರಸ್ತೆ, ಹನುಮಾನ ಚೌಕ, ಥೇಟರ ರಸ್ತೆ ಮೂಲಕ ಪೊಲೀಸ್ ಠಾಣೆ ತೆರಳಿತು.



ರಾಮದುರ್ಗ : ತಾಲೂಕಿನ ಹಲಗತ್ತಿ ಗ್ರಾಮದ ದೇವಸ್ಥಾನಗಳಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಶ್ರೀ ಗಣಪತಿಯನ್ನು ಪ್ರತಿಷ್ಠಾಪಿಸಿದ ಗಜಾನನ ಉತ್ಸವ ಸಮಿತಿ.

# ಅನುದಾನದ ಕೊರತೆ ಅಭಿವೃದ್ಧಿ ಕುಂಠಿತ ಕಲಾಪ ನಿರಸ:ಗುಡಗುಂಟಿ



ಜಮಖಂಡಿ: ರಾಜ್ಯ ಸರ್ಕಾರದಲ್ಲಿ ಅನುದಾನದ ಕೊರತೆ ಉಂಟಾಗಿದೆ. ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿದ್ದು ಆಡಳಿತ ಪಕ್ಷದ ಶಾಸಕರೇ ಅನುದಾನಕ್ಕೆ ದುಂಬಾಲು ಬೀಳುವ ಪರಿಸ್ಥಿತಿ ಎದುರಾಗಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಪಂಚಗ್ಯಾರಂಟಿಗಳ ಅನುಷ್ಠಾನಕ್ಕೆ ತೀವ್ರವಾಗಿ ಹೆಣಗಾಡುತ್ತಿದ್ದು, ಅಭಿವೃದ್ಧಿ ಕಾರ್ಯಕ್ರಮಗಳು ಅನುದಾನದ ಕೊರತೆಯಿಂದಾಗಿ ನಿಂತುಹೋಗಿವೆ.

ವಿಧಾನಸಭೆಯ ಕಲಾಪದಲ್ಲಿ ರಾತ್ರಿ 12ರ ವರೆಗೆ ಚರ್ಚೆಗಳು ನಡೆದರೂ ಯಾವುದೇ ಪ್ರಯೋಜನವಾಗಲಿಲ್ಲ.. ರಾಜ್ಯಧಾನಿ ಬೆಂಗಳೂರಿನ ರಸ್ತೆಗಳು ಹಾಳಾಗಿವೆ. ಅಲ್ಲಿಯೇ ಕೇಳುವರಿಲ್ಲದಂತಾಗಿದೆ, ಜಮಖಂಡಿ ಕ್ಷೇತ್ರದ 1100 ಕಿ.ಮಿ. ಗ್ರಾಮೀಣ ರಸ್ತೆಗಳ ಪೈಕಿ 800 ಕಿ.ಮಿ. ರಸ್ತೆಗಳು ಹಾಳಾಗಿವೆ ಇದರಿಂದ ಬಸ್ ಸೌಲಭ್ಯ ಇಲ್ಲದಂತಾಗಿ ಗರ್ಭಿಣಿಯರು, ರೋಗಿಗಳನ್ನು ಜೋಳಿಗೆಗಳಲ್ಲಿ ಹಾಕಿಕೊಂಡು ಆಸ್ಪತ್ರೆಗೆ ಸಾಗಿಸುವ ಪರಿಸ್ಥಿತಿ ಎದುರಾಗಿದೆ. ತಾಲೂಕಿನ ಕೃಷ್ಣಾ ಮೇಲ್ದಂಡೆ ಯೋಜನೆ ಪುನರ್ವಸತಿ ಕೇಂದ್ರಗಳು ಮೂಲಭೂತ ಸೌಲಭ್ಯ ವಂಚಿತವಾಗಿವೆ ಎಂದರು.

ಸಹಕಾರಿ ಸೌಹಾರ್ದ ಹಣಕಾಸು ಸಂಸ್ಥೆಗಳು ಸಣ್ಣ ಉದ್ಯಮೆದಾರ–ರಿಗೆ ಮತ್ತು ರೈತರಿಗೆ ಅನುಕೂಲ ಮಾಡಿ ಕೊಡುತ್ತಿದ್ದು ಅವುಗಳನ್ನು ಸರ್ಕಾರ ತನ್ನ ತೆಕ್ಕೆಗೆ ಪಡೆಯಲು ಚಿಂತನೆ ನಡೆಸಿತ್ತು. ಅದಕ್ಕೆ ಒಕ್ಕೊರಲಿನ ವಿರೋಧ ವ್ಯಕ್ತವಾಗಿದೆ. 48ಸಾವಿರ ಕೋಟಿ ಬಂಡವಾಳವಿರುವ ಸಹಕಾರಿ ಬ್ಯಾಂಕುಗಳಿಗೆ ಅಂಕುಶ ಹಾಕುವದು ತಪ್ಪು ನಿರ್ಣಯ. ಇದರಿಂದ ಸಣ್ಣ ಉದ್ದಿಮೆದಾರರು ಹಾಗೂ ರೈತರಿಗೆ ತೊಂದರೆ ಆಗಲಿದೆ. ಉದ್ಯೋಗ ಸೃಷ್ಟಿಸಿ ನಿರುದ್ಯೋಗ ಸಮಸ್ಯೆಯನ್ನು ಸಹಕಾರ ಸಂಸ್ಥೆಗಳು ಪರಿಹರಿಸುತ್ತಿವೆ. ಸೌಹಾರ್ದ ಸಂಸ್ಥೆಗಳನ್ನು ತೊಂದರೆಗೀಡು ಮಾಡುವ ಹಾಗೂ ಸ್ವಾಯತ್ತತೆಯನ್ನು ಕಡಿವಾಣ ಹಾಕುವ ಕುತಂತ್ರವಾಗಿದೆ. ಇದು 2022ನೇ ನಿಯಮದ ಉಲ್ಲಂಘನೆ ಆಗಲಿದೆ ಎಂದರು.

# ಜನರ ಸೇವೆಯೇ ಸಮಾಜದಲ್ಲಿ ಬಹು ದೊಡ್ಡದು : ಕಲ್ಮೇಶ್ವರ ಶ್ರೀ



**ಬೈಲಹೊಂಗಲ–** ಮನುಜ ಜನ್ಮ ಬಂದ ಮೇಲೆ ಜನರ ಸಂಕಷ್ಟಕ್ಕೆ ಮಿಡಿದು ಸೇವೆಗೈದರೆ ಪ್ರತಿಯೊಬ್ಬನ ಬದುಕು ಯಶಸ್ವಿಯಾಗಲು ಸಾಧ್ಯವೆಂದು ರಾಮದುರ್ಗ ತಾಲೂಕಿನ ಚಿಪ್ಪಲಕಟ್ಟಿಯ ಬಾಳೇಹೊಸ್ನೂರಿನ ಶಾಖಾ ಸಂಸ್ಥಾನ ಹಿರೇಮಠದ ಪೂಜ್ಯ ಕಲ್ಮೇಶ್ವರ ಶ್ರೀಗಳು ಹೇಳಿದರು.

ಅವರು ಪಟ್ಟಣದ ವಿದ್ಯಾನಗರ ನಿವಾಸಿ, ನೇಗಿಲಯೋಗಿ ರೈತ ಸೇವಾ ಸಂಘಟಣೆಯ ಜಿಲ್ಲಾಧ್ಯಕ್ಷ ಹಾಗೂ ಗಣ್ಯ ಉದ್ಯಮಿ ಶಂಕರ ಸೋಮಪ್ಪ ಬೋಳಣ್ಣವರ ಅವರಿಗೆ ಕನ್ನಡಿಗರ ಧ್ವನಿ ವಿಜಯವಾಣಿ ದಿನಪತ್ರಿಕೆಯು ಮಲೇಶಿಯಾ ರಾಷ್ಟ್ರದಲ್ಲಿ ಹಮ್ಮಿಕೊಂಡ ವಿವಿಧ ಕ್ಷೇತ್ರದ ಸಾಧಕರಿಗೆ ವಿಜಯರತ್ನ ಅಂತರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಿದ ಪ್ರಯುಕ್ತ ಗುರುವಾರ ಶ್ರೀಮಠದ ವತಿಯಿಂದ ದಂಪತಿಗಳನ್ನು ಸನ್ಮಾನಿಸಿ ಮಾತನಾಡಿ, ಸಮಕಾಲೀನ ಸಮಾಜಕ್ಕೆ ತಾವು ನೀಡುತ್ತಿರುವ ಅನುಪಮ ಸೇವೆ ಅಗಾಧವಾಗಿದ್ದು ರೈತ ಪರ ಹೋರಾಟದಲ್ಲಿ ನಿಮ್ಮ ಜೀವನ ಯಶಸ್ವಿಯಾಗಿದೆ. ಈಗಾಗಿ ಭವಿಷ್ಯದಲ್ಲಿಯೂ ಸಹ ತಮಗೆ ಸದಾ ಯಶಸ್ಸು ಮತ್ತಷ್ಟು ಪ್ರಶಸ್ತಿಗಳು ಸಿಗಲಿ ಎಂದರು.

ಪ್ರಶಸ್ತಿ ವಿಜೇತ ಶಂಕರ ಬೋಳನ್ನವರ ಮಾತನಾಡಿ, ಸಂಘ ಸಂಸ್ಥೆಗಳು ಸಮಾಜದಲ್ಲಿ ನೊಂದವರಿಗೆ ನಿಸ್ವಾರ್ಥತೆಯಿಂದ ಬೆನ್ನಲಬಾಗಿ ನಿಲ್ಲಬೇಕು. ಸಮಾಜ ನಮಗೇನು ಕೊಟ್ಟಿದೆ ಎನ್ನುವದಕ್ಕಿಂತ ಸಮಾಜಕ್ಕೆ ನಮ್ಮ ಕೊಡುಗೆ ಎನು? ಎಂದು ಪ್ರಶ್ನಿಸಿಕೊಂಡು ಕ್ರೀಯಾಶೀಲರಾಗಿ ಸಮುದಾಯದ ಕಾರ್ಯಗಳಲ್ಲಿ ತೊಡಗಬೇಕೆಂದರು.

ವೇ.ಮೂ. ವಿರೇಶ ಹಿರೇಮಠ, ಗುಲಗಂಜಿಕೊಪ್ಪದ ಬಸಯ್ಯ ಸ್ವಾಮೀಜಿ, ಉಪನ್ಯಾಸಕ ರಮೇಶ ಯರಗಟ್ಟಿ, ಶ್ವೇತಾ ಬೋಳನ್ನವರ, ಜ್ಯೋತಿ ಬೋಳನ್ನವರ, ಶೈಲಾ ಜರಳಿ, ರೈತ ಧುರೀಣರಾದ ಮಹಾಂತೇಶ ಬೋಳನ್ನವರ, ಅನಿಲ ಗಿರನವರ, ತಾಲೂಕಾ ಕಜಾಪ ವಕ್ತಾರ ಮಹಾಂತೇಶ ರಾಜಗೋಳಿ, ಇನುಸ್ ಬಡೇಘರ್ ಮುಂತಾದವರು ಉಪಸ್ಥಿತ–ರಿದ್ದರು. ಉಪನ್ಯಾಸಕ ರಮೇಶ ಯರಗಟ್ಟಿ ಸ್ವಾಗತಿಸಿ, ನಿರೂಪಿಸಿದರು.

# ಕ್ರೀಡಾಕೂಟದಲ್ಲಿ ಶ್ರೀಘನಮಠೇಶ್ವರ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಮೇಲುಗೈ




**ತಾಳಿಕೋಟೆ,** 2025–26ನೇ ಸಾಲಿನ ಮಿಣಜಗಿ ವಲಯ ಮಟ್ಟದ ಪ್ರೌಢ ಶಾಲೆಗಳ ಕ್ರೀಡಾಕೂಟದಲ್ಲಿ ಶ್ರೀ ಘನಮಠೇಶ್ವರ ಆಂಗ್ಲ ಮಾಧ್ಯಮ ಮತ್ತು ಕನ್ನಡ ಮಾಧ್ಯಮ ಪ್ರೌಢ ಶಾಲೆ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡುವದರೊಂದಿಗೆ ತಾಲೂಕಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ವೈಯಕ್ತಿಕ ಸ್ಪರ್ಧೆ ಫಲಿತಾಂಶ (ಬಾಲಕಿಂ–ಯರು): ಶಾಂತಮ್ಮ ಭಂಟನೂರ– 100ಮೀ ಮತ್ತು 200ಮೀ ಓಟದಲ್ಲಿ ಪ್ರಥಮ, ಸ್ವಾತಿ ಡೆಂಗಿ ದ್ವಿತೀಯ ಸ್ಥಾನ, 400ಮೀ ಓಟ ಸಮನ್ವಿತಾ ದ್ವಿತೀಯ, 1500ಮೀ ಓಟದಲ್ಲಿ ವೈಷ್ಣವಿ ಪಾಟೀಲ ಪ್ರಥಮ, 3000ಮೀ ಓಟದಲ್ಲಿ ಮುಸ್ಕಾನ ವಾಲಿಕಾರ ಪ್ರಥಮ, ದೇವಮ್ಮಾ.ಡಿ ದ್ವಿತೀಯ ಸ್ಥಾನ, 4><100ಮೀ ರಿಲೇ ಓಟದಲ್ಲಿ ಸಮನ್ವಿತಾ ಮತ್ತು ಸಂಗಡಿಗರು ದ್ವಿತೀಯ ಸ್ಥಾನ ಪಡೆದು ತಾಲೂಕಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಅದರಂತೆ ವೈಯಕ್ತಿಕ ಸ್ಪರ್ಧೆ (ಬಾಲಕರು): 100ಮೀ ಮತ್ತು 200ಮೀ ಓಟದಲ್ಲಿ ಸಂಜೀವಕುಮಾರ ಗಾಣಿಗೇರ ದ್ವಿತೀಯ, 200 ಮೀ. ದಲ್ಲಿ ದೇವರಾಜ ಯಡಹಳ್ಳಿ ಪ್ರಥಮ, 400ಮೀ ಓಟದಲ್ಲಿ ಸಾಗರ ಬೋರಣ್ಣವರ ಪ್ರಥ–ಮ, 800ಮೀ ಓಟದಲ್ಲಿ ಮಲ್ಲಿಕಾರ್ಜುನ ಚೌದರಿ ಪ್ರಥಮ, ಅಮೀತ ಕಳಸಗೊಂಡ ದ್ವಿತಿಯ, 1500ಮೀ ಓಟದಲ್ಲಿ ಸಾಗರ ಬೋರಣ್ಣವರ ದ್ವಿತೀಯ ಸ್ಥಾನ ಪಡೆದು ವಿಜೇತರಾಗಿ ತಾಲೂಕಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

ಗುಂಪು ಆಟಗಳ ಬಾಲಕರ ಸ್ಪರ್ಧೆಯಲ್ಲಿ ಖೋ ಖೋ ಸ್ಪರ್ಧೆ ಪ್ರಥಮ, ಥ್ರೋ ಬಾಲ್ ಪ್ರಥಮ, ಕಬಡ್ಡಿ ದ್ವಿತಿಯ, ವಾಲಿಬಾಲ್ ದ್ವಿತಿಯಸ್ಥಾನ ಪಡೆದಿದ್ದಾರೆ. ಬಾಲಕೀಯರ ವಿಭಾಗದಲ್ಲಿ ಥ್ರೋ ಬಾಲ್ ಪ್ರಥಮ, ಖೋ ಖೋ ಸ್ಪರ್ಧೆ ದ್ವಿತಿಯ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಈ ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಎಸ್.ಎಂ.ಸಜ್ಜನ, ಕಾರ್ಯದರ್ಶಿ ವಿವೇಕಾನಂದ ಸಜ್ಜನ, ಮುಖ್ಯಗುರುಗಳಾದ ಬಿ.ಜಿ. ಸಜ್ಜನ, ಪಿಯು ಪ್ರಾಂಶುಪಾಲರಾದ ಬಿ.ಎಸ್. ಮಾಲಿಪಾಟೀಲ, ಸಿಬಿಎಸ್ಇ ಪ್ರಾಚಾರ್ಯರಾದ ಜಯಚಂದ್ರ, ಮುಖ್ಯಗುರುಮಾತೆಯರಾದ ಶ್ರೀಮತಿ ಆರ್. ಎಸ್ ದೇಸಾಯಿ, ಬಿ.ಎಡ್ ಗುರುಮಾತೆಯರಾದ ಶ್ರೀಮತಿ ಜಿ.ಎನ್.ಪಾಟೀಲ ಹಾಗೂ ಸಂಸ್ಥೆಯ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ವೃದ್ಧರನ್ನು ಅನಾಥರನ್ನು ರಕ್ಷಣೆ ಮಾಡುವುದು, ಅವರಿಗೆ ನೆರವು ಒದಗಿಸುವುದು ಸಮಾಜದ ಆದ್ಯ ಕರ್ತವ್ಯವಾಗಿದ್ದು ; ಬಸವರಾಜ ಬೆಟಗೇರಿ

**ಬೈಲಹೊಂಗಲ:** ವೃದ್ದರನ್ನು ಅನಾಥರನ್ನು ರಕ್ಷಣೆ ಮಾಡುವುದು, ಅವರಿಗೆ ನೆರವು ಒದಗಿಸುವುದು ಸಮಾಜದ ಆದ್ಯ ಕರ್ತವ್ಯವಾಗಿದ್ದು, ಪ್ರತಿಯೊಬ್ಬರೂ ಈ ಕಾರ್ಯದಲ್ಲಿ ಸಹಕರಸಬೇಕೆಂದು ಮಲಪ್ರಭಾ ಸೋಶಿಯಲ್ ಕ್ಲಬ್‌ನ ಸದಸ್ಯ ಬಸವರಾಜ ಬೆಟಗೇರಿ ಹೇಳಿದರು.

ಅವರು ಶನಿವಾರ ನಗರದ ಸಂಸ್ಕೃತಿ ಫೌಂಡೇಶನ್ ಅನಾಥಶ್ರಮ ಹಾಗೂ ವೃದ್ಧಾಶ್ರಮಕ್ಕೆ ತೆರಳಿ ಮಲಪ್ರಭಾ ಸೋಶಿಯಲ್ ಕ್ಲಬ ಪದಾಧಿಕಾರಿಗಳೊಂದಿಗೆ ಒಂದು ತಿಂಗಳಿನ ಕಿರಾಣಿ ಸಾಮಾನುಗಳನ್ನು ವಿತರಿಸಿ ಮಾತನಾಡಿ, ಅನಾಥರು, ವೃದ್ದರು ಸಮಾಜದ ಅವಿಭಾಜ್ಯ ಅಂಗ.ಇವರಿಗೆ ನೆರವು ನೀಡುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ವೃದ್ದರಿಗೆ ಪ್ರೀತಿ, ಸಹಾಯ ಹಾಗೂ ರಕ್ಷಣೆ ನೀಡುತ್ತಿರುವ ಸಂಸ್ಕೃತಿ ಫೌಂಡೇಶನ ಸೇವೆ ಅನನ್ಯವಾಗಿದೆ. ಮುಂದಿನ ದಿನಗಳಲ್ಲಿ ಪ್ರತಿ ತಿಂಗಳು ಸಹಾಯವನ್ನು ಮಾಡುವು ಗುರಿ ಹೊಂದಿದ್ದೆವೆ ಎಂದರು.

ಪದಾಧಿಕಾರಿಗಳಾದ ವಿಠ್ಠಲ ಮೊರಬದ, ಅಬ್ದುಲರೌಫ್ ಮುಲ್ಲಾ, ರಾಜು ಬೋಳನ್ನವರ, ಹಜರತ ದಫೇದಾರ, ಫಕ್ರುಸಾಬ ನದಾಫ, ಮಹಾಂತೇಶ ಇಂಗಳಗಿ, ಅಜ್ಜಪ್ಪ ಮುರ್ಕಿಭಾಂವಿ, ಭೀಮಸಿ ಉಡಕೇರಿ, ಸುರೇಶ ಕುದರಿ, ಸಂತೋಷ ಈಳಗೇರ, ಮಡಿವಾಳಪ್ಪ ವಿವೇಕಿ, ಮಹಾಂತೇಶ ಬೋಳೆತ್ತಿನ, ನಾಗೇಶ ಕುದರಿ, ಯಲ್ಲಪ್ಪ ಎಮ್ಮಿ, ಆನಂದ ಬೂದಿಹಾಳ ಅನೇಕರು ಇದ್ದರು.



# ಸಮರ್ಪಕವಾಗಿ ಕಾರ್ಯನಿರ್ವಹಿಸದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಸಚಿವ ಶಿವಾನಂದ ಪಾಟೀಲ

**ಬಸವನಬಾಗೇವಾಡಿ,** ಪಟ್ಟಣದ ಪುರಸಭೆ ಕಾರ್ಯಾಲಯದ ಸಭಾಭವನದಲ್ಲಿ ಬಸವನಬಾಗೇವಾಡಿ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಬಸವನಬಾಗೇವಾಡಿ, ಕೊಲ್ಹಾರ, ನಿಡಗುಂದಿ ಮೂರು ತಾಲೂಕಿನ ತಾಲೂಕು ಮಟ್ಟದ ತ್ರೈಮಾಸಿಕ ಕೆಡಿಪಿ ಸಭೆ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ಜರುಗಿತು.ಈ ಸಭೆಯಲ್ಲಿ ಸಚಿವರು ಸಮರ್ಪಕವಾಗಿ ಕಾರ್ಯನಿರ್ವಹಿಸದ ವಿವಿಧ ಇಲಾಖೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ಕಟ್ಟುನಿಟ್ಟಾಗಿ ತಮ್ಮ ಕಾರ್ಯವನ್ನು ನಿರ್ವಹಿಸಬೇಕೆಂದು ಸೂಚಿಸಿದರು.

ತಾಲೂಕಿನ ಮನಗೂಳಿ, ಮಸೂತಿ ಗ್ರಾಮದಲ್ಲಿರುವ ಸರ್ಕಾರಿ ಜಮೀನು ಸರ್ವೆ ಮಾಡುವಂತೆ ಸೂಚಿಸಿದರೂ ಎಡಿಎಲ್‌ಆರ್ ಬಿ.ಬಿ.ವಗ್ಗನವರ ಸರಿಯಾಗಿ ಸ್ಪಂದಿಸದೇ ಇರುವದನ್ನು ಗಮನಿಸಿದ ಸಚಿವರು ಅವರನ್ನು ತರಾಟೆಗೆ ತೆಗೆದುಕೊಂಡು ನಾನು ನಿಮಗೆ ಸರ್ಕಾರಿ ಜಮೀನು ಸರ್ವೆ ಮಾಡಿ ವರದಿ ನೀಡುವಂತೆ ಸೂಚನೆ ನೀಡಿದರೂ ಮೂರು ತಿಂಗಳು ಆಗುತ್ತಾ ಬಂದರೂ ನೀವು ವರದಿ ನೀಡಿಲ್ಲ. ಸರ್ಕಾರಿ ಜಮೀನು ಒತ್ತುವರಿ ಮಾಡುವಂತೆ ಮಾಡಿರುವದು ಗಮನಕ್ಕೆ ಬಂದಿದೆ. ಇದನ್ನು ಬಗೆಹರಿಸುವವರೆಗೂ ನಿನ್ನ ಬಿಡುವುದಿಲ್ಲ. ನೀನು ಪಾತಾಳಕ್ಕೆ ಹೋದರೂ ಬಿಡುವುದಿಲ್ಲ ಎಂದು ಏರುಧ್ವನಿಯಲ್ಲಿ ಎಚ್ಚರಿಕೆ ನೀಡಿದರು.

ಬಸವನಬಾಗೇವಾಡಿ, ಕೊಲ್ಹಾರ, ನಿಡಗುಂದಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿತಿಂಗಳೂ ಅಧಿಕಾ–ರಿಗಳೊಂದಿಗೆ ಸಭೆ ಮಾಡುತ್ತಿಲ್ಲ. ಮೂರು ಜನ ಇಓಗಳು ಇದರ ಕಡೆಗೆ ಗಮನ ಹರಿಸಬೇಕು. ಬಸವನಬಾಗೇವಾಡಿ ಇಓ ಬಂದು ಎರಡು ವರ್ಷವಾದರೂ ಕಾಲಹರಣ ಮಾಡಿದ್ದಾರೆ ಅಷ್ಟೇ. ಇವರು ಸಭೆಯ ನಡಾವಳಿಕೆಯನ್ನು ಇದುವರೆಗೂ ಸಲ್ಲಿಸಿಲ್ಲ. ಇವರಿಗೆ ನೋಟೀಸ್ ನೀಡುವಂತೆ ಜಿಪಂ ಉಪಕಾರ್ಯದರ್ಶಿ ವಿಜಯಕುಮಾರ ಅಜೂರ ಅವರಿಗೆ ಸೂಚಿಸಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇದುವರೆಗೂ ಎಷ್ಟು ಓಪಿಡಿಗಳಾಗಿವೆ ಎಂದು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಪ್ರಶ್ನಿಸಿದಾಗ, ತಾಲೂಕು ಆರೋಗ್ಯಾಧಿಕಾರಿ ಡಾ.ಕವಿತಾ ದೊಡಮನಿ ಅವರು ಈ ಕುರಿತು ಅಂಕಿ–ಅಂಶ ಮಾಹಿತಿ ತಂದಿಲ್ಲ ಎಂದಾಗ ನೀವು ಯಾಕೆ ಸಭೆ ಬಂದಿದ್ದೀರಾ. ನೀವು ಸರಿಯಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡುತ್ತಿಲ್ಲ. ಪ್ರತಿಯೊಂದು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಅವು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಕ್ರಮ ವಹಿಸುವಂತೆ ಸೂಚಿಸಿದರು.

ಎಂಟು ತಿಂಗಳ ಹಿಂದೆ ಇಸಿಜಿ ಮಾಡಿಸಿದ ವ್ಯಕ್ತಿಯೊರ್ವ ಹೃದಯಾಘಾತದಿಂದ ಮೃತಪಟ್ಟಿದ್ದಾನೆ. ಇಸಿಜಿ ವರದಿ ಸರಿಯಾಗಿ




ಬಾರದೇ ಈ ರೀತಿಯಾಗಿದೆ ಎಂದು ತಿಳಿದುಬಂದಿದೆ. ಇಸಿಜಿ ವರದಿ ತಪ್ಪು ಬಾರದಂತೆ ನೋಡಿಕೊಳ್ಳಬೇಕೆಂದು ಸಭೆಯಲ್ಲಿದ್ದ ಡಿಎಚ್‌ಓ ವಸಂತ ಗುಣಾರೆಗೆ ಹೇಳಿದರು.

ತಾಲೂಕಿನ ಮಟ್ಟಿಹಾಳ ಗ್ರಾಮ ಸೇರಿದಂತೆ ಬಹುತೇಕ ಗ್ರಾಮಗಳ ಕಿರಾಣಿ ಅಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ ಎಂಬ ಮಾಹಿತಿ ಇದೆ. ಇದರ ಕಡೆಗೆ ಅಬಕಾರಿ ಇಲಾಖೆಯ ಅಧಿಕಾರಿಗಳು ಗಮನ ಹರಿಸುವಂತೆ ಸೂಚಿಸಿದರು.

ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ಸಮರ್ಪಕವಾಗಿ ಆಗುತ್ತಿಲ್ಲ. ಇದರ ಕಡೆಗೆ ಪೊಲೀಸ್ ಅಧಿಕಾರಿಗಳು ಗಮನ ಹರಿಸಬೇಕೆಂದರು.

ತಾಲೂಕಿನಲ್ಲಿ ಸಮರ್ಪಕವಾಗಿ ಮೊಟ್ಟೆ ವಿತರಣೆಯಾಗುತ್ತಿಲ್ಲ ಎಂಬ ಮಾತು ಕೇಳಿ ಬರುತ್ತಿದೆ ಎಂದು ಸಿಡಿಪಿಓ ಶಿಲ್ಪಾ ಹಿರೇಮಠ ಅವರಿಗೆ ಕೇಳಿದಾಗ ಮೊಟ್ಟೆ ವಿತರಣೆಗೆ ಸಂಬಂಧಿಸಿದ ಅನುದಾನ ಬಾರದೇ ಇರುವದ–ರಿಂದಾಗಿ ಮೊಟ್ಟೆ ವಿತರಣೆ ಮಾಡಿಲ್ಲ. ಕಳೆದ ಮೂರು ತಿಂಗಳು ಅನುದಾನಿ ಇದೀಗ ಬಂದಿದೆ.ಈ ಅನುದಾನವನ್ನು ಈಗ ಹಂಚಿಕೆ ಮಾಡಲಾಗಿದೆ ಎಂದು ಹೇಳಿದರು.

ಆಗ ಸಚಿವರು ದಿನಕ್ಕೆ ಒಂದು ಮೊಟ್ಟೆ ತಿನ್ನುವ ವ್ಯಕ್ತಿ ಒಂದೇ ಸಲ ಮೂರು ಮೊಟ್ಟೆ ತಿನ್ನಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಅವರು ಮುಂದೆ ಹೀಗೆ ಆಗದಂತೆ ಜಿಲ್ಲಾ ಪಂಚಾಯಿತಿಯವರು ಕ್ರಮ ತೆಗೆದುಕೊಳ್ಳಬೇಕೆಂದು ಹೇಳಿದರು.

ಗ್ರಾಮದಲ್ಲಿ ಗ್ರಾಮಾಡಳಿತಾಧಿಕಾರಿಗಳು ಸರಿಯಾಗಿ ಇರುವದಿಲ್ಲ. ಗ್ರಾಮ ಪಂಚಾಯಿತಿಗಳಿಗೆ ಹೋದಾಗ ಇವರು ನನಗೆ ಕಂಡೇ ಇಲ್ಲ. ಪ್ರತಿಯೊಂದು ಪಂಚಾಯಿತಿಯಲ್ಲಿ ಇವ–ರಿಗೆ ಬಯೋಮೆಟ್ರಿಕ್ ವ್ಯವಸ್ಥೆ ಇಲ್ಲವೇ ಪಂಚಾಯಿತಿಯಲ್ಲಿ ಹಾಜರಾತಿ ಪುಸ್ತಕ ಇಡುವಂತೆ ಆಯಾ ಪಂಚಾಯಿತಿ ಪಿಡಿಓಗಳು ವ್ಯವಸ್ಥೆ ಮಾಡುವಂತೆ ಸೂಚಿಸಿದರು.

ತಾಲೂಕಿನ ಇಂಗಳೇಶ್ವರ ಗ್ರಾಮದಲ್ಲಿ ಕುಡಿಯು ನೀರಿನ ಸಮಸ್ಯೆ ಇಲ್ಲ ಎಂದು ಪಿಡಿಓ ಹೇಳಿದರೆ ಇಓ ಸಮಸ್ಯೆ ಇದೆ ಎಂದಾಗ ಸಚಿವರು ಇಂಗಳೇಶ್ವರ ಗ್ರಾಮದಲ್ಲಿ ಬಹುಹಳ್ಳಿ ಕುಡಿಯುವ ನೀರಿನ ಯೋಜನೆ ಇದೆ. ಇದಕ್ಕೆ ಸಂಬಂಧಿಸಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಗಮನಿಸಿ ಕುಡಿಯುವ ನೀರು ಸಮರ್ಪಕವಾಗಿ ಪೂರೈಕೆಯಾಗುವಂತೆ ಕ್ರಮ ತೆಗೆದುಕೊಳ್ಳಬೇಕೆಂದರು.

ಪಟ್ಟಣದಲ್ಲಿ ಪುನರ್ ವಸತಿ ಮತ್ತು ಪುನರ್ ನಿರ್ಮಾಣ ಇಲಾಖೆಯಿಂದ ನಿರ್ಮಾಣವಾಗುತ್ತಿರುವ ಉರ್ದು ಶಾಲೆ ಕಟ್ಟಡ ಕಾಮಗಾರಿ ಬಹಳ ವಿಳಂಬವಾಗುತ್ತಿದೆ. ಇದಕ್ಕೆ ಸಂಬಂಧಿಸಿದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ನೀವು ಗೋಲಗುಮ್ಮಟ ಕಟ್ಟಡ ನಿರ್ಮಾಣ ಮಾಡುತ್ತಿದ್ದೀರಾ ಏನು ಎಂದು ಪ್ರಶ್ನಿಸಿದ ಸಚಿವರು ಕೂಡಲೇ ಈ ಕಟ್ಟಡದ ಕಾಮಗಾರಿ ಮುಗಿಸಿ ಡಿಸೆಂಬರ್ ತಿಂಗಳಲ್ಲಿ ಶಿಕ್ಷಣ ಇಲಾಖೆಗೆ ಹಸ್ತಾಂತರ ಮಾಡಿಕೊಡಬೇಕೆಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಜಿಲ್ಲಾ ಪಂಚಾಯಿತಿ ಇಂಜನಿಯರಿಂಗ್ ಉಪವಿಭಾಗದ ಎಇಇ ವಿಲಾಸ ರಾಠೋಡ ಅವರು ತಾಲೂಕಿನಲ್ಲಿ 39 ಶಾಲಾ ಕಟ್ಟಡಘಲು ನಿರ್ಮಾಣಗೊಂಡಿವೆ. 32 ಶಾಲಾ ಕಟ್ಟಡಗಳು ದುರಸ್ತಿಯಾಗಿವೆ. 9 ವಸತಿ ನಿಲಯಗಳ ಕಟ್ಟಡಗಳ ಪ್ರಗತಿಯಲ್ಲಿವೆ. ಪೂರ್ಣಗೊಂಡ ಶಾಲಾ ಕಟ್ಟಡಗಳನ್ನು ಶಿಕ್ಷಣ ಇಲಾಖೆಗೆ ಹಸ್ತಾಂತರ ಮಾಡಲಾಗಿದೆ ಎಂದು ಸಭೆಗೆ ಗಮನಕ್ಕೆ ತಂದಾಗ, ಹಸ್ತಾಂತರಗೊಂಡ ಶಾಲಾ ಕಟ್ಟಡಗಳ ಆಯಾ ಗ್ರಾಮ ಪಂಚಾಯಿತಿಯ ಪಿಡಿಓಗಳಿಗೆ ಮಾಹಿತಿ ನೀಡಿ ಅವರಿಂದ ಸಹಿ ಪಡೆದುಕೊಳ್ಳಬೇಕೆಂದು ಸಚಿವರು ಸೂಚನೆ ನೀಡಿದರು.

ತಾಲೂಕಿನ ಉಕ್ಕಲಿ ಗ್ರಾಮದಲ್ಲಿ ಶಿಥಿಲಾವಸ್ಥೆಯಲ್ಲಿರುವ ಶಾಲಾ ಕಟ್ಟಡವನ್ನು ತೆರವು ಗೊಳಿಸುವಂತೆ ಇಓ, ಉಕ್ಕಲಿ ಪಿಡಿಓ ಅವರಿಗೆ ಸೂಚನೆ ನೀಡಿದ್ದರೂ ಇದುವರೆಗೂ ಅವರು ತೆರವು ಗೊಳಿಸಿಲ್ಲ. ಮುಂದೆ ಏನಾದರೂ ಅನಾಹುತ ಸಂಭವಿಸಿದರೆ ಇವರನ್ನೇ ಹೊಣೆಗಾರರನ್ನಾಗಿಸುವದಾಗಿ ಎಚ್ಚರಿಕೆ ನೀಡಿದರು.

ಸಭೆಗೆ ಬಾರದ ಅಧಿಕಾರಿಗಳಿಗೆ ನೋಟಿಸ್ ನೀಡುವಂತೆ ಸಚಿವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಪಂ ಉಪಕಾರ್ಯದರ್ಶಿ ವಿಜಯಕುಮಾರ ಅಜೂರ, ಉಪವಿಭಾಗಾಧಿಕಾರಿ ಗುರುನಾಥ ದಡ್ಡೆ, ಮೂರು ತಾಲೂಕಿನ ತಹಸೀಲ್ದಾರರಾದ ವೈ.ಎಸ್.ಸೋಮನಕಟ್ಟಿ, ಸಂತೋಷ ಮ್ಯಾಗೇರಿ, ಎ.ಬಿ.ಅಮರವಾಡಗಿ, ಮೂರು ತಾಲೂಕು ತಾಪಂ ಇಓಗಳಾದ ಪ್ರಕಾಶ ದೇಸಾಯಿ, ವೆಂಕಟೇಶ ವಂದಾಲ, ಸುನೀಲ ಮದ್ದಿನ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ದಿ. ಅಪ್ಪಣಗೌಡ ಪಾಟೀಲ್ ಪೆನಲ್ ಗೆ ಆಶೀರ್ವದಿಸಿ: ಸಚಿವ ಸತೀಶ್ ಜಾರಕಿಹೊಳಿ



**ಹುಕ್ಕೇರಿ:** ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಅಭಿವೃದ್ಧಿಗಾಗಿ ದಿ. ಅಪ್ಪಣಗೌಡ ಪಾಟೀಲ್ ಅವರ ಪೆನಲ್‌ಗೆ ಚುನಾವಣೆಯಲ್ಲಿ ತಾವೆಲ್ಲ ಬೆಂಬಲ ನೀಡಬೇಕೆಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ತಾಲೂಕಿನ ಹುಲ್ಲೊಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಚುನಾವಣೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಸರ್ವ ರೈತರಿಗೆ ಒಳ್ಳೆಯ ಸೇವೆ ಒದಗಿಸಬೇಕು ಎಂದು ನಿರ್ಧರಿಸಿ ಅಣ್ಣಾಸಾಬ್ ಜೊಲ್ಲೆ, ಬಾಲಚಂದ್ರ ಜಾರಕಿಹೊಳಿ ಸೇ-ರಿದಂತೆ ನಾವೆಲ್ಲ ಸೇರಿ ಈ ಪೆನಲ್ ಮಾಡಿದ್ದೇವೆ. ಆದ್ದರಿಂದ ಈ ಪೆನಲ್ ಗೆ ಆಶೀರ್ವದಿಸಬೇಕೆಂದು ವಿನಂತಿಸಿದರು.

ಮೂವತ್ತು ವರ್ಷಗಳ ಅವಧಿಯಲ್ಲಿ ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಆಡಳಿತ ಮಂಡಳಿ ಯಾವ ರೀತಿ ಕಾರ್ಯ ನಿರ್ವಹಿಸಿದೆ, ಇತ್ತೀಚೀನ ಮೂರು ತಿಂಗಳ ಅವಧಿಯಲ್ಲಿ ಯಾವ ರೀತಿ ಕಾರ್ಯ ನಿರ್ವಹಿಸಿದೆ ಎಂಬುವುದನ್ನು ತಾವೆಲ್ಲ ಗಮನಿಸಬೇಕು. ಜನ ಸೇವೆ ಮಾಡುವವರನ್ನು ಅಧಿಕಾರಕ್ಕೆ ತರಬೇಕೆಂದು ಕರೆ ನೀಡಿದರು.

ಇದೇ ವೇಳೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಿ, ಶ್ರೀ ಬಸವೇಶ್ವರ ದೇವಾಲಯಕ್ಕೆ ಭೇಟಿ ನೀಡಿ ದೇವರ ದರ್ಶನ ಪಡೆದರು. ಈ ಸಂದರ್ಭದಲ್ಲಿ ಸಂಕೇಶ್ವರದ ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಬಸವರಾಜ ಕಲ್ಲಟ್ಟಿ, ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಅಧ್ಯಕ್ಷ ಜಯಗೌಡ ಪಾಟೀಲ್, ಸಹಕಾರಿ ನಿರ್ದೇಶಕ ರವಿ ಹಿಡಕಲ್, ಹುಕ್ಕೇರಿ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ವಿಜಯ ರವದಿ, ಬಸು ಮರಡಿ ಸೇರಿದಂತೆ ಹಲವರಿದ್ದರು.

ಈ ಸಂದರ್ಭದಲ್ಲಿ ಸಂಕೇಶ್ವರದ ಹಿರಣ್ಯಕೇಶಿ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಬಸವರಾಜ ಕಲ್ಲಟ್ಟಿ, ಹುಕ್ಕೇರಿ ವಿದ್ಯುತ್ ಸಹಕಾರಿ ಸಂಘದ ಅಧ್ಯಕ್ಷ ಜಯಗೌಡ ಪಾಟೀಲ್, ಸಹಕಾರಿ ನಿರ್ದೇಶಕ ರವಿ ಹಿಡಕಲ್, ಹುಕ್ಕೇರಿ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ವಿಜಯ ರವದಿ, ಬಸು ಮರಡಿ ಸೇರಿದಂತೆ ಹಲವರಿದ್ದರು.

# ಪುರಸಭೆ ಕಾರ್ಯಾಲಯದಲ್ಲಿ ಶ್ರೀ ಗಣೇಶ ಪ್ರತಿಷ್ಠಾಪನೆ



**ಘಟಪ್ರಭಾ:** ಇಲ್ಲಿನ ಪುರಸಭೆಯಲ್ಲಿ ಭಕ್ತಿ ಭಾವದಿಂದ ಶ್ರೀ ಗಣೇಶ ಮೂರ್ತಿಯನ್ನು ಬುಧವಾರ ಪ್ರತಿಷ್ಠಾಪನೆ ಮಾಡಲಾಯಿತು. ಶ್ರೀ ಕುಮಾರ ಕರ್ಪೂರಮಠ ಪೂಜಾ ಕಾರ್ಯ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಮುಖಂಡರಾದ ಮಲ್ಲಿಕಾರ್ಜುನ ತುಕ್ಕಾನಟ್ಟಿ, ಮಲ್ಲು ಕೋಳಿ, ಸಾಮಾಜಿಕ ಕಾರ್ಯಕರ್ತ ಶ್ರೀಕಾಂತ ವಿ ಮಹಾಜನ, ಕನ್ನಡ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಡಾ. ಕೆಂಪಣ್ಣ ಚೌಕಶಿ ,ಕನ್ನಡ ಸೇನೆ ತಾಲೂಕು ಅಧ್ಯಕ್ಷ ಅಪ್ಪಾಸಾಬ ಮುಲ್ಲಾ, ಸಲೀಂ ಕಬ್ಬೂರ, ಸುರೇಶ್ ಪೂಜೇರಿ, ಶಶಿ ಚೌಕಶಿ, ಸಿಬ್ಬಂದಿಗಳಾದ ಲಕ್ಷ್ಮಣ್ ಹುಣಶ್ಯಾಳಿ, ನಿಜೇಶ್ ಮಾಲದಿನ್ನಿ ,ರಮೇಶ್ ತಂಗೆವ್ವಗೋಳ, ಅಕ್ಷಯ ಮಾನಗಾಂವಿ, ಮಹಾಂತೇಶ ದೊಡಲಿಂಗಪ್ಪಗೋಳ, ಸಿಬ್ಬಂದಿ ವರ್ಗ ಭಾಗವಹಿಸಿದ್ದರು.

## ಶನಿವಾರ ನಾಟಕ ಪ್ರದರ್ಶನ



ಗೋಕಾಕ : ಜೇವರ್ಗಿಯ ವಿಶ್ವಜ್ಯೋತಿ ಶ್ರೀ ಪಂಚಾಕ್ಷರಿ ನಾಟ್ಯ ಸಂಘದ ಹಾಸ್ಯ ಕಲಾವಿದರಾದ ಮಾರುತಿ ಶೆಟ್ಟಿ ಇವರ ಸಹಾಯಾರ್ಥ ಶನಿವಾರ ದಿನಾಂಕ 30 ರಂದು ಮಧ್ಯಾಹ್ನ 3:15ಕ್ಕೆ ಹಾಗೂ ಸಂಜೆ 6:30ಕ್ಕೆ "ಕುಂಟ ಕೋಣ ಮೂಕ ಜಾಣ" ನಾಟಕವು ಗೋಕಾಕ ನಗರದಲ್ಲಿ ಪ್ರದರ್ಶನಗೊಳ್ಳಲಿದೆ ಎಂದು ಸಂಘದ ಒಡೆಯರಾದ ಜೇವರ್ಗಿ ರಾಜಣ್ಣ ಅವರು ತಿಳಿಸಿದ್ದಾರೆ.

ಈ ನಾಟಕದಲ್ಲಿ ಗಿಚ್ಚಿ ಗಿಲಿಗಿಲಿ ಖ್ಯಾತಿಯ ನೀಲಾ ಜೇವರ್ಗಿ, ಕಾಮಿಡಿ ಕಿಲಾಡಿಗಳು ಖ್ಯಾತಿಯ ಸುಜಾತಾ ಜೇವರ್ಗಿ, ಮಾರುತಿ ಶೆಟ್ಟಿ, ಪ್ರಮುಖ ಹಾಸ್ಯ ಪಾತ್ರಗಳಲ್ಲಿ ಕಾಣಿಸಿಕೊಳ್ಳುವರು. ಕಲಾಪೋಷಕರು ಅಂದು ಆಗಮಿಸಿ ರಂಗ ಕಲಾವಿದರಿಗೆ ಸಹಾಯ ನೀಡಬೇಕೆಂದು ಕೋ-ರಿದ್ದಾರೆ.

# ಧರ್ಮ ರಕ್ಷಣೆಗಾಗಿ ಧರ್ಮಸ್ಥಳ ಚಲೋ ಜಿಲ್ಲೆಯಿಂದ ಸಹಸ್ರಾರು ಕಾರ್ಯಕರ್ತರು: ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ



**ಬೆಳಗಾವಿ.**ಸೆಪ್ಟಂಬರ್ 1 ರಂದು ನಡೆಯುವ ಧರ್ಮ ರಕ್ಷಣೆಗಾಗಿ ಧರ್ಮಸ್ಥಳ ಚಲೋ ಕಾರ್ಯಕ್ರಮದ ಪೂರ್ವಭಾವಿ ಸಭೆ ನಡೆಯಿತು ಸಭೆಯನ್ನು ಉದ್ದೇಶಿಸಿ ಬಿಜೆಪಿ ಜಿಲ್ಲಾಧ್ಯಕ್ಷ ಸುಭಾಷ ಪಾಟೀಲ ಮಾತನಾಡಿ ಧರ್ಮಸ್ಥಳದ ವಿಚಾರವಾಗಿ ರಾಜ್ಯ ಸರ್ಕಾರದ ಧೋರಣೆಯನ್ನು ಖಂಡಿಸಿ ಧರ್ಮಸ್ಥಳದಲ್ಲಿ ಸೆಪ್ಟೆಂಬರ್ 1 ರಂದು ಮಧ್ಯಾಹ್ನ 2 ಗಂಟೆಗೆ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದು ರಾಜ್ಯದ ಎಲ್ಲ ವಿಧಾನಸಭಾ ಕ್ಷೇತ್ರಗಳಿಂದ ಲಕ್ಷಾಂತರ ಜನ ಕಾರ್ಯಕರ್ತರು ಭಾಗವಹಿಸಲಿದ್ದಾರೆ ಬೆಳಗಾವಿ ಜಿಲ್ಲೆಯಿಂದಲೂ ಎಲ್ಲ ಮತಕ್ಷೇತ್ರದಿಂದ ಸಾವಿರಾರು ಸಂಖ್ಯೆಯಲ್ಲಿ ಜನ ಭಾಗವಹಿಸಿ ಧರ್ಮ ರಕ್ಷಣೆಯ ಹೋರಾಟದಲ್ಲಿ ಭಾಗವಹಿಸೋಣ ಎಂದು ಹೇಳಿದರು ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಅನಿಲ ಬೆನಕೆ ಮಾತನಾಡಿ ಸೆಪ್ಟೆಂಬರ್ 1 ರಂದು ಧರ್ಮಸ್ಥಳದಲ್ಲಿ ನಡೆಯುವ ಪ್ರತಿಭಟನೆಯಲ್ಲಿ ಸಾರ್ವಜನಿಕರು, ಹಿಂದೂ ಪರ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸಿ ಪ್ರತಿಭಟನಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕರೆ ನೀಡಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಅರವಿಂದ ಪಾಟೀಲ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಧನಶ್ರೀ ದೇಸಾಯಿ,ಸಂದೀಪ ದೇಶಪಾಂಡೆ ,ಮಂಡಲ ಅಧ್ಯಕ್ಷರಾದ ಬಸವರಾಜ ಸಾಣಿಕೊಪ್ಪ, ಯುವರಾಜ ಜಾಧವ, ಮಹಾದೇವ ಶೆಕ್ಕಿ ,ಡಾ.ಕೆ ವಿ ಪಾಟೀಲ, ಭೀಮಶಿ ಭರಮಣ್ಣವರ,ಜಿಲ್ಲಾ ಉಪಾಧ್ಯಕ್ಷರಾದ, ಪ್ರಮೋದ ಕೊಚೇರಿ ,ಮಾರುತಿ ಕೊಪ್ಪದ, ಶಾಮಾನಂದ ಪೂಜೇರಿ ,ಸುನೀಲ ಮಡ್ಡಿಮನಿ, ಸಂತೋಷ ದೇಶನೂರ, ಓಬಿಸಿ ಮೋರ್ಚ್ ಜಿಲ್ಲಾ ಅಧ್ಯಕ್ಷರಾದ ಉಮೇಶ್ ಪುರಿ, ಎಸ್ ಸಿ ಮೋರ್ಚಾ ಜಿಲ್ಲಾಧ್ಯಕ್ಷರಾದ ಯಲ್ಲೇಶ್ ಕೋಲಕಾರ, ಚೇತನ್ ಅಂಗಡಿ,ಯಲ್ಲಪ್ಪ ಕುರಿ, ಶಂಕರ ಹುರಕಡ್ಲಿ,ಸಂಜಯ ಕುಬಲ್, ಮಲ್ಲಪ್ಪ ಮಾ-ರಿಹಾಳ, ವಿಶಾಲ ಬೋಗುರ, ಮನೋಜ ಪಾಟೀಲ,ಪ್ರಶಾಂತ ಅಮ್ಮಿನಭಾವಿ, ಶ್ರೀಕಾಂತ ಇಟಗಿ, ರವೀಂದ್ರ ಹರ್ವಿ ಪ್ರಮುಖರು ಉಪಸ್ಥಿತರಿದ್ದರು.

# ಹಿಂದೂ ಧಾರ್ಮಿಕ ಭಾವನೆ ಇಲ್ಲದ ವ್ಯಕ್ತಿಗಳಿಂದ ಚಾಮುಂಡೇಶ್ವರಿ ಪೂಜೆ  ಹಿಂದೂ ವಿರೋಧಿ ನೀತಿ



**ಬೆಳಗಾವಿ:** ಹಿಂದೂ ಧಾರ್ಮಿಕ ಆಚರಣೆಯಲ್ಲಿ ನಂಬಿಕೆ ಇಲ್ಲದ, ಮೂರ್ತಿ ಪೂಜೆಯನ್ನು ಒಪ್ಪದ, ತಮ್ಮ ಮಸೀದಿಗೆ ತಮ್ಮನ್ನ ಕರೆಯಿಸಿಕೊಳ್ಳದ ಸಾಹಿತಿ ಭಾನು ಮುಷ್ತಾಕ್ ಅವರನ್ನ ವಿಶ್ವವಿಖ್ಯಾತ ದಸರಾ ಉದ್ಘಾಟನೆಗೆ ಚಾಮುಂಡೇಶ್ವರಿ ಕರೆಯಿಸಿಕೊಳ್ಳಲು ಸಾಧ್ಯವೆ? ಇವರನ್ನು ಕರೆಯಲು ಮುಂದಾಗಿರುವ ಸರ್ಕಾರದ ಕ್ರಮ ಹಿಂದೂ ವಿರೋಧಿ ನೀತಿಯಾಗಿದೆ ಎಂದು ಮಾಜಿ ಶಾಸಕ ಸಂಜಯ ಪಾಟೀಲ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕನ್ನಡ ನಾಡಿನ ನಾಡಹಬ್ಬ ದಸರಾ ಉದ್ಘಾಟನೆ ಎಂದರೆ ತಾಯಿ ಚಾಮುಂಡೇಶ್ವರಿ ಮೂರ್ತಿ ಪೂಜೆ ನೆರವೇರಿಸಿ ತಾಯಿಗೆ ಪುಷ್ಪವೃಷ್ಟಿ ಮಾಡುವ ಪದ್ಧತಿ. ಇಂಥ ಹಿಂದೂ ಧಾರ್ಮಿಕ ಕಾರ್ಯವನ್ನು ಅನ್ಯಧರ್ಮೀಯರಿಂದ ಒಪ್ಪಲು ಸಾಧ್ಯವಿಲ್ಲದೆ ಇದ್ದಾಗ ಹಿಂದೂಗಳ ಭಾವನೆ ಕೆಣ-ಕಲು ಹೊರಟಿರುವ ಸರ್ಕಾರದ ಕ್ರಮ ಖಂಡನೀಯ ಎಂದು ತಿಳಿಸಿದರು.

2023ರಲ್ಲಿ ಜನಸಾಹಿತ್ಯ ಸಭೆಯಲ್ಲಿ ಬಾನು ಮುಷ್ತಾಕ್ ಅವರು ಕನ್ನಡವನ್ನು ಭುವನೇಶ್ವರಿ ತಾಯಿಗೆ ಹೋಲಿಸಿ ಅರಿಷಿನ ಕುಂಕುಮ ಬಣ್ಣದ ಕನ್ನಡ ಧ್ವಜ ಮಾಡಿದ್ದೀರಿ; ಈ ಮಧ್ಯದಲ್ಲಿ ನಾನು  ಅಲ್ಪಸಂಖ್ಯಾತ ಸಾಹಿತಿಯಾಗಿ ಎಲ್ಲಿ ನಿಲ್ಲಲಿ ಎಂದು ಕೇಳಿದ್ದರು. ಕನ್ನಡ ನಾಡಿನ ಭುವನೇಶ್ವರಿ ತಾಯಿಯ ಹಳದಿ ಕೆಂಪು ಧ್ವಜ ಒಪ್ಪದ ಇವರು, ಹಿಂದೂ ಧರ್ಮದೇವತೆ ಚಾಮುಂಡೇಶ್ವರಿಯನ್ನು ಒಪ್ಪಲು ಸಾಧ್ಯವೆ? ಎಂದಿದ್ದಾರೆ.

ಇವರನ್ನು ಹಿಂದೂ ಧಾರ್ಮಿಕ ಉತ್ಸವ ದಸರಾ ಉದ್ಘಾಟನೆಗೆ ಯಾವ ವಿಚಾರಕ್ಕಾಗಿ ಸರ್ಕಾರ ಕರೆದಿದೆ? 9 ದಿನಗಳ ಕಾಲ ತಾಯಿ ದುರ್ಗೆಯನ್ನು ಪೂಜಿಸಿ ಚಾಮುಂಡೇಶ್ವರಿ ದುಷ್ಟಶಕ್ತಿ ಮಹಿಷಾಸುರನನ್ನು ಸಂಹ-ರಿಸಿದ ಈ ಹಬ್ಬ ಸಾಂಸ್ಕೃತಿಕ ಹಬ್ಬವಲ್ಲ; ಇದು ಹಿಂದೂ ಧಾರ್ಮಿಕ ಉತ್ಸವ ಹಿಂದೂಗಳ ಭಾವನೆಗೆ ಧಕ್ಕೆ ತರುವುದಕ್ಕೆ ಹೊರಟಿರುವುದು ಯಾವ ಪುರುಷಾರ್ಥಕ್ಕಾಗಿ ಎಂದು ಕೇಳಿದ್ದಾರೆ. ಕನ್ನಡ ಭುವನೇಶ್ವರಿ, ನಾಡಿನ ಧ್ವಜ ಒಪ್ಪದ ಬಾನು ಮುಷ್ತಾಕ್ ರವರು, ಚಾಮುಂಡಿ ಬೆಟ್ಟ ಹತ್ತಕೂಡದು, ತಕ್ಷಣ ಸರ್ಕಾರ ಅವರಿಗೆ ನೀಡಿರುವ ಆಹ್ವಾನ ಹಿಂಪಡೆದು ಹಿಂದೂ ಧಾರ್ಮಿಕ ನಂಬಿಕೆಯಲ್ಲಿ ಅಚಲ ವಿಶ್ವಾಸ ಹೊಂದಿದ ಆಚಾರ ವಿಚಾರ ಬಲ್ಲವರನ್ನು ಆಹ್ವಾನಿಸಬೇಕು ಎಂದು ಒತ್ತಾಯಿಸಿದರು.

ಇಂಡಿ ಒಕ್ಕೂಟ ಶಬರಿಮಲೆಗೆ ಧಾರ್ಮಿಕ ನಂಬಿಕೆ ಇಲ್ಲದ ಸ್ಟಾಲಿನ್ ಕರೆಯುತ್ತಾರೆ, ಧರ್ಮಸ್ಥಳ ಬಗ್ಗೆ ಅನಾಮಿಕ ವ್ಯಕ್ತಿ ಬುರಡೆ ತಂದರೆ ಧರ್ಮಸ್ಥಳವನ್ನೆ ಅಗೆಯಲು ಪ್ರಾರಂಭಿಸುತ್ತಾರೆ. ಯಾರು ಕೇಳದ ಟಿಪ್ಪು ಜಯಂತಿ ಮಾಡತಾರೆ. ಡಿಕೆಶಿಯವರು ಚಾಮುಂಡಿ ಬೆಟ್ಟ ಹಿಂದೂಗಳಿಗೆ ಮಾತ್ರ ಸಂಬಂದಿಸಿದ್ದಲ್ಲಎನ್ನುವ ಇವರು ರಾಜ್ಯದ ವಕ್ಫ್ ಆಸ್ತಿ ಇಡಿ ರಾಜ್ಯದ ಎಲ್ಲ ಜನಾಂಗದವ-ರಿಗೆ ಸಂಬಂಧಿಸಿದ್ದು ಅಂತ ಹೇಳುವ ತಾಕತ್ತು ಇದೆಯಾ? ಇವರು ಎನು ಮಾಡಲು ಹೊರಟಿದ್ದಾರೆ? ಬಾನು ಮುಷ್ತಾಕ್ ಒಬ್ಬರು ಸಾಹಿತಿ.  ಅದರ ಬಗ್ಗೆ ಗೌರವ ಇದೆ; ಆದ-'ರೆ ಧಾರ್ಮಿಕತೆಯಲ್ಲಿ ನಂಬಿಕೆ ಇಲ್ಲದ ಅವರನ್ನು ಕರೆದರೆ, ಅವರು ಧಾರ್ಮಿಕ ಉತ್ಸವಕ್ಕೆ ದೀಪವನ್ನು ಬೆಳಗುತ್ತಾರಾ? ಚಾಮುಂಡೇಶ್ವರಿಯನ್ನು ನಂಬುತ್ತಾರಾ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದರು.

ಇದನ್ನು ಸ್ಪಷ್ಟಪಡಿಸಿದ ನಂತರ ಅವರನ್ನ ಉದ್ಘಾಟನೆಗೆ ಕರೆಯಲಿ; ಇಲ್ಲದಿದ್ದರೆ ಅಹ್ವಾನ ಹಿಂಪಡೆಯಬೇಕು. ಇದನ್ನು ಒಪ್ಪಲು ಸಾಧ್ಯವೆ ಇಲ್ಲ. ದಸರಾದಲ್ಲಿ ಸಾಂಸ್ಕೃತಿ-ಕ ಉತ್ಸವ ಒಂದು ಭಾಗ ಅದರಲ್ಲಿ ಭಾಗವಹಿಸಿದ್ದಾರೆ ಎಂದರೆ ಮೂರ್ತಿ ಪೂಜೆ ಮಾಡದವರನ್ನು ಕರೆಯುವುದು ಸರಿಯಲ್ಲ ಎಂದು ಟೀಕಿಸಿದರು.

ಚಾಮುಂಡೇಶ್ವರಿ ಬೆಟ್ಟಕ್ಕೆ ಹೋಗಿದ್ದಾರೆ ಎಂದರೆ ಅವರು ಮೂರ್ತಿಪೂಜೆ ಒಪ್ಪಲ್ಲ. ಕುವೆಂಪು ಅವರು ಕರ್ನಾಟಕವು ಭಾರತ ಮಾತೆಯ ತನುಜಾತೆ ಎಂದಿದ್ದಾರೆ. ಬಾನು ಅವರು ಕನ್ನಡ ತಾಯಿಗೆ ಅಪಮಾನ ಮಾಡಿದ ರೀತಿಯಲ್ಲಿ ಚಾಮುಂಡೇಶ್ವರಿ ತಾಯಿಯನ್ನು ಒಪ್ಪದೆ ಆ ತಾಯಿಗೂ ಅಪಮಾನ ಮಾಡುವುದಿಲ್ಲ ಎಂದು ಹೇಳಲು ಸಾಧ್ಯವಿಲ್ಲ. ಸರ್ಕಾರ ಏನು ಮಾಡಲು ಹೊರಟಿದೆ? ಎಂದು ತರಾಟೆಗೆ ತೆಗೆದುಕೊಂಬಾನು. ಕೊಡಗಿನ ದೀಪಾ ಬಸ್ತಿ ಅವರಿಗೂ ಸೇರಿ ಸಾಹಿತ್ಯ ಪ್ರಶಸ್ತಿ ಬಂದಿರುವದು ಅವರನ್ನ ಮರೆತಿರುವದು ಯಾಕೆ? ಧಾರ್ಮಿಕ ವಿಚಾರಗಳಲ್ಲಿಯು ರಾಜಕೀಯ ಮಾಡುವದೆ ಕಾಂಗ್ರೆಸ್ ದವರ ಅಲ್ಪಸಂಖ್ಯಾತರ ಒಲೈಕೆಯ  ಕುತಂತ್ರವಾಗಿದೆ ಎಂದಿದ್ದಾರೆ

# ಹಣ ಸಂಪಾದನೆಗಿಂತ ಆರೋಗ್ಯ ಸಂಪತ್ತು ಬಹಳ ಮುಖ್ಯ



**ಗೋಕಾಕ** (ಮೂಡಲಗಿ) ಈ ಆದ-ನಿಕ ಯುಗದಲ್ಲಿ  ಹಣ ಸಂಪಾದನೆಗಿಂತ ಆರೋಗ್ಯ ಸಂಪತ್ತು ಬಹಳ ಮುಖ್ಯ ಈಗಿನ ಜನರ ಜೀವನ ಶೈಲಿ ತುಂಬಾ ಬದಲಾವಣೆ ಹೊಂದಿರುವುದರಿಂದ ಆರೋಗ್ಯದ ಮೇಲೆ ತುಂಬಾ ಕೆಟ್ಟ ಪರಿಣಾಮ ಬೀರುತ್ತದೆ ಇದ-ರಿಂದಾಗಿ ರೋಗಗಳಿಗೆ ತುತ್ತಾಗಿ ಜೀವನ ನಾಶ ಮಾಡಿಕೊಳ್ಳುವಂತ ಪರಿಸ್ಥಿತಿ ನಿರ್ಮಾಣವಾಗಿದೆ, ಆರೋಗ್ಯದ ಬಗ್ಗೆ ಕಾಳಜಿವಹಿಸಿ ಜೀವನ ನಡೆಸಬೇಕು ಎಂದು ಸುಣಧೋಳಿ ಜಡಿಸಿದ್ದೇಶ್ವರ ಪೀಠಾಧಿಪತಿ ಶಿವಾನಂದ ಮಹಾಸ್ವಾಮಿಜಿ ಹೇಳಿದರು.

ಅವರು ತಾಲೂಕಿನ ಸುಣಧೋಳಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಲಯನ್ಸ್ ಕ್ಲಬ್ ಮತ್ತು ರೋಟರಿ ಕ್ಲಬ್ ಗೋಕಾಕ-ಮೂಡಲಗಿ, ಬಿ.ಎಸ್.ಮದಭಾಂವಿ, ಸುಣ ಧೋಳಿ ಮಹಿಳಾ ಸೌಹಾರ್ದ ಸಹಕಾರಿ ಸಂಘ, ತಾಲೂಕಾ ಆರೋಗ್ಯ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ನಿವೃತ್ತ ಸರಕಾರಿ ನೌಕರ ಸಂಘದ ಆಶ್ರಯದಲ್ಲಿ ಹಮ್ಮಿಕೊಂಡಿದ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಚರ್ಮ ನೇತ್ರ ತಜ್ಞಡಾ.ಸಂದೀಪ್ ಕೋಲಕಾರ, ಚಿಕ್ಕ ಮಕ್ಕಳ ತಜ್ಞ ಡಾ.ಬಿ.ಎಸ್.ಮದಭಾವಿ, ರೋಗ ತಜ್ಞ ಡಾ ಪ್ರೀತಿ ಚೌದರಿ, ಶಸ್ತ್ರಚಿಕಿತ್ಸಾ ತಜ್ಞ ಅಮರ ಮುರಗೋಡ, ಹೃದಯ ರೋಗ ತಜ್ಞ ಡಾ.ಎಸ್.ಎ.ಕಮತ, ಭೈರನಟ್ಟಿ ರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಇಮ್ರಾನ್ ಅಂಬಿ ಅವರು ಜನರ ಆರೋಗ್ಯವನ್ನು ತಪಾಸಿಸಿದರು.

ಈ ಶಿಬಿರದಲ್ಲಿ ನೇತ್ರ ತಪಾಸಣೆ-230 ಜನರು, ಚರ್ಮ ಕಾಯಿಲೆ-85 ಜನರು, ಹೃದಯ ರೋಗ-27 ಜನರು ಬಿಪಿ ಮತ್ತು -184 ಜನರು, ಮೂಳೆಗಳ ಸಮಸ್ಯೆ-142 ಜನರು ಶಿಬಿರದಲ್ಲಿ ತಪಾಸಿಸಿಕೊಂಡರು.

ಈ ಸಂದರ್ಭದಲ್ಲಿ ಸೊಗಲ ಮಠದ ಶ್ರೀ ಅವಧೂತ ಚಿದಾನಂದ ಶ್ರೀಗಳು, ಲಯನ್ಸ್ ಕ್ಲಬ್ ಗೋಕಾಕ್ ನಿಕಟಪೂರ್ವ ಅಧ್ಯಕ್ಷ ಅಶೋಕ್ ಪಾಟೀಲ,ಮೂಡಲಗಿ ಲಯನ್ಸ್ ಕ್ಲಬ್ ಪರಿವಾರ ಅಧ್ಯಕ್ಷ ವಿಶಾಲ ಶೀಲವಂತ, ಡಾ ಅಶೋಕ ಮುರಗೋಡ, ಶಂಕರ್ ದೊಡಮನಿ, ಹೆಚ್ .ಬಿ.ಪಾಟೀಲ್ ಮತ್ತಿತರರು ಉಪಸ್ಥಿತರಿದ್ದರು. ಶಿಕ್ಷಕ ಪ್ರಕಾಶ್ ಮೇತ್ರಿ ನಿರೂಪಿಸಿ ಸ್ವಾಗತಿಸಿದರು.

# ಚವಿವ ಸಂಘದಲ್ಲಿ ಮಣ್ಣಿನ ಗಣಪನ ಪ್ರತಿಷ್ಠಾಪನೆ



**ಮುಗಳಖೋಡ:** ಪಟ್ಟಣದ ಪ್ರತಿಷ್ಠಿತ ವಿದ್ಯಾಸಂಸ್ಥೆಯಾದ ಚನ್ನಬಸವೇಶ್ವರ ವಿದ್ಯಾವರ್ಧಕ ಸಂಘದ ಆವರಣದಲ್ಲಿ ಪರಿಸರ ಸ್ನೇಹಿ ಮಣ್ಣಿನ ಗಣಪನ ಪ್ರತಿಷ್ಠಾಪನೆ ಮಾಡಿ ವಿವಿಧ ರಾಸಾಯನಿಕ ಬಳಕೆಯಿಂದ ಮಾಡಿರುವ ಗಣಪನ ಮೂರ್ತಿಯನ್ನು ಹೊರತುಪಡಿಸಿ, ತಮ್ಮ ತಮ್ಮ ಮನೆಗಳಲ್ಲಿ ಪರಿಸರ ರಕ್ಷಣೆಗಾಗಿ ಮಣ್ಣಿನ ಗಣಪನ ಮೂರ್ತಿಯನ್ನು ಪ್ರತಿಷ್ಠಾಪಿಸಿ ಎಂದು  ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲಾಯಿತು.

ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿ ವೃಂದದವರು ಸೇರಿ ಗಣಪನ ಮೂರ್ತಿಯನ್ನು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸುತ್ತಾ ಮೆರವಣಿಗೆ ಮೂಲಕ ವಿದ್ಯಾಸಂಸ್ಥೆಯ ಆವರಣಕ್ಕೆ ತಂದು ಪ್ರತಿಷ್ಠಾಪಿಸಿ ವಿವಿಧ ಕೈಂಕರ್ಯಗಳ ಮೂಲಕ ವಿಶೇಷವಾಗಿ ಪೂಜಿಸಿ ಎಲ್ಲರಿಗೂ ಪ್ರಸಾದ ನೀಡಿ ಮಂಗಳ ಹಾಡಿ ವಿಶೇಷವಾಗಿ ಗಣೇಶೋತ್ಸವವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕೆಪಿಸಿಸಿ ಅಸಂಘಟಿತ ಕಾರ್ಮಿಕ ವರ್ಗದ ರಾಜ್ಯ ಉಪಾಧ್ಯಕ್ಷ ಡಾ. ಸಿ ಬಿ ಕುಲಿಗೋಡ, ಎಲ್ಲ ಅಂಗ ಸಂಸ್ಥೆಗಳ ಮುಖ್ಯಸ್ಥರು, ಸಿಬ್ಬಂದಿ ವರ್ಗ, ವಿದ್ಯಾರ್ಥಿ ವೃಂದ ಹಾಗೂ ಡಾ. ಸಿ ಬಿ ಕುಲಿಗೋಡ ಪದವಿ ಮಹಾವಿದ್ಯಾಲಯದ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕ್ರೀಡೆಯಲ್ಲಿ ಬ್ರಹ್ಮಲಿಂಗೇಶ್ವರ ಶಾಲೆಯ ವಿಧ್ಯಾರ್ಥಿಗಳ ಸಾಧನೆ



**ತಾಳಿಕೋಟೆ,** ಪಟ್ಟಣದ ಎಸ್. ಎಸ್. ವಿದ್ಯಾ ಸಂಸ್ಥೆಯಡಿಯಲ್ಲಿ ನಡೆಯುತ್ತಿರುವ ಶ್ರೀ ಬ್ರಹ್ಮಲಿಂಗೇಶ್ವರ ಪ್ರಾಥ-ಮಿಕ ಶಾಲೆ ವಿದ್ಯಾರ್ಥಿಗಳು ತಾಳಿಕೋಟಿ ವಲಯ ಮಟ್ಟದ ಕ್ರೀಡಾ ಕೂಟದಲ್ಲಿ ವಿವಿಧ ಕ್ರೀಡೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.

ಬಾಲಕರ ಖೋ-ಖೋದಲ್ಲಿ ಪ್ರಥ-ಮ ಸ್ಥಾನ. ಬಾಲಕರ ಕಬ್ಬಡ್ಡಿಯಲ್ಲಿ ಪ್ರಥಮ ಸ್ಥಾನ, ಬಾಲಕರ ವಾಲಿಬಾಲ್‌ನಲ್ಲಿ ಪ್ರಥಮ ಸ್ಥಾನ. ಬಾಲಕರ 400 ಮೀಟರ್ ಓಟದಲ್ಲಿ ಪ್ರಥಮ ಸ್ಥಾನ. ಬಾಲಕರ 600 ಮೀಟ-ರ್ ಓಟದಲ್ಲಿ ದ್ವಿತೀಯ ಸ್ಥಾನ, ಬಾಲಕರ ಗುಂಡು ಎಸೆತದಲ್ಲಿ ಪ್ರಥಮ ಸ್ಥಾನ , ಹಾಗೂ  ಬಾಲಕಿಯರ ಖೋ -ಖೋ ದಲ್ಲಿ ದ್ವಿತೀಯ ಸ್ಥಾನ ಪಡೆದು ಶಾಲೆ ಕೀರ್ತಿಯನ್ನು ಹೆಚ್ಚಿಸಿಸಿದ್ದಾರೆ.

ಈ ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಎಚ್ ಎಸ್ ಪಾಟೀಲ ಕಾರ್ಯದರ್ಶಿ ಸಚೇನ್ ಎಚ್ ಪಾಟೀಲ, ಆಡಳಿತಾಧಿಕಾರಿ ಕಿರಣ್ ಎಚ್ ಪಾಟೀಲ, ರವಿಗೌಡ ಪಾಟೀಲ, ಮುಖ್ಯಗುರುಗಳಾದ ಜಗದೀಶ ಕೊಣ್ಣೂರ, ಹಾಗೂ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್ ಎಸ್ ಪಾಟೀಲ, ಸಮಸ್ತ ಸಿಬ್ಬಂದಿ ವರ್ಗ ಹಾಗೂ ಬಿಪಿಎಡ್ ಕಾಲೇಜಿನ ಪ್ರಾಚಾರ್ಯರು. ಪ್ರ.ಶಿಕ್ಷಣಾರ್ಥಿಗಳು ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಆಲೂರ ಗ್ರಾಮದಲ್ಲಿ ಆನೆಕಾಲು ರೋಗ ಸಮೀಕ್ಷೆ 120 ಜನರ ರಕ್ತ ಲೇಪನ ಸಂಗ್ರಹ



**ಆಲೂರ:** ಆನೆಕಾಲು ರೋಗವು ಪೈಲೇ-ರಿಯಾ ಸೊಂಕುವುಳ್ಳ ಕ್ಯೂಲೆಕ್ಸ್ ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ ಬಹು ಮುಖ್ಯವಾಗಿ ನಾವು ವಾಸಿಸುವ ಸುತ್ತಮುತ್ತಲ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕಿದೆ ಎಂದು ಆರೋಗ್ಯ ಇಲಾಖೆಯ ಸಿಬ್ಬಂದಿ ವ್ಹಿ ಬಿ ಡಿ ಮೇಲ್ವಿಚಾರಕ ಎಸ್ ಸಿ ರುದ್ರವಾಡಿ ಹೇಳಿದರು.

ತಾಲ್ಲೂಕಿನ ಆಲೂರ ಗ್ರಾಮದಲ್ಲಿ ಆನೆಕಾಲು ರೋಗ ಸಮೀಕ್ಷೆ ರಾತ್ರಿ 120 ಜನರ ರಕ್ತ ಲೇಪನ ಸಂಗ್ರಹಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದ,

ರೋಗದ ನಿಯಂತ್ರಣಕ್ಕಾಗಿ ಹಾಗೂ ರೋಗಿಗಳ ಪತ್ತೆ ಮಾಡುವುದು ಅತ್ಯಂತ ಕಷ್ಟಕರವಾಗಿದ್ದು, ಆನೆಕಾಲು ರೋಗದ ಪತ್ತೆಗಾಗಿ ರಾತ್ರಿ ವೇಳೆಯಲ್ಲಿಯೇ ರಕ್ತದ ಮಾದರಿ ಸಂಗ್ರಹಿಸಬೇಕಾಗುತ್ತದೆ ಆರೋಗ್ಯ ಇಲಾಖೆಯ ನಿರ್ದೇಶನದಂತೆ ಪ್ರಾಥಮಿಕ ಆರೋಗ್ಯ ಕೇಂದ್ರವಾರು ಸಮೀಕ್ಷೆಯನ್ನು ಹಮ್ಮಿಕೊಳ್ಳಲಾಗಿರುತ್ತದೆ

ತಡವಾಗಿ ಕಾಣಿಸಿಕೊಳ್ಳುವ ಸೋಂಕು: ಆನೆಕಾಲು ರೋಗದವರಿಗೆ ಕಚ್ಚಿದ ಸೊಳ್ಳೆ, ಆರೋಗ್ಯವಂತರಿಗೆ ಕಚ್ಚಿದರೂ ರೋಗ ಹರಡುತ್ತದೆ. ಈ ರೋಗವು ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದೊಬ್ಬ-ರಿಗೆ ಹರಡುತ್ತದೆ. ಸೊಳ್ಳೆ ಕಚ್ಚಿ 5 ರಿಂದ 7 ವರ್ಷಗಳವರೆಗೆ ಸೋಂಕಿರುವುದು ಕಾಣುವುದಿಲ್ಲ. ಮೊದಲ ಹಂತದಲ್ಲಿ ಆಗಾಗ್ಗೆ ಜ್ವರ ಕಾಣಿಸಿಕೊಳ್ಳುತ್ತದೆ. ಹಂತ ಹಂತವಾಗಿ, ಕಾಲು, ಕೈ, ವೃಷಣ, ಸ್ತನಗಳಲ್ಲಿ ಊತ ಕಂಡು ಬರುತ್ತಿರುತ್ತದೆ. ರಕ್ತ ಪರೀಕ್ಷೆಯಲ್ಲಿ ಆನೆಕಾಲು ರೋಗದ ರೋಗಾಣು ಪತ್ತೆಯಾದಲ್ಲಿ ಅದನ್ನು ಡಿಇಸಿ ಮಾತ್ರೆಗಳ ಮೂಲಕ ನಿಯಂತ್ರಿಸಬಹುದು ಇದಕ್ಕಾಗಿ ಶಿಬಿರಗಹಳನ್ನು ಆಯೋಜಿಸಿ, ರೋಗಿಗಳನ್ನು ಗುರುತಿಸುವ ಕಾರ್ಯ ಮಾಡಲಾಗುತ್ತಿದೆ ಎಂದರು.

ಈ ಕುರಿತು ಪ್ರಭಾರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ ಎಸ್ ಗೌಡರ ಅವರು ಮಾತನಾಡಿ,ರೋಗಿಗಳ ರಕ್ತದ ಮಾದರಿಗಳನ್ನು ಸಂಗ್ರಹಿಸಲಾಗುತ್ತದೆ ಈ ಕಾರ್ಯಕ್ಕಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಗರಸಂಗಿ ಸಿಬ್ಬಂದಿಗಳು ಆಲೂರ ಗ್ರಾಮದಲ್ಲಿ ರಾತ್ರಿ 10: ಘಂಟೆಯಿಂದ ಮಧ್ಯರಾತ್ರಿ ವರಗೆ ಪರೀಕ್ಷೆ ನಡೆಸಿದ್ದರು ಈ ಸಂದರ್ಭದಲ್ಲಿ ಸುಮಾರು 120 ಜನರ ರಕ್ತ ಲೇಪನಗಳನ್ನು ಸಂಗ್ರಹಿಸಿ ಅವುಗಳನ್ನು ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ತಲುಪಿಸಲಾಗುತ್ತದೆ.

ಈ ಸಮೀಕ್ಷಾ ಕಾರ್ಯದಲ್ಲಿ ಗ್ರಾಮ ಪಂಚಾಯತ ಸದಸ್ಯರು ಹಾಗೂ ಗ್ರಾಮದ ಪ್ರಮುಖರು ಗ್ರಾಮ ಪಂಚಾಯತ ಸಿಬ್ಬಂದಿಗಳು ರಾತ್ರಿ ಆರೋಗ್ಯ ಸಿಬ್ಬಂದಿಗಳೊಂದಿಗೆ ಇದ್ದು ಸಹಕಾರ ನೀಡಿದರು ಸ್ಥಳೀಯ ಜನರಿಗೆ ರಕ್ತ ಪರೀಕ್ಷೆ ಮಾಡಿಸಿಕೊಳ್ಳಲು ಮನವೊಲಿಸಲಾಯಿತ್ತು ಎಂದರು.

ಈ ಸಂದರ್ಭದಲ್ಲಿ ಪ್ರಭಾರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ ಎಸ್ ಗೌಡರ,ಆರೋಗ್ಯ ಇಲಾಖೆಯ ಸಿಬ್ಬಂದಿಗಳಾದ ವ್ಹಿ ಬಿ ಡಿ ಮೇಲ್ವಿಚಾರಕ ಎಸ್ ಸಿ ರುದ್ರವಾಡಿ, ಆರೋಗ್ಯ ನಿರೀಕ್ಷಣಾಧಿಕಾರಿ ಎಸ್ ಬಿ ಹೂಗಾರ ಸಮುದಾಯ ಆರೋಗ್ಯ ಅಧಿಕಾರಿ ಸರಸ್ವತಿ ಸೈದಣ್ಣವರ ಹಾಗೂ ವಾಹನ ಚಾಲಕ ಮುತ್ತು ಬಾಗೇವಾಡಿ ಆಶಾ ಕಾರ್ಯಕರ್ತೆಯರಾದ ರೇಣುಕಾ ಹಳೆಮ್ಮನಿ ನಿಂಗಮ್ಮ ಹಿರೇಗೌಡರ, ಸೇ-ರಿದಂತೆ ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವುದರ ಮೂಲಕ ಕ್ರೀಡಾಕೂಟಗಳನ್ನು ಬೆಳೆಸಬೇಕು



**ರಾಯಬಾಗ:** ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವುದರ ಮೂಲಕ ಕ್ರೀಡಾಕೂಟಗಳನ್ನು ಬೆಳೆಸಬೇಕೆಂದು ಪ.ಪಂ.ಅಧ್ಯಕ್ಷ ಅಶೋಕ ಅಂಗಡಿ ಹೇಳಿದರು.

ಮಂಗಳವಾರ ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೆಳಗಾವಿ ಶಾಲಾ ಶಿಕ್ಷಣ ಇಲಾಖೆ ರಾಯಬಾಗ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಇಲ್ಲಿನ ಕ್ರೀಡಾ ಪಟುಗಳು ರಾಜ್ಯಮಟ್ಟದ ದಸರಾ ಕ್ರೀಡಾಕೂಟದಲ್ಲಿ ಜಯಗಳಿಸಿ, ತಾಲೂಕಿನ ಕೀರ್ತಿಯನ್ನು ಹೆಚ್ಚಿಸಬೇಕೆಂದರು.

ರಾಯಬಾಗ ಗ್ರಾಮೀಣ ಗ್ರಾ.ಪಂ.ಅಧ್ಯಕ್ಷೆ ಮಹಾದೇವಿ ದೀಪಾಳೆ, ಉಪಾಧ್ಯಕ್ಷೆ ಬೇಗಂ ಶಿಂಗೆ, ಪ.ಪಂ.ಸದಸ್ಯ ಸುರೇಶ ಮಾಳಿ, ಕ್ರೀಡಾ ಇಲಾಖೆ ತಾಲೂಕಾಧಿಕಾರಿ ಸಂಜೀವಕುಮಾರ ನಾಯಿಕ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಮಾಹಾವೀರ ಜೀರಗ್ಯಾಳ, ಬಿ.ಆರ್.ಸಿ ಬಸವರಾಜ ಕಾಂಬಳೆ, ಎಲ್.ಬಿ.ಬನಶಂಕರಿ , ಜೆಡ್.ಆರ್ ಮುಲ್ಲಾ, ರಾಜು ಅರಬಳ್ಳಿ, ವ್ಹಿ.ಡಿ.ಉಪಾಧ್ಯೆ ಹಾಗೂ ದೈಹಿಕ ಶಿಕ್ಷಕರು ಮತ್ತು ಕ್ರೀಡಾ ಪಟುಗಳು ಇದ್ದರು.

# ಸಮಾಜಮುಖಿ ಕೆಲಸಗಳೇ ಬದುಕಿಗೆ ಶ್ರೀರಕ್ಷೆ-ನಾಡಗೌಡ




**ತೇರದಾಳ**–ಮನುಷ್ಯರಾಗಿ ಜನ್ಮ ತಾಳುವುದೆ ಒಂದು ಸೌಭಾಗ್ಯವಾಗಿದೆ. ಆದ್ದರಿಂದ ನಾವು ಮಾಡುವ ಸಮಾಜಮುಖಿ ಕೆಲಸಗಳೇ ಬದುಕಿಗೆ ಶ್ರೀರಕ್ಷೆಯಾಗಲಿವೆ ಎಂದು ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಪ್ರವೀಣ ನಾಡಗೌಡ ಹೇಳಿದರು.

ಇಲ್ಲಿನ ಪ್ರತಿಷ್ಠಿತ ಎಸ್‌ಡಿಎಂ ಟ್ರಷ್ಟ್ ಚೇರಮನ್ ಡಾ. ಮಹಾವೀರ ದಾನಿಗೊಂಡ ಅವರ ಜನುಮ ದಿನದ ನಿಮಿತ್ತ ಅವರ ಅಭಿಮಾನಿಗಳು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶೈಕ್ಷಣಿಕವಾಗಿ ತೇರದಾಳ ಹಿರಿಮೆಯನ್ನು ಹೆಚ್ಚಿಸಿದ ಎಸ್‌ಡಿಎಂ ಟ್ರಷ್ಟ್ ಚೇರಮನ್‌ರ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಬಣ್ಣಿಸಿದರು. ಡಾ. ಮಹಾವೀರ ದಾನಿಗೊಂಡ ನಾನು ಜನಿಸಿದ ಊರಿಗೆ ಏನಾದರು ಕೊಡುಗೆ ನೀಡಬೇಕೆಂಬ ಏಕೈಕ ಉದ್ದೇಶದಿಂದ ದಾನಿಗೊಂಡ ಸಮೂಹ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಲಾಗಿದೆ. ಇದಕ್ಕೆ ಪಟ್ಟಣದ ಜನತೆಯ ಸಹಕಾರವು ಬಹಳಷ್ಟು ಇದೆ ಎಂದು ಹೇಳಿದರು.

ಪ್ರತಿಭಾ ದಾನಿಗೊಂಡ, ಡಾ. ಪುಷ್ಪದಂತ ದಾನಿಗೊಂಡ, ಪುರಸಭೆ ಮಾಜಿ ಸದಸ್ಯ ಅಜೀತ ಮಗದುಂ, ಡಾ. ಮಧುರಾ ದಾನಿಗೊಂಡ, ಜಿನ್ನಪ್ಪ ಸವದತ್ತಿ, ಅಶೋಕ ಆಳಗೊಂಡ, ಪ್ರಭು ಹಿಪ್ಪರಗಿ, ಬಾಹುಬಲಿ ಬಿಲವಡಿ, ಪ್ರಕಾಶ ಹೊಸಮನಿ, ಸುರೇಶ ಮರಡಿ, ವರ್ಧಮಾನ ಕೋರಿ, ನೇಮಣ್ಣ ಸಪ್ತಸಾಗರ, ಕುಮಾರ ಕಾಗಿ, ಬಾಳು ಮಂಗೋಜಿ, ಡಾ. ಪ್ರಭಾಕರ ಅಪರಾಜ, ರಾಜೇಂದ್ರ ಪರೀಟ, ಪ್ರವೀಣ ನಾಶಿ, ಭೀಮ ಆಳಗೊಂಡ, ಭರತೇಶ ನ್ಯಾಮಗೌಡ ಇದ್ದರು.

# ಗ್ರಾಮದಲ್ಲಿ ಶ್ರದ್ಧಾ-ಭಕ್ತಿಯಿಂದ ಬುಧವಾರದಂದು ಗಣೇಶನ ಆಗಮನ



ಉಗರಗೋಳ : ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದಲ್ಲಿ ಶ್ರದ್ಧಾ–ಭಕ್ತಿಯಿಂದ ಬುಧವಾರ ಗಣೇಶನ ಆಗಮನವಾಯಿತು.

ಗ್ರಾಮಸ್ಥರು ಉತ್ಸಾಹದಿಂದ ಗಣಪನ ಮೂರ್ತಿಗಳನ್ನು ತಮ್ಮ ಮನೆಗಳಲ್ಲಿ ತಂದು ಪ್ರತಿಷ್ಠಾಪಿಸಿದರು. ವಿಘ್ನ ನಿವಾರಕನಿಗೆ ವಿಶೇಷ ಪೂಜೆ ಸಲ್ಲಿಸಿದರು.

ಬಸವೇಶ್ವರ ದೇವಸ್ಥಾನ, ಕಲ್ಮೇಶ್ವರ ದೇವಸ್ಥಾನ, ಬೆಣ್ಣಿಕಟ್ಟಿ, ಹನುಮಂತನ ದೇವಸ್ಥಾನ, ಮಾರುಕಟ್ಟೆ ಪ್ರದೇಶ, ಗೌಟನ್ ಪ್ರದೇಶದಲ್ಲಿ ಸಾರ್ವಜನಿಕ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಯಿತು. ಗಣೇಶನ ಮೂರ್ತಿ ಮೆರವಣಿಗೆ ಕಣ್ಮನ ಸೆಳೆಯಿತು.

# ಒಬ್ಬರ ರಕ್ತದಾನ ಮೂರು ಜನರ ಜೀವ ಉಳಿಸಬಹುದು



**ಸಿಂದಗಿ** : ರಕ್ತದಾನ ಎಲ್ಲದಾನಗಳಿಗಿಂತಲೂ ಶ್ರೇಷ್ಠದಾನ. ಒಬ್ಬರ ರಕ್ತದಾನ ಮೂರು ಜನರ ಜೀವ ಉಳಿಸಬಹುದು ಎಂದು ನಿವೃತ್ತ ಪ್ರಾಚಾರ್ಯ ಲಾಯನ್ ಐ.ಬಿ.ಬಿರಾದಾರ ಹೇಳಿದರು.

ಪಟ್ಟಣದ ಪ್ರಜಾಪಿತ ಬ್ರಹ್ಮಾಕುಮಾರೀಸ್ ವಿಶ್ವವಿದ್ಯಾಲಯದಲ್ಲಿ ಲಾಯನ್ಸ್‌ಕ್ಲಬ್, ತಾಲೂಕಾ ಯುಥ್ ರೆಡ್‌ಕ್ರಾಸ್ ಸಂಸ್ಥೆ ಸಿ.ಎಂ.ಮನಗೂಳಿ ಮಹಾವಿದ್ಯಾಲಯ, ಸಾರ್ವಜನಿಕ ಆಸ್ಪತ್ರೆ ಇವುಗಳ ಸಹಯೋಗದಲ್ಲಿ ವಿಶ್ವ ಬಂಧುತ್ವ ದಿವಸ ರಾಜಯೋಗಿನಿ ಪ್ರಕಾಶಮಣಿ ದಾದೀ–ಜಿಯವರ 18ನೇ ಪುಣ್ಯತಿಥಿಯ ನಿಮಿತ್ತ ಬೃಹತ್ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲ ಆದ್ದರಿಂದ ದಾನದ ಮೂಲಕ ಮಾತ್ರ ರಕ್ತದ ಅಗತ್ಯವನ್ನು ಪೂರೈಸಬಹುದು. ರಕ್ತದಾನದ ನಂತರ ದೇಹವು ಹೊಸ ಕೆಂಪುರಕ್ತ ಕಣಗಳನ್ನು ಉತ್ಪಾದಿಸಲು ಪ್ರಾರಂಭಿಸುತ್ತದೆ. ಇದು ಚೈತನ್ಯವನ್ನು ಹೆಚ್ಚಿಸುತ್ತದೆ ಎಂದರು.

ಸಿಂದಗಿ ತಾಲೂಕಾ ಲಾಯನ್ಸ್ ಕ್ಲಬ್ ಅಧ್ಯಕ್ಷ ಎಸ್.ಎಸ್.ಪಾಟೀಲ ಮಾತನಾಡಿ, ಪ್ರಜಾಪಿತ ಬ್ರಹ್ಮಾಕುಮಾ–ರೀಸ್ ವಿಶ್ವವಿದ್ಯಾಲಯ ಆಧ್ಯಾತ್ಮಿಕ ಹಾಗೂ ಸಾಮಾಜಿಕ ಸಂಸ್ಥೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಈ ಸೇವಾ ಕಾರ್ಯ ಜರುಗುತ್ತಿರುವುದು ಹೆಮ್ಮೆ ತಂದಿದೆ ಎಂದರು.

ಮುಖ್ಯ ಅತಿಥಿಗಳಾಗಿ ಸಾರ್ವಜನಿಕ ಆಸ್ಪತ್ರೆಯ ಮುಖ್ಯವೈದ್ಯಾಧಿಕಾರಿ ಶಂಕರರಾವ ದೇಶಮುಖ ಮಾತನಾಡಿದರು. ಸಾನಿಧ್ಯತೆಯನ್ನು ರಾಜಯೋಗಿನಿ ಪವಿತ್ರಾ ಅಕ್ಕನವರು ವಹಿಸಿದ್ದರು. ಶಿಬಿರದಲ್ಲಿ ಸುಮಾರು 50 ಜನ ಇನ್ನಿತರರು ರಕ್ತದಾನ ಮಾಡಿದರು.

ಇದೇ ಸಂದರ್ಭದಲ್ಲಿ ರಾಜಯೋಗಿ ಡಾ. ಬಿ.ಜಿ.ಪಾಟೀಲ, ಡಾ. ಅಂಬರೀಶ ಬಿರಾದಾರ ಲಾಯನ್ 317 ಬಿ ಕೆ.ಎಚ್.ಸೋಮಾಪುರ, ಎಸ್.ಬಿ.ಚಾಗಶೆಟ್ಟಿ, ಪಿ.ಎಂ. ಮಡಿವಾಳರ, ಶರಣು ಬೂದಿಹಾಳ, ಬಿ.ಎಂ.ಸಿಂಗನಳ್ಳಿ, ಎಸ್. ಎಚ್.ಜಾಧವ, ಶಿವಕುಮಾರ ಶಿವಸಿಂಪಿ, ಉಪಾಸಕರಾದ ಎಸ್.ಎಸ್.ಪತ್ತಾರ, ಪ್ರಮೀಳಾ ಪಾಟೀಲ, ಸಿ.ಎಂ.ಪೂಜಾರ, ಎಸ್.ಬಿ.ಬುಳ್ಳಾ, ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಸಿಬ್ಬಂದಿಗಳು, ವಿದ್ಯಾರ್ಥಿನಿಯರು ಸೇರಿದಂತೆ ಇನ್ನಿತರರು ಇದ್ದರು.

# 9 ವರ್ಷಗಳಿಂದ ಗಣೇಶ ಪ್ರತಿಷ್ಠಾಪಿಸುತ್ತಿರುವ ಹಿಂದು-ಮುಸ್ಲಿಂ ಬಾಂಧವರು!

**ತೇರದಾಳ**–ಯಾರು ಏನು ಬೇಕಾದರು ಮಾತನಾಡಲಿ ನಾವು ಮಾತ್ರ ಯಾವತ್ತು ಹೀಗೆ ಇರೋಣ ಎಂಬ ಭಾವೈಕ್ಯತೆಯಿಂದ ಇಲ್ಲಿನ ರಾಜ್ಯ ಚಾಲಕರ ಒಕ್ಕೂಟ ಸಂಘ ಸ್ಥಳೀಯ ಘಟಕದವರು ಹಿಂದು–ಮುಸ್ಲಿಂ ಬೇಧ ಇಲ್ಲದೆ ಕಳೆದ ಒಂಬತ್ತು ವರ್ಷಗಳಿಂದ ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಮೂಲಕ ಸೌಹಾರ್ದತೆಯನ್ನು ಹೆಚ್ಚಿಸುವ ಕೆಲಸ ಮಾಡುತ್ತಿದ್ದಾರೆ.

ಹೌದು. ಇಲ್ಲಿನ ಚಾಲಕರ ಸಂಘದಲ್ಲಿ ಎಲ್ಲ ಸಮುದಾಯದವರು ಇದ್ದಾರೆ. 2017ರಲ್ಲಿ ನಾವು ಏಕೆ ಗಣೇಶ ಮೂರ್ತಿ ಪ್ರತಿಷ್ಠಾಪಿಸಬಾರದು ಎಂದು ಯೋಚಿಸಿದಾಗ ಅದಕ್ಕೆ ಮುಸ್ಲಿಂ ಬಾಂಧವರು ಕೂಡ ನಾವು ಭಾಗಿಯಾಗುತ್ತೇವೆ. ಎಲ್ಲರೂ ಒಗ್ಗಟ್ಟಿನಿಂದ ಹಬ್ಬ ಆಚರಿಸೋಣ ಎಂದು ಹೇಳಿದ್ದ–ರಿಂದ 2017ರಿಂದ ಮಹಾತ್ಮ ಗಾಂಧೀಜಿ



ಕ್ರೀಡಾಂಗಣ ಹತ್ತಿರ ಇರುವ ಚಾಲಕರ ಸ್ಟ್ಯಾಂಡ್‌ನಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡುತ್ತಿದ್ದಾರೆ. ಗಣೇಶ ಮೂರ್ತಿಯನ್ನು ಮೆರವಣಿಗೆ ಮೂಲಕ ತರುವುದರಿಂದ ಹಿಡಿದು ಅನ್ನಪ್ರಸಾದ, ಸವಾಲ್ ಹಾಗೂ ಐದನೇ ದಿನ ವಿಸರ್ಜನೆ ಆಗುವವರೆಗೆ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗಿ ಆಗುವುದರ ಜತೆಗೆ ದೇಣಿಗೆ ಕೂಡ ನೀಡುತ್ತಾರೆ. ಚಾಲಕರು ಹಿಂದು–ಮುಸ್ಲಿಂ ಎನ್ನದೆ ಏಕತಾ ಭಾವದಿಂದ ಗಣೇಶಮೂರ್ತಿ ಪ್ರತಿಷ್ಠಾಪಿಸುವುದನ್ನು ಕಂಡ ಸಾಕಷ್ಟು ಮಹನೀಯರು ಮೆಚ್ಚುಗೆ ವ್ಯಕ್ತಪಡಿಸಿ ಅವರು ಸಹಾಯ ಮಾಡುತ್ತಿದ್ದಾರೆ. ಹಬ್ಬಗಳು ಸೌಹಾರ್ದತೆಯ ಸಂಕೇತ ಎನ್ನುವದಕ್ಕೆ ಇಂತಹ ಜೀವಂತ ಉದಾಹರಣೆಗಳು ಸಾಕ್ಷಿ ಎಂದರೆ ತಪ್ಪಾಗಲಾರದು.

**ಅಭಿಪ್ರಾಯ**

ನಮ್ಮ ಸಂಘದಲ್ಲಿ ಚಾಲಕರು ಮಾಲೀಕರು ಬೇರೆ ಬೇರೆ ಜಾತಿ ಎಂಬ ಯಾವುದೇ ಬೇಧ ಇಲ್ಲ. ಇದು ಕೇವಲ ಗಣೇಶ ಮೂರ್ತಿ ಪ್ರತಿಷ್ಠಾಪನೆ ವಿಷಯದಲ್ಲಿ ಮಾತ್ರ ಅಲ್ಲ. ನಮ್ಮ ಸಂಘದ ಸದಸ್ಯರ ಕುಟುಂಬಗಳಲ್ಲಿ ವೈಯಕ್ತಿಕವಾಗಿ ಏನೇ ಸಮಸ್ಯೆ ಎದುರಾದರು ಎಲ್ಲರೂ ಒಗ್ಗಟ್ಟಿನಿಂದ ನಿಲ್ಲುತ್ತೇವೆ. ಮುಸ್ಲಿಂ ಬಾಂಧವರ ಹಬ್ಬಗಳಿಗೆ ನಾವು ಹೋಗುತ್ತೇವೆ. ನಮ್ಮ ಹಬ್ಬಗಳಲ್ಲಿ ಅವರು ಭಾಗಿಯಾಗುತ್ತಾರೆ. ಎಲ್ಲರೂ ಸಹೋದರರಂತೆ ಇದ್ದೇವೆ.

**(ವಿದ್ಯಾಧರ ಧರೆನ್ನವರ ಅಧ್ಯಕ್ಷ, ಪ್ರಕಾಶ ಮಸೂತಿ ಉಪಾಧ್ಯಕ್ಷ.)**

## ಪಟಾಕಿ ಅಂಗಡಿಗಳ ಸ್ಥಳಾಂತರಕ್ಕೆ ಆದೇಶ

**ಗದಗ** : ಗಣೇಶ ಚತುರ್ಥಿ ಹಾಗೂ ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಅಧಿಕೃತ ಲೈಸನ್ಸ್ ಪಡೆದುಕೊಂಡು ಕ್ರಮಬದ್ಧವಾಗಿ ನವೀಕರಣವಾಗಿರುವ ಪಟಾಕಿ ಲೈಸನ್ಸ್‌ದಾರರ ಅಂಗಡಿಗಳನ್ನು ಗಣೇಶ ಚತುರ್ಥಿಯ ಪ್ರಯುಕ್ತ ಅಗಸ್ಟ 27 ರಿಂದ ಸೆಪ್ಟೆಂಬರ್ 7 ರವರೆಗೆ ಮತ್ತು ದೀಪಾವಳಿ ಹಬ್ಬದ ಪ್ರಯುಕ್ತ ಅಕ್ಟೋಬರ್ 19 ರಿಂದ 23 ರವರೆಗೆ ಗದಗ ಜಿಲ್ಲೆಯ ನಗರ/ ಪಟ್ಟಣ/ ಗ್ರಾಮೀಣ ಪ್ರದೇಶಗಳ ಕೆಳಕಾಣಿಸಿದ ತೆರೆದ ಸ್ಥಳಗಳಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ದಾಸ್ತಾನು ಮಾಡಿ ಮಾರಾಟ ಮಾಡುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ ಸ್ಥಳಾಂತ–ರಿಸಲು ಆದೇಶಿಸಲಾಗಿದೆ. ಅನಧಿಕೃತ ಪಟಾಕಿ ಅಂಗಡಿಗಳಿಗೆ ವ್ಯಾಪಾರ ಮಾಡುವುದನ್ನು ನಿರ್ಬಂಧಿಸಿದೆ.

ಲಕ್ಷ್ಮೇಶ್ವರ ತಾಲೂಕಿನ ಲಕ್ಷ್ಮೇಶ್ವರದ ಉಮಾ ಮಹಾವಿದ್ಯಾಲಯದ ಕ್ರೀಡಾಂಗಣ, ಶಿಗ್ಲಿಯ ಹೊಸ ಬಸ್ ಸ್ಟ್ಯಾಂಡ್ ಹತ್ತಿರ ಬಯಲು ಜಾಗೆ ; ಶಿರಹಟ್ಟಿ ತಾಲೂಕಿನಲ್ಲಿ ಶಿರಹಟ್ಟಿಯ ಎಫ್. ಎಂ.ಡಬಾಲಿ ಹೈಸ್ಕೂಲ ಮೈದಾನ ಹಾಗೂ ಬೆಳ್ಳಟ್ಟಿಯ ಶ್ರೀ ಯೋಗಿ ವೇಮನ ಪ್ರೌಢಶಾಲೆ ಮೈದಾನ: ಮುಂಡರಗಿ ತಾಲೂಕಿನಲ್ಲಿ ಮುಂಡರಗಿ ತಾಲೂಕು ಕ್ರೀಡಾಂಗಣ; ರೋಣ ತಾಲೂಕಿನಲ್ಲಿ ರೋಣದ ಜಕ್ಕಲಿ ರಸ್ತೆಯಲ್ಲಿ ಬರುವ ಸೊಸೈಟಿಯ ಬಯಲು ಜಾಗೆ ಹಾಗೂ ಹೊಳೆಆಲೂರದ ಎ.ಪಿ.ಎಂ.ಸಿ. ಬಯಲು ಜಾಗೆ ಹೊಳೆಆಲೂರ ; ಗಜೇಂದ್ರಗಡ ತಾಲೂಕಿನಲ್ಲಿ ಗಜೇಂದ್ರಗಡದ ಶ್ರೀ ಸಂತೋಷ ತಂದೆ ಶ್ಯಾಮಸುಂದರ ಮಂತ್ರಿ ಇವರ ಖುಲ್ಲಾ ಜಾಗೆ , ನರೇಗಲ್‌ದ ಎ.ಪಿ.ಎಂ.ಸಿ. ಗೌಡಾನ್ ಹತ್ತಿರ ಬಯಲು ಜಾಗೆ; ನರಗುಂದ ತಾಲೂಕಿನಲ್ಲಿ ನರಗುಂದ ದಂಡಾಪೂರದ ಶ್ರೀರಾಮ ಮಂದಿರದ ಪಕ್ಕ ಇರುವ ಸರ್ಕಾರಿ ಜಾಗೆ ; ಗದಗ ತಾಲೂಕಿನಲ್ಲಿ ವಿ.ಡಿ.ಎಸ್.ಟಿ.ಕಾಲೇಜು ಮೈದಾನ ಹಾಗೂ ಮುಳಗುಂದದ ಎಸ್. ಜೆ.ಜೆ.ಎಂ.ಸಂ.ಪದವಿ ಪೂರ್ವ ಕಾಲೇಜು ಮೈದಾನ ಈ ಸ್ಥಳಗಳಲ್ಲಿ ಹಸಿರು ಪಟಾಕಿಗಳನ್ನು ಮಾತ್ರ ದಾಸ್ತಾನು ಮಾಡಿ ಮಾರಾಟ ಮಾಡುವ ಷರತ್ತಿಗೊಳಪಟ್ಟು ತಾತ್ಕಾಲಿಕವಾಗಿ ಸ್ಥಳಾಂತ–ರಿಸಲು ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾ–ರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಬ್ರಹ್ಮಶ್ರೀ ನಾರಾಯಣಗುರು & ವಿಶ್ವಕರ್ಮ ಜಯಂತಿ: ಇಂದು ಪೂರ್ವಭಾವಿ ಸಭೆ

**ಕೊಪ್ಪಳ** : ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಸೆಪ್ಟೆಂಬರ್ 7 ರಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಮತ್ತು ಸೆ. 17 ರಂದು ವಿಶ್ವಕರ್ಮ ಜಯಂತಿ ಆಚ–ರಣೆ ಸಂಬಂಧ ಸಿದ್ಧತೆಗಳನ್ನು ಕೈಗೊಳ್ಳಲು ಪೂರ್ವಭಾವಿ ಸಭೆಯನ್ನು ಆಗಸ್ಟ್ 29 ರಂದು ಬೆಳಿಗ್ಗೆ 10.30 ಹಾಗೂ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಕೊಪ್ಪಳ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ವಹಿಸುವರು. ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಬೇಕು ಹಾಗೂ ಸಮಾಜದ ಮುಖಂಡರು ಈ ಸಭೆಯಲ್ಲಿ ಆಗಮಿಸಿ ಅಗತ್ಯ ಸಲಹೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸ್ತೆ ಕಾಮಗಾರಿಗಳಿಗೆ ಶಾಸಕ ಲಕ್ಷ್ಮಣ ಸವದಿ ಭೂಮಿ ಪೂಜೆ

**ಮೋಳೆ';** ಪ್ರಕೃತಿ ವಿಕೋಪ ಪರಿಹಾರದಡಿ ತಾಲೂಕಿನ ನಾಲ್ಕು ರಸ್ತೆಗಳನ್ನು ಎತ್ತರಕ್ಕೆ ಏರಿಸಿ ಹೊಸ ರಸ್ತೆಗಳಿಗೆ 10 ಕೋಟಿ ಅನುದಾನ ಮಂಜೂರಾಗಿದೆ ಎಂದು ಮಾಜಿ ಉಪ ಮುಖ್ಯಮಂತ್ರಿ, ಶಾಸಕ ಲಕ್ಷ್ಮಣ ಸವದಿ ಹೇಳಿದರು. ಅವರು ತಂಗಡಿ ಮತ್ತು ಶೇಗುಣಸಿ ಗ್ರಾಮಗಳಲ್ಲಿ ತಂಗಡಿಯಿಂದ ಅಥಣಿ ಕಾಗವಾಡ ಮುಖ್ಯ ರಸ್ತೆ ಮತ್ತು ಶೇಗುಣಸಿಯಿಂದ ಗಸ್ತಿ ತೋಟದ ವರೆಗಿನ ಸಂಪರ್ಕ ರಸ್ತೆಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡುತ್ತಿದ್ದರು. ಈಗಾಗಲೇ ಮಂಜೂರಾಗಿರುವ ತಂಗಡಿ, ಶೇಗುಣಸಿ ಹಾಗೂ ಸುಟ್ಟಟ್ಟಿ ಗ್ರಾಮಗಳಲ್ಲಿ 2 ಕೋಟಿ ರೂ.ಗಳಂತೆ ಮೂರು ರಸ್ತೆಗಳು ಕಾಮಗಾರಿಗಳು ಪ್ರಾರಂಭಗೊಂಡಿದ್ದು, ಇನ್ನೂ ಎರಡು ಕಾಮಗಾರಿಗಳು ಕೂಡ ಮಂಜೂರಾತಿ ಹಂತದಲ್ಲಿದ್ದು, ಇಷ್ಟರಲ್ಲಿಯೇ ಈ ಕಾಮಗಾರಿಗಳಿಗೂ ಶಂಕುಸ್ಥಾಪನೆ ನೆರವೇರಿಸುವುದಾಗಿ ಹೇಳಿದರು. ನಿರಂತರ ಪ್ರಯತ್ನದ ಫಲವಾಗಿ ಅಥ–'ಣಿ ಮತಕ್ಷೇತ್ರದ ಒಟ್ಟು 8 ಸರಕಾರಿ



ಹಿರಿಯ ಪ್ರಾಥಮಿಕ ಶಾಲೆಗಳನ್ನು 2025–26 ನೇ ಶೈಕ್ಷಣಿಕ ವರ್ಷದಿಂದ ಪ್ರೌಢ ಶಾಲೆಗಳಾಗಿ ಮೇಲ್ದರ್ಜೆಗೇ–ರಿಸಲು ರಾಜ್ಯ ಸರಕಾರ ಅನುಮೋದನೆ ನೀಡಿದೆ ಎಂದ ಅವರು ಕ್ಷೇತ್ರದಲ್ಲಿ ಪ್ರೌಢ ಶಾಲೆಗಳ ಮಂಜೂರಾತಿಯಿಂದ ಸ್ಥಳೀಯ ವಿದ್ಯಾರ್ಥಿಗಳಿಗೆ ತಮ್ಮ ತಮ್ಮ ಗ್ರಾಮಗಳಲ್ಲಿ ಹೈಸ್ಕೂಲ ಶಿಕ್ಷಣ ಪಡೆಯಲು ಸಾಧ್ಯವಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಅಭಿಯಂತರ ವೀರಣ್ಣ ವಾಲಿ, ಮಡಿವಾಳ ಪಾಟೀಲ, ಗುತ್ತಿಗೆದಾರರಾದ ಶಿವರುದ್ರ ಘೂಳಪ್ಪನವರ, ಗಿರೀಶ ಸಜ್ಜನ, ಶಬರೀಶ ಸಜ್ಜನ, ಮುಖಂಡರಾದ ಶ್ರೀಶೈಲ ನಾರಗೊಂಡ, ತಮ್ಮಣ್ಣಪ್ಪ ತೇಲಿ, ಸಂಜಯ ಅವಕ್ಕನವರ, ಸಂಗಪ್ಪ ಸವದತ್ತಿ, ಶ್ರೀಶೈಲ ಮೋಪಗಾರ, ಕಾಶಪ್ಪ ಚನವೀರ, ಸುರೇಶ ಮದಲಮಟ್ಟಿ, ಪರಗೊಂಡ ಶಿರಗುಪ್ಪಿ, ಅಶೋಕ ಅಮ್ಮನಗಿ, ಬುಜಬಲಿ ಹಳ್ಳೂರ, ಕುಮಾರ ಸತ್ತಿಗೌಡರ, ಶಿವಾನಂದ ದಳವಾಯಿ, ಸಿದ್ದಪ್ಪ ಕನಾಳೆ, ಪೋಪಟ ಮೋರೆ, ಶ್ರೀಕಾಂತ ಪಾಟೀಲ, ಅನೀಲ ತಳವಾರ, ಮುರಗೆಪ್ಪ ಮಗದುಮ್, ಮಹಾದೇವ ಪಾಟೀಲ, ರಾಜಾರಾಮ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತ–ರಿದ್ದರು.

ಸೆ. 2ರವರೆಗೆ ರಾಜ್ಯ ಮಟ್ಟದ ಖಾದಿ ಗ್ರಾಮೋದ್ಯೋಗ ವಸ್ತುಪ್ರದರ್ಶನ ಹಾಗೂ ಮಾರಾಟ ಮೇಳ

# ಖಾದಿ ಉತ್ಸವದಲ್ಲಿ ಪರಿಸರ - ನೈಸರ್ಗಿಕ ಸ್ನೇಹಿ ಉತ್ಪನ್ನಗಳು ಲಭ್ಯ: ಕೆ.ವಿರೇಶ್



**ಕೊಪ್ಪಳ** : ಖಾದಿ ಉತ್ಸವದಲ್ಲಿ ಪರಿಸರ ಮತ್ತು ನೈಸರ್ಗಿಕ ಸ್ನೇಹಿತವಾದ ಖಾದಿ ಮತ್ತು ಇತರೆ ಉತ್ಪನ್ನಗಳನ್ನು ಮಾರಾಟಕ್ಕೆ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೊದ್ಯೋಗ ಮಂಡಳಿ ಕೊಪ್ಪಳ ಜಿಲ್ಲಾ ಅಭಿವೃದ್ಧಿ ಅಧಿಕಾರಿ ಕೆ. ವಿರೇಶ್ ಅವರು ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೊದ್ಯೋಗ ಮಂಡಳಿ, ಹಾಗೂ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಸಹಯೋಗದೊಂದಿಗೆ ಸರ್ಕಾರದವತಿಯಿಂದ "ರಾಜ್ಯ ಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತುಪ್ರದರ್ಶನ ಮಾರಾಟ "ಖಾದಿ ಉತ್ಸವ–2025" ಮೇಳವನ್ನು ಆ. 24 ರಿಂದ ಸೆಪ್ಟೆಂಬರ್ 2ರ ವರೆಗೆ ಒಟ್ಟು 10 ದಿನಗಳ ಕಾಲ ಕೊಪ್ಪಳ ನಗರದ ಹೊಸಪೇಟ್ ರಸ್ತೆಯ ನಗರಸಭೆ ಎದುರುಗಡೆಯ ಶಾದಿ ಮಹಲ್‌ನಲ್ಲಿ ಏರ್ಪಡಿಸಲಾಗಿದ್ದು, ಈ ವಸ್ತುಪ್ರದರ್ಶನವನ್ನು ಇತ್ತೀಚೆಗೆ (ರವಿವಾರ) ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೊದ್ಯೋಗ ಮಂಡಳಿಯ ಅಧ್ಯಕ್ಷರು ಹಾಗೂ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವನಗೌಡ ತುರುವಿಹಾಳ ಮತ್ತು ಕೊಪ್ಪಳದ ಸ್ಥಳೀಯ ಶಾಸಕರು ಹಾಗೂ ಇತರೆ ಮುಖಂಡರುಗಳಿಂದ ಚಾಲನೆ ನೀಡಲಾಗಿದೆ.

ಈ ರಾಜ್ಯ ಮಟ್ಟದ ಖಾದಿ ಗ್ರಾಮೋದ್ಯೋಗ ವಸ್ತುಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಉತ್ತರಪ್ರದೇಶ, ಬಿಹಾರ, ಜಾರ್ಖಂಡ, ಕಾಶ್ಮೀರ, ಮಹಾರಾಷ್ಟ್ರ ರಾಜ್ಯಗಳಿಂದ ಹಾಗೂ ಕರ್ನಾಟಕದ ವಿವಿಧ ಜಿಲ್ಲೆಗಳಿಂದ ಖಾದಿ ಬಟ್ಟೆಗಳು, ರೇಷ್ಮೆ ಸೀರೆಗಳು ಮತ್ತು ಕರಕುಶಲ ವಸ್ತುಗಳು ಪ್ರದರ್ಶನ ಹಾಗೂ ಮಾರಾಟಕ್ಕೆ ಇಡಲಾಗಿದ್ದು, ಈ ವರಗೆ ಸಾರ್ವಜನಿಕ–ರಿಂದ ರಿಯಾಯತಿ ದರದಲ್ಲಿ ಖಾದಿ ಉತ್ಪನ್ನಗಳನ್ನು ಖರೀಸಿದ ಪ್ರೋತ್ಸಾಹಿಸುತ್ತಿದ್ದಾರೆ. ಆ. 24 ರಿಂದ ಆ. 27 ರವರಗೆ 4 ದಿನಗಳಿಗೆ ಒಟ್ಟು ಮಾರಾಟ 25 ಲಕ್ಷ ಮೌಲ್ಯದ ಖಾದಿ ಉತ್ಪನ್ನಗಳು ಮಾರಾಟವಾಗಿರುತ್ತದೆ. ಒಟ್ಟಾರೆ 10 ದಿನಗಳಿಗೆ ಮಾರಾಟದ ಗುರಿ 2 ಕೋಟಿ ನಿರೀಕ್ಷೆ ಇದ್ದು, ಸಾರ್ವಜನಿಕರು ಇನ್ನು ಹೆಚ್ಚಿನ ರೀತಿ ಖಾದಿ ಉತ್ಪನ್ನಗಳನ್ನು ಖರೀದಿಸಬೇಕು. ಸೆಪ್ಟೆಂಬರ್ 2ರವರೆಗೆ ನಡೆಯಲಿರುವ ರಾಜ್ಯ ಮಟ್ಟದ ಖಾದಿ ಗ್ರಾಮೊದ್ಯೋಗ ವಸ್ತುಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ಪರಿಸರ ಮತ್ತು ನೈಸರ್ಗಿಕ ಸ್ನೇಹಿತವಾದ ಉತ್ಪನ್ನಗಳು ಮಾರಾಟ ಮಾಡಲಾಗುತ್ತಿದ್ದು, ಇನ್ನು ಹೆಚ್ಚಿನ ಜನರು ಈ ವಸ್ತು ಪ್ರದರ್ಶನಕ್ಕೆ ಭೇಟಿ ನೀಡಿ ಖಾದಿ ಉತ್ಪನ್ನಗಳನ್ನು ಖರೀದಿಸಿ ಪ್ರೋತ್ಸಾಹಿಸಬೇಕು ಎಂದು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೊದ್ಯೋಗ ಮಂಡಳಿಯ ಕೊಪ್ಪಳ ಜಿಲ್ಲಾ ಕಛೇರಿಯ ಪ್ರಕಟಣೆ ತಿಳಿಸಿದೆ.

# ಬಡವರ ಸೇವೆಯೇ ಲಯನ್ಸ್ ಕ್ಲಬ್ ನ ಉದ್ದೇಶ, ಲಯನ್ಸ್ ಕ್ಲಬ್‌ನ ಸಾಮಾಜಿಕ ಸೇವೆಗಳು ಅನನ್ಯ ಜೈಮೋಲ ನಾಯಿಕ ಅಭಿಮತ

**ಮೋಳೆ** :– ಬಡವರ, ಅಸಹಾಯಕರ, ಅನಾರೋಗ್ಯ ಪೀಡಿತ–ರಿಗಾಗಿ ಸಹಾಯ ಮಾಡುವುದು ಲಯನ್ಸ್ ಕ್ಲಬ್ ಉದ್ದೇಶವಾಗಿವೆ. ಅನೇಕ ವರ್ಷಗಳಿಂದ ಸಾಮಾಜಿಕ ಸೇವೆಯಲ್ಲಿ ಮುಂಚೂಣಿಯಲ್ಲಿದ್ದು, ಸಮಾಜಮುಖಿ ಸೇವೆಗಳಿಂದ ಮನೆ ಮಾತಾಗಿದೆ ಎಂದು 317 ಬಿ ಜಿಲ್ಲಾ ಪ್ರಾಂತುಪಾಲ ಜೈಮೋಲ ನಾಯಿಕ ಹೇಳಿದರು.

ಅವರು ಪಟ್ಟಣದ ರಾಯಲ್ ಭವನದಲ್ಲಿ ಲಯನ್ಸ್ ಕ್ಲಬ್ ಪ್ರಾರಂಭೋತ್ಸವ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಲಯನ್ಸ್ ಕ್ಲಬ್ ಅಂತರರಾಷ್ಟ್ರೀಯ ಸಂಸ್ಥೆಯಾಗಿದ್ದು, ಸನ್ 1917ರಲ್ಲಿ ಅಮೆರಿಕಾದಲ್ಲಿ ಸ್ಥಾಪನೆಯಾಯಿತು. ವಿಶ್ವದ 207 ದೇಶಗಳಲ್ಲಿ 17 ಲಕ್ಷ ಸದಸ್ಯ–ರಿದ್ದಾರೆ. ಭಾರತದಲ್ಲಿ 5 ಸಾವಿರ ಕ್ಲಬಗಳು ಸಾಮಾಜಿಕ ಸೇವೆಯಲ್ಲಿ ತೊಡಗಿವೆ. ಒಳ್ಳೆಯ ಯೋಜನೆಗಳಿದ್ದರೆ ಅನುದಾನ ಮಂಜೂರಾತಿಗೆ ಅಂತರರಾಷ್ಟ್ರೀಯ ದೇಣಿಗೆದಾರರಿಗೆ ಕಳುಹಿಸಿ ಕೊಡಲಾಗುವುದು. ಅನುದಾನ ಸದ್ಬಳಕೆಯಾಗಿ ಸಮಾಜ–ಕ್ಕೆ ಒಳ್ಳೆಯದಾಗಬೇಕು. ಕರ್ನಾಟಕದಿಂದ ಬರುವ ಎಲ್ಲ ಯೋಜನೆಗಳಿಗೆ ಅನುದಾನ ದೊರಕಿಸಿಕೊಡಲು ಸಹಕಾರ ನೀಡುವುದಾಗಿ ಭರವಸೆ ನೀಡಿದರು.



ಪದಗ್ರಹಣ ಅಧಿಕಾರಿಯಾಗಿ ಆಗಮಿಸಿದ್ದ ಡಾ. ಕೀರ್ತಿ ನಾಯಿಕ ಅವರು ನೂತನ ಪದಾಧಿಕಾರಿಗಳಿಗೆ ಪ್ರಮಾಣವಚನ ಬೋಧಿಸಿ ಮಾತನಾಡಿ ದೇಶ ವಿದೇಶಗಳಲ್ಲಿ ಸಮಾಜಮುಖಿ ಸೇವೆ ಸಲ್ಲಿಸುವ ಅನೇಕ ಸಂಸ್ಥೆಗಳಿವೆ, ಆದರೆ ನಮ್ಮ ಲಯನ್ಸ್ ಸಂಸ್ಥೆಯಲ್ಲಿ ಸದಾ ಕ್ರಿಯಾಶೀಲರಾಗಿ ಜನಪರ ಕಾರ್ಯ ಮಾಡುವ ಉದ್ದೇಶ ಹೊಂದಲಾಗಿದೆ. ಈಗಷ್ಟೇ ಸಮಾಜಮುಖಿ ಸೇವಾ ಮನೋಭಾವನೆಯಿಂದ ಸದಸ್ಯತ್ವ ಹೊಂದಿರುವ ಅಥಣಿ ತಂಡವು ಲಯನ್ ರಮೇಶ ಬುಲೆಬುಲೆ ಅವರ ನೇತೃತ್ವದಲ್ಲಿ ಹೆಮ್ಮರವಾಗಿ ಬೆಳೆಯಲಿ ಎಂದು ಶುಭ ಹಾರೈಸಿದರು. ನೂತನ ಸಂಸ್ಥಾಪಕ ಅಧ್ಯಕ್ಷರಾಗಿ ರಮೇಶ ಬುಲಬುಲೆ ಮಾತನಾಡಿ ಲಯನ್ಸ್ ಕ್ಲಬ್ ಕೇವಲ ಒಂದು ಸಂಘಟನೆಯಲ್ಲ, ಇದು ಸ್ನೇಹದ ಸೇತುವೆ ಮತ್ತು ಸಮಾಜಮುಖಿ ಚಟುವಟಿ–ಕೆಗಳ ದ್ವೀಪ ಸ್ತಂಭ. ನಾವೆಲ್ಲರೂ ಸೇವಾ ಮನೋಭಾವನೆಯಿಂದ ಬಡವರಿಗೆ ನೆರವು, ಯುವಶಕ್ತಿಗೆ ಪ್ರೇರಣೆ, ಪರಿಸರ ಸಂರಕ್ಷಣೆ, ಆರೋಗ್ಯ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ವಿಶೇಷ ಸೇವೆ ಸಲ್ಲಿಸುವ ಸಂಕಲ್ಪ ಹೊಂದಿದ್ದೇವೆ. ಲಯನ್ಸ್ ಕ್ಲಬ್ ನ ಎಲ್ಲಾ ಪದಾಧಿಕಾ–ರಿಗಳು ಮತ್ತು ಸದಸ್ಯರು ಒಗ್ಗಟ್ಟಿನಿಂದ ಸೇವೆ ಸಲ್ಲಿಸುವ ಮೂಲಕ ಸಂಸ್ಥೆಯನ್ನು ಮುನ್ನಡಿಸೋಣ ಎಂದು ಸಂಸ್ಥೆಯ ಹಿರಿಯ ಅಧಿಕಾರಿಗಳಿಗೆ ಮತ್ತು ಕಾರ್ಯಕ್ರಮಕ್ಕೆ ಆಗಮಿಸಿದ ನಾಗರಿಕರಿಗೆ ಅಭಿನಂದಿಸಿದರು. ಅಥಣಿಯ ಎಲ್ಲಾ ನಾಗರಿಕರು ಸಹಕಾರ ನೀಡುವುದರ ಜೊತೆಗೆ ಸಂಘದ ಕಾರ್ಯ ಚಟುವಟಿಕೆಗಳಿಗೆ ಮಾರ್ಗದರ್ಶನ ಮತ್ತು ಸಹಕಾರ ನೀಡಬೇಕು ಮನವಿ ಮಾಡಿದರು.

ನೂತನ ಅಧ್ಯಕ್ಷರಾಗಿ ರಮೇಶ ಬುಲಬುಲೆ, ಕಾರ್ಯದರ್ಶಿಯಾಗಿ ವಿನೋದ ಕಲಮಡಿ, ಖಜಾಂಚಿಯಾಗಿ ಅಶೋಕ ಹೊಸೂರ ಸೇರಿದಂತೆ ಇನ್ನಿತರರು ಪದಗ್ರಹಣ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಅತಿಥಿಗಳಾಗಿ ಮಹಾಲಿಂಗಪುರದ ಲಯನ್ಸ್ ಕ್ಲಬ್ ನ ಸಿದ್ದು ನಕಾತಿ, ವಿದ್ಯಾ ದಿನ್ನಿಮನಿ, ಪ್ರಶಾಂತ್ ಅಂಗಡಿ, ರಾಜು ತಾಳಿಕೋಟಿ ಸೇರಿದಂತೆ ಅಥಣಿ ಲಯನ್ಸ್ ಕ್ಲಬ್ ನಿರ್ದೇಶಕರಾದ ಚಿದಾನಂದ ಸವದಿ, ಮಹೇಶ್ ಕಾಪಸೆ, ರವೀಂದ್ರ ಗಾವಡೆ, ಕಿರಣ ಶಿರಗುಪ್ಪಿ, ಶಶಿಕಾಂತ ಹುಲಕುಂದ, ಮಹಾದೇವ ನಾಯಿಕ,ಆನಂದ ಟೋಣಪಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಆನಂದ ಟೋಣಪಿ ಸ್ವಾಗತಿಸಿದರು. ಸಂಜೀವ ಪಾಂಚಾಲ ನಿರೂಪಿಸಿದರು. ವಿನೋದ ಕಲಮಡಿ ವಂದಿಸಿದರು.

## ಮೇಜರ್ ಧ್ಯಾನಚಂದರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ

**ಗದಗ** : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇವರುಗಳ ಸಹಯೋಗದಲ್ಲಿ ಮೇಜರ್ ಧ್ಯಾನಚಂದರವರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಯನ್ನು ಅಗಸ್ಟ 29 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಬೆಟಗೇರಿಯ ಮಹಾತ್ಮಾ ಗಾಂಧಿ ಹಾಕಿ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ , ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ –ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ , ಯೋಜನೆ ಕಾರ್ಯಕ್ರಮ , ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಚೇತನ್ ಆರ್ ಆಗಮಿಸುವರು.

ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

ಪಂದ್ಯಾವಳಿಗಳ ವಿವರ: ಹಾಕಿ ಪಂದ್ಯಾವಳಿ: ದಿ: 29–8–2025 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಬೆಟಗೇರಿಯ ಮಹಾತ್ಮಾ ಗಾಂಧಿ ಹಾಕಿ ಕ್ರೀಡಾಂಗಣ ( ನಾಲ್ಕು ತಂಡಗಳಿಂದ ಮೂರು ಪಂದ್ಯಗಳು).

ಕುಸ್ತಿ ಪಂದ್ಯಾವಳಿ: ದಿ: 30–8–2025 ರಂದು ಶನಿವಾರ ಬೆಳಿಗ್ಗೆ 10.30 ಗಂಟೆಗೆ ನಗರದ ಕೆ. ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದ ಕುಸ್ತಿ ಮನೆ.

ಸೈಕ್ಲಿಂಗ್ ಜಾಥಾ: ದಿ: 31–8–2025 ರಂದು ಬೆಳಿಗ್ಗೆ 7 ಗಂಟೆಗೆ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಿಂದ ಶ್ರೀ ಬಸವೇಶ್ವರ ಮೂರ್ತಿಯವರೆಗೆ .

# ಸೋಮನಟ್ಟಿ ಶಾಲಾ ಕೊಠಡಿ ನಿರ್ಮಾಣಕ್ಕೆ ಸಚಿವೆ ಭೂಮಿ ಪೂಜೆ



**ಬೆಳಗಾವಿ :** ಸೋಮನಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 25.64 ಲಕ್ಷ ರೂ,ಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಹೆಚ್ಚುವರಿ ಕೊಠಡಿ ನಿರ್ಮಾಣದ ಕಾಮಗಾರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗುರುವಾರ ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಕ್ಷೇತ್ರದಲ್ಲಿ ನೂರಾರು ಶಾಲೆಗಳಿಗೆ ಕೊಠಡಿ ನಿರ್ಮಾಣ ಮಾಡಲಾಗಿದೆ. ಶಾಲಾ ಕಂಪೌಂಡ್‌ಗಳನ್ನು ನಿರ್ಮಾಣ ಮಾಡಲಾಗಿದೆ. ಆಟದ ಮೈದಾನ ನಿರ್ಮಾಣವಾಗಿದೆ. ಬೆಂಚ್, ಡೆಸ್ಕ್ ಸೇರಿದಂತೆ ಅಗತ್ಯ ಪರಿಕರಗಳನ್ನು ಒದಗಿಸಲಾಗಿದೆ. ಮಕ್ಕಳ ಶಿಕ್ಷಣಕ್ಕೆ ಕೊರತೆಯಾಗದಂತೆ ಎಲ್ಲ ರೀತಿಯ ಕ್ರಮ ವಹಿಸಲಾಗುತ್ತಿದೆ. ಹಾಗಾಗಿ ಪಾಲಕರು ಮಕ್ಕಳ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಕೆ. ಆಂಜನೇಯ, ಶಂಕರಗೌಡ ಪಾಟೀಲ, ಶೇಖರ್ ಹೊಸೂರಿ, ಬಿ.ಎಂ.ಬಡಿಗೇರ್, ಶಿವಾನಂದ, ಯಲ್ಲಪ್ಪ ನಿಟ್ಟೂರ್, ಮಲ್ಲಪ್ಪ ಪೂಜೇರಿ, ಬಾಳಪ್ಪ ಮಾಸ್ತಮರ್ಡಿ, ರಾಮಪ್ಪ ನಿಟ್ಟೂರ್, ಹೊಳೆಪ್ಪ ನಂದ್ಯಾಗೋಳ, ಕಲ್ಲಪ್ಪ ಮಾಸ್ತಮರ್ಡಿ ಇದ್ದರು.

****

# ಹುಕ್ಕೇರಿಯಲ್ಲಿ ಗೋಶಾಲೆ ಉದ್ಘಾಟನೆ- ಮಂಜುನಾಥ ಸ್ವಾಮೀಜಿ ಕಲ್ಯಾಣ ಮಹೋತ್ಸವ

**ಹುಕ್ಕೇರಿ :** ಇಂಚಗೇರಿ ಆಧ್ಯಾತ್ಮ ಸಂಪ್ರದಾಯದ ಕ್ಯಾರಗುಡ್ಡ ಅವಜೀಕರ ಧ್ಯಾನಯೋಗಾಶ್ರಮದಲ್ಲಿ ಆ. 29 ಮತ್ತು 30 ರಂದು ಎರಡು ದಿನಗಳ ಕಾಲ ಸಮರ್ಥ ಸದ್ಗುರು ಅವಜೀಕರ ಮಹಾರಾಜರು, ಸಮರ್ಥ ಸದ್ಗುರು ಜಗನ್ನಾಥ ಮಹಾರಾಜರ ಸ್ಮರಣಾರ್ಥ ಸಪ್ತಾಹ, ಮಠದ ಜಾತ್ರಾ ಮಹೋತ್ಸವ ಆಯೋಜಿಸಲಾಗಿದೆ ಎಂದು ಶ್ರೀಮಠದ ಉತ್ತರಾಧಿಕಾರಿ ಅಭಿನವ ಮಂಜುನಾಥ ಸ್ವಾಮೀಜಿ ಹೇಳಿದರು.

ಪಟ್ಟಣ ಹೊರವಲಯದ ಕ್ಯಾರಗುಡ್ಡ ಶ್ರೀಮಠದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಆಧ್ಯಾತ್ಮಿಕ, ಹಿಂದೂ ಧರ್ಮದ ರಕ್ಷಣೆ-ಪ್ರಚಾರಕ್ಕೆ ತನ್ನದೇಯಾದ ವಿಭಿನ್ನ ಮತ್ತು ವಿಶಿಷ್ಟ ಕಾಯಕದಲ್ಲಿ ಅವಜೀಕರ ಧ್ಯಾನಯೋಗಾಶ್ರಮ ತೊಡಗಿಸಿಕೊಂಡಿದೆ.

ಇಂಚಗೇರಿಯ ಸಮರ್ಥ ಸದ್ಗುರು ರೇವಣಸಿದ್ದೇಶ್ವರ ಮಹಾರಾಜರ ದಿವ್ಯ ಸಾನಿಧ್ಯದಲ್ಲಿ ಸಮರ್ಥ ಮಲ್ಲೇಶ್ವರ ಮಹಾರಾಜರ ನೇತೃತ್ವದಲ್ಲಿ ಎರಡು ದಿನಗಳ ಕಾಲ ವಿವಿಧ ಧಾರ್ಮಿಕ ಮತ್ತು ಸಾಂಸ್ಕಂತಿಕ ಕಾರ್ಯಕ್ರಮಗಳು ಜರುಗಲಿವೆ.



. ಆ. 29 ರಂದು ಬೆಳಗ್ಗೆ 10 ಕ್ಕೆ ಧ್ವಜಾರೋಹಣ, ಸಂಜೆ 5ಕ್ಕೆ ದಿಂಡಿ ಪಾದಯಾತ್ರೆ, ಸಂಜೆ 6ಕ್ಕೆ ವಿಜಯಪುರ ಜಿಲ್ಲೆ ಚಡಚಣ ತಾಲೂಕಿನ ಸುಕ್ಷೇತ್ರ ಇಂಚಗೇರಿ ಮಠದ ರೇವಣಸಿದ್ದೇಶ್ವರ ಮಹಾರಾಜರ ದಾಸಬೋದ ಹಾಗೂ ವೀಣಾ ಪೂಜೆಯೊಂದಿಗೆ ಸಪ್ತಾಹ ಅರಂಭವಾಗಲಿದೆ. ರಾತ್ರಿ 10 ಕ್ಕೆ ವಿವಿಧ ಗ್ರಾಮಗಳ ಭಜನಾ ಮಂಡಳಿಗಳಿಂದ ಜಾಗರಣೆ ನಡೆಯಲಿದೆ

ಆ. 30 ರಂದು ಬೆಳಗ್ಗೆ 5ಕ್ಕೆ ಕಾಕಡಾರತಿ, 8 ಕ್ಕೆ ಅವಜೀಕರ ಮಹಾರಾಜರ ಗದ್ದುಗೆಗೆ ಅಲಂಕಾರ ಮತ್ತು ಪೂಜೆ, 9ಕ್ಕೆ ಮುರಗೋಡ ದುರುದುಂಡೇಶ್ವರ ಮಠದ ನೀಲಕಂಠ ಸ್ವಾಮೀಜಿ ಅವರು ಸದ್ಗುರು ಮಲ್ಲೇಶ್ವರ ಗೋಶಾಲೆ ಉದ್ಘಾಟಿಸುವರು. ಬೆಳಗ್ಗೆ 10 ಕ್ಕೆ ಗೋಪುರದ ಮೇಲೆ ಸ್ವರ್ಣಲೇಪಿತ ಕಳಸಾರೋಹಣ ನೆರವೇರಲಿದೆ.

ನಿಡಸೋಸಿ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ, ಘೋಡಗೇರಿ ಮಲ್ಲಯ್ಯ ಸ್ವಾಮೀಜಿ, ನಂದಗಾಂವ ಮಹಾದೇವ ಮಹಾರಾಜರು, ಯರನಾಳ ಬ್ರಹ್ಮಾನಂದ ಸ್ವಾಮೀಜಿ, ಬೆಳವಿ ಮೃತ್ಯಂಜಯ ಮಹಾಸ್ವಾಮಿಗಳು. ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಶಾಸಕ ನಿಖಿಲ್ ಕತ್ತಿ, ಮುಖಂಡ ಮಹಾವೀರ ನಿಲಜಗಿ, ತಹಸೀಲ್ದಾರ ಬಲರಾಮ ಕಟ್ಟಿಮನಿ ಸೇರಿದಂತೆ ಮತ್ತಿತರರು ಭಾಗವಹಿಸುವರು

ಆ. 30 ರಂದು ಉತ್ತರಾಧಿಕಾರಿ ಅಭಿನವ ಮಂಜುನಾಥ ಮಹಾಸ್ವಾಮಿಗಳ ಕಲ್ಯಾಣ ಮಹೋತ್ಸವ ಮಹೋತ್ಸವ ಜರುಗಲಿದ್ದು ಮಧ್ಯಾಹ್ನ 12.45ಕ್ಕೆ ನಡೆಯುವ ಶುಭ ಮುಹೂರ್ತದಲ್ಲಿ ಕಾರಿಮನಿಯ ಶ್ರೀದೇವಿ ಮಲ್ಲಯ್ಯ ಹಿರೇಮಠ ಅವರ ಸುಪುತ್ರಿ ಮಹಾನಂದಾ (ಅನ್ನಪೂರ್ಣಾ) ಅವರನ್ನು ವಿವಾಹವಾಗುವ ಮೂಲಕ ಅಭಿನವ ಮಂಜುನಾಥ ಸ್ವಾಮೀಜಿ ದಾಂಪತ್ಯ ಜೀವನಕ್ಕೆ ಪಾದಾರ್ಪಣೆ ಮಾಡಲಿದ್ದಾರೆ.

ಈ ಸುದ್ಧಿಗೋಷ್ಠಿಯಲ್ಲಿ ಮಲ್ಲೇಶ್ವರ ಸ್ವಾಮೀಜಿ, ಶಾಂತಿನಾಥ ಚೌಗಲಾ, ಶಿವಾನಂದ ಪಾಟೀಲ, ಪ್ರಭು ಹಳಿಗೌಡರ, ಶಿವಾನಂದ ಪರೀಟ, ಕೆಂಪಣ್ಣಾ ಬೇವಿನಗೀಡದ, ಶಿವಪ್ಪ ಮಗದುಮ್ಮ, ರಾಮಣ್ಣಾ ನಾಯಿಕ, ನೇಮಿನಾಥ ಸೊಲ್ಲಾಪುರೆ ಮತ್ತಿತರರು ಉಪಸ್ಥಿತರಿದ್ದರು.

# 200 ಕ್ಕೂ ಅಧಿಕ ಬೀದಿ ನಾಯಿಗಳನ್ನು ಹಿಡಿದು ಸುರಕ್ಷಿತ ಪ್ರದೇಶಕ್ಕೆ ಸಾಗಣೆ



**ರಾಯಬಾಗ:** ಪಟ್ಟಣದಲ್ಲಿ ಬೀದಿ ನಾಯಿಗಳ ಉಪಟಳ ಹೆಚ್ಚಿದ ಹಿನ್ನೆಲೆಯಲ್ಲಿ ಪಟ್ಟಣ ಪಂಚಾಯತಯವರು ಗುರುವಾರ ಸುಮಾರು 200 ಕ್ಕೂ ಅಧಿಕ ಬೀದಿ ನಾಯಿಗಳನ್ನು ಹಿಡಿದು ಸುರಕ್ಷಿತ ಪ್ರದೇಶಕ್ಕೆ ಸಾಗಿಸಿದ್ದಾರೆ.

ಇತ್ತೀಚಿಗೆ ಪಟ್ಟಣದ ಅನೇಕ ಬೀದಿಗಳಲ್ಲಿ ಬೀದಿ ನಾಯಿಗಳು ಮಕ್ಕಳ ಮೇಲೆ ದಾಳಿ ಮಾಡಿದ್ದವು, ಇದರಿಂದ ಅನೇಕ ಮಕ್ಕಳು ತೀವ್ರ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದರು.

ಬೀದಿ ನಾಯಿಗಳ ತೊಂದರೆಯಿಂದ ಬೇಸತ್ತ ಪಟ್ಟಣದ ಸಾರ್ವಜನಿಕರು ಪಟ್ಟಣ ಪಂಚಾಯತಗೆ ಅನೇಕ ಬಾರಿ ಮನವಿ ಮಾಡಿಕೊಂಡಿದ್ದರು.

ಗುರುವಾರ ಪಟ್ಟಣ ಪಂಚಾಯತ ಪೌರಕಾರ್ಮಿಕರು ಬೀದಿ ನಾಯಿಗಳನ್ನು ಹಿಡಿದು, ವಾಹನದಲ್ಲಿ ಸಾಗಿಸಿದ್ದಾರೆ. ಇನ್ನುಳಿದ ಎಲ್ಲ ಬೀದಿಗಳನ್ನು ಕಾರ್ಯಾಚರಣೆ ನಡೆಸಿ ಹಿಡಿಯಲಾಗುವುದು ಎಂದು ಪ.ಪಂ. ಮುಖ್ಯಾಧಿಕಾರಿ ಎಸ್.ಆರ್.ಮಾಂಗ ತಿಳಿಸಿದರು.



# ಆರ್ಥಿಕ ನೆರವು ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



**ಬೆಳಗಾವಿ ;** ಗ್ರಾಮೀಣ ಕ್ಷೇತ್ರದ ಸಿದ್ದನಹಳ್ಳಿ ಗ್ರಾಮದ ಕಾರ್ಯಕರ್ತರಾದ ಬಸಪ್ಪ ಸುಲಧಾಳ ಇವರ ಮಗನಾದ ಬಾಳಕೃಷ್ಣ ಸುಲಧಾಳ ರಸ್ತೆ ಅಪಘಾತದಲ್ಲಿ ನಿಧನರಾದ ಹಿನ್ನೆಲೆಯಲ್ಲಿ ಅವರ ಮನೆಗೆ ಭೇಟಿ ನೀಡಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಕುಟುಂಬಸ್ಥರಿಗೆ ಸಾಂತ್ವನ ಹೇಳಿ, ಲಕ್ಷ್ಮೀತಾಯಿ ಫೌಂಡೇಷನ್ ವತಿಯಿಂದ ಆರ್ಥಿಕ ಸಹಾಯ ನೀಡಿದರು.

# ಪೌಷ್ಟಿಕ ಆಹಾರ ಬಳಕೆ ಕಾರ್ಯಕ್ರಮ ಯೋಜನೆ



**ರಾಯಬಾಗ :** ತಾಲೂಕಿನ ರಾಯಬಾಗ ವಲಯದ ಬೀರೇಶ್ವರ ಗಲ್ಲಿ ಬೃಂದಾವನ ಜ್ಞಾನವಿಕಾಸ ಕೇಂದ್ರದಲ್ಲಿ ಇಂದು ಪೌಷ್ಟಿಕ ಆಹಾರ ಬಳಕೆ ಕಾರ್ಯಕ್ರಮ ಯೋಜನೆ ಮಾಡಲಾಗಿತ್ತು.

ಸದರಿ ಕಾರ್ಯಕ್ರಮವನ್ನು ತಾಲೂಕಿನ ಮಾನ್ಯ ಗೌರವಾನ್ವಿತ ಯೋಜನಾಧಿಕಾರಿಯವರಾದ ಮಹೇಶ್ವರಪ್ಪಾ ಜಿ ಸರ್ ಅವರು ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದ ಪ್ರಾಸ್ತಾವಿಕತೆಯನ್ನು ತಾಲೂಕಿನ ಯೋಜನಾಧಿಕಾರಿಯವರಾದ ಮಹೇಶ್ವರಪ್ಪಾ ಜಿ ಸರ್ ಅವರು ಯೋಜನೆಯ ಕಾರ್ಯಕ್ರಮದ ಕುರಿತು ಮಾತನಾಡಿದರು.

ನಂತರದಲ್ಲಿ ಕಾರ್ಯಕ್ರಮದ *ಮುಖ್ಯ ಅತಿಥಿಗಳಾದ ಡಾ, ಸೋನಾಲಿ ಬಂತೆ ಅವರು ಮಹಿಳಾ ಆರೋಗ್ಯ ಹಾಗೂ ಪೌಷ್ಟಿಕ ಆಹಾರ ಬಳಕೆ* ಎಂಬ ವಿಷಯದ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಅಥಣಿ ಜಿಲ್ಲೆಯ ಜನ ಜಾಗೃತಿ ಸದಸ್ಯರಾದ ವಿದ್ಯಾ ಪೂಜಾರಿ ಅವರು ಕಾರ್ಯಕ್ರಮಕ್ಕೆ ಶುಭ ಹಾರೈಸಿದರು,

*ಕೇಂದ್ರದ ಸದಸ್ಯರಿಗೆ ಪೌಷ್ಟಿಕ ಆಹಾರ ತಯಾರಿಗೆ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ವಿಜೇತರಿಗೆ ಬಹುಮಾನ ನೀಡಲಾಯಿತು. ಕಾರ್ಯಕ್ರಮದಲ್ಲಿ ಸೇವಾಪ್ರತಿನಿಧಿ ಜ್ಯೋತಿ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

## "ಶ್ರೇಷ್ಠ ಪುಸ್ತಕ" ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಳಗಾವಿ, : ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ವಿಜ್ಞಾನ ವಿಷಯಗಳ ಬರವಣಿಗೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಕೃಷಿ, ವಿಜ್ಞಾನ ತಂತ್ರಜ್ಞಾನ ಮತ್ತು ವೈದ್ಯಕೀಯ ವಿಷಯಗಳ ಮೇಲೆ ಕನ್ನಡದಲ್ಲಿ ಜನವರಿ-2023 ರಿಂದ ಡಿಸೆಂಬರ್-2025ರ ಒಳಗೆ ಪ್ರಕಟವಾಗುವ ಪುಸ್ತಕಗಳ ಲೇಖಕರಿಂದ "ಶ್ರೇಷ್ಠ ಪುಸ್ತಕ" ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು **https://kstacademy.in** ನಲ್ಲಿ ಅರ್ಜಿ ಪಡೆದು, 05 ಜನವರಿ 2026 ರ ಒಳಗಾಗಿ ಅಕಾಡೆಮಿ ವಿಳಾಸಕ್ಕೆ ಸಲ್ಲಿಸಬುಹುದಾಗಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## "ಶ್ರೀ ಮಹರ್ಷಿ ವಾಲ್ಮೀಕಿ" ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಳಗಾವಿ, ಪರಿಶಿಷ್ಟ ಪಂಗಡದ (ಎಸ್.ಟಿ) ಜನಾಂಗದ ಏಳಿಗೆಗಾಗಿ ಶ್ರಮಿಸಿದ, ರಾಜ್ಯ ಮಟ್ಟದಲ್ಲಿ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ವ್ಯಕ್ತಿಗಳಿಂದ 2025-26ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯ ಸರ್ಕಾರದ ವತಿಯಿಂದ ತಾಲೂಕು, ಜಿಲ್ಲಾ ಕೇಂದ್ರಗಳಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು 7 ಅಕ್ಟೋಬರ್ 2025 ರಂದು ಆಚರಿಸಲಾಗುತ್ತಿದೆ. ಶ್ರೀ ಮಹರ್ಷಿ ವಾಲ್ಮೀಕಿಯವರ ಸ್ಮರಣಾರ್ಥ ಪ್ರಶಸ್ತಿ ನೀಡಿ ಗೌರವಿಸಲು ಉದ್ದೇಶಿಸಿರುವ ಪ್ರಯುಕ್ತ ಅರ್ಹ ವ್ಯಕ್ತಿಗಳು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 10-09-2025ರ ಒಳಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಛೇರಿ ಬೆಳಗಾವಿ ಇಲ್ಲಿ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಛೇರಿ ಬೆಳಗಾವಿ ದೂರವಾಣಿ ಸಂಖ್ಯೆ: 0831-2407246 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ಇಲಾಖೆ: ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ, ; 2025-26ನೇ ಶೈಕ್ಷಣಿಕ ಸಾಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿನ ಖಾಲಿ ಇರುವ ಸೀಟುಗಳಿಗೆ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ (ಎಲ್ಲಾ ಮೆಟ್ರಿಕ್ ನಂತರದ ಕೋರ್ಸುಗಳ ವಿದ್ಯಾರ್ಥಿಗಳಿಗೆ) ಪ್ರವೇಶಕ್ಕಾಗಿ ರಾಜ್ಯ ವಿದ್ಯಾರ್ಥಿ ನಿಲಯ ತಂತ್ರಾಂಶ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶ **http://shp.karnataka.gov.in** ಮೂಲಕ 15 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಛೇರಿ ಹಾಗೂ ತಾಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಿಗೆ ಭೇಟಿ ನೀಡಿ ಪಡೆಯಬಹುದಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೋಲು ಗೆಲುವನ್ನು ಎರಡನ್ನು ಸರಿ ಸಮಾನವಾಗಿ ಕಾಣಬೇಕು

**ಮುದ್ದೇಬಿಹಾಳ:** ಸೋಲು ಗೆಲುವು ಸೋಪಾನ, ಕ್ರೀಡಾಕೂಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಕ್ರೀಡಾಮನೋಭಾವದಿಂದ, ಸ್ಪರ್ಧಾ ಮನೋಭಾವದಿಂದ ಭಾಗವಹಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್ ಸಾವಳಗಿ ಹೇಳಿದರು.

ತಾಲ್ಲೂಕಿನ ಹಡಲಗೇರಿ ಗ್ರಾಮದ ಪ್ರಾಥಮಿಕ ಶಾಲೆಗಳ ವಲಯ ಮಟ್ಟದ ಕ್ರೀಡಾಕೂಟವು ಎಚ್ ಪಿ ಎಸ್ ಶಾಲೆ ಮುದ್ನಾಳ ಅವರ ಆಶ್ರಯದಲ್ಲಿ ವಿದ್ಯಾ ಚೇತನ ಪ್ರಾಥಮಿಕ ಶಾಲೆಯಲ್ಲಿ ಕ್ರೀಡಾಕೂಟ ಕಾರ್ಯಕ್ರಮದಲ್ಲಿ ಅವರ ಮಾತನಾಡಿದ ಸೋಲು ಗೆಲುವನ್ನು ಎರಡನ್ನು ಸರಿ ಸಮಾನವಾಗಿ ಕಾಣುವ ಗುಣವನ್ನು ಹೊಂದಿರಬೇಕು ಎಂದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ತಾಲೂಕ ಅಧ್ಯಕ್ಷರಾದ ಬಸವರಾಜ್ ಮುದನೂರು, ಸಿ.ಆರ್. ಪಿ. ಎನ್.ಬಿ.ಬಿರಾದಾರ,

ಸರ್ಕಾರಿ ಗ್ರೇಡ್ 1 ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಎ.ಸಿ.ಕೆರೂರ, ಪ್ರಾಥಮಿಕ ಶಾಲಾ ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಕೆ.ಬಿ.ಸಜ್ಜನ, ಪ್ರಾಥಮಿಕ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಜಿಲ್ಲಾ ಸಂಘಟನಾ ಕಾರ್ಯದರ್ಶಿ ರವೀಂದ್ರ ಮೆರೆಕೋರೆ, ಎಸ್ .ಜಿ .ಪಾಟೀಲ್, ರವಿ ಬೆನಕಟಗಿ ಅಧ್ಯಕ್ಷರು ವಿದ್ಯಾ ಚೇತನ ಪ್ರಾಥಮಿಕ ಮತ್ತು ಪ್ರೌಢಶಾಲೆ ಶಾಲೆ ಮುದ್ದೇಬಿಹಾಳ,ಎಸ್.ಎ .ಮೆರೆಕೋರ , ಗೀತಾ ನಾಲತವಾಡ, ವೇದಿಕೆ ಮೇಲಿದ್ದರು. ಹಡಲಗೇರಿ ವಲಯದ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳು, ತಂಡದ ವ್ಯವಸ್ಥಾಪಕರು, ದೈಹಿಕ ಶಿಕ್ಷಣ ಶಿಕ್ಷಕರಾದ ಎನ್.ಎಸ್.ಬಿರಾದಾರ, ಎನ್.ಡಿ. ಪನದಕಟ್ಟಿ, ಮಹೇಶ್ .ಕೊಣ್ಣುರ, ಎಂ. ಎಸ್.ಪಾಟೀಲ , ಮುತ್ತಣ್ಣ , ಶಾಂತಪ್ಪ ಹವಾಲ್ದಾರ್, ರಾಜು ರಾಥೋಡ್ ನಿರ್ಣಾಯಕರಾಗಿ ಭಾಗವಹಿಸಿದ್ದರು.




# ಲಿಂ.ಡಾ.ಚೆನ್ನಬಸವ ಶ್ರೀಗಳ ಗದ್ದುಗೆ ನಿರ್ಮಾಣಕ್ಕೆ ಭೂಮಿಪೂಜೆ

ಜಮಖಂಡಿ: ನಗರದ ಐತಿಹಾಸಿಕ ಓಲೆಮಠದ ಲಿಂಗೈಕ್ಯ ಡಾ.ಅಭಿನವಕುಮಾರ ಚೆನ್ನಬಸವ ಮಹಾಸ್ವಾಮಿಗಳ ಗದ್ದುಗೆ ಮತ್ತು ಮಂಟಪ ನಿರ್ಮಾಣ ಕಾಮಗಾರಿಗೆ ಶಾಸಕ ಜಗದೀಶ ಗುಡಗುಂಟಿ ಭೂಮಿಪೂಜೆ ನೆರವೇರಿಸಿದರು.

ಓಲೆಮಠದ ಆವರಣದಲ್ಲಿ ಅಂದಾಜು ರೂ.10 ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ ಗದ್ದುಗೆ ಮತ್ತು ಮಂಟಪ ನಿರ್ಮಾಣಕ್ಕೆ ಮಂಗಳವಾರ ನಡೆದ ಕಾರ್ಯಕ್ರಮದಲ್ಲಿ ಅವರು ಭೂಮಿಪೂಜೆ ನೆರವೇರಿಸಿದರು.

ಲಿಂ.ಡಾ.ಅಭಿನವಕುಮಾರ ಚೆನ್ನಬಸವ ಮಹಾಸ್ವಾಮಿಗಳು ಐದು ಭಾಷೆಗಳಲ್ಲಿ ಪ್ರಾವಿಣ್ಯತೆ ಪಡೆದಿದ್ದರು. ಹಂಪಿಯ ಕನ್ನಡ ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಪದವಿ ಪಡೆದಿದ್ದರು. ಕನ್ನಡ ಸಾರಸ್ವತ ಲೋಕಕ್ಕೆ 87 ಕೃತಿಗಳನ್ನು ನೀಡಿದ್ದರು. 2024ರ ನವೆಂಬರ್ 7 ರಂದು ಲಿಂಗೈಕ್ಯರಾಗಿದ್ದರು.


ಲಿಂಗೈಕ್ಯ ಶ್ರೀಗಳ ಪ್ರಥಮ ಪುಣ್ಯಸ್ಮರಣೆ ವೇಳೆಗೆ ಗದ್ದುಗೆ ಮತ್ತು ಮಂಟಪದ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಓಲೆಮಠದ ಆನಂದ ದೇವರು ಶ್ರೀಗಳು ಮಾಹಿತಿ ನೀಡಿದರು.

ಮುಧೋಳ ತಾಲ್ಲೂಕಿನ ಶಿರೋಳ ಗ್ರಾಮದ ಉದ್ದಿಮೆದಾರ ರಾಜು ಗಸ್ತಿ ಗದ್ದುಗೆ ಮತ್ತು ಮಂಟಪ ನಿರ್ಮಾಣದ ಖರ್ಚು-ವೆಚ್ಚ ಭರಿಸುವ ಭಕ್ತಿಸೇವೆ ಸಲ್ಲಿಸುವ ವಾಗ್ದಾನ ಮಾಡಿದ್ದಾರೆ.

ರಾಯಲ್ ಪ್ಯಾಲೇಸ್ ಸ್ಕೂಲ್‌ನ ಆಡಳಿತಾಧಿಕಾರಿ ಬಸವರಾಜ ನ್ಯಾಮಗೌಡ, ಕಾಡಪ್ಪ ದೇಸಾಯಿ, ಮಲ್ಲಿಕಾರ್ಜುನ ಲಿಂಗನೂರ, ವಕೀಲ ರವಿ ಯಡಹಳ್ಳಿ, ಚನಬಸು ತೆಲಬಕ್ಕನವರ, ಮಲ್ಲಯ್ಯ ಮಠಪತಿ, ಶಿವಯ್ಯ ನಾಗರಾಳಮಠ, ಎಸ್.ವೈ. ಪಾಟೀಲ ಸದಾನಂದ ಬಾಗೇವಾಡಿ, ಎಸ್.ಎಚ್. ಮಠಪತಿ, ಕಾಡು ಮಾಳಿ, ರಾಜೇಶ್ವರಿ ಹಿರೇಮಠ, ಕಸ್ತೂರಿ ಜೈನಾಪುರ, ವಕೀಲ ಸಿ.ಎಸ್. ಬಾಂಗಿ, ಸಿದ್ರಾಮ ಗೊರನಾಳ, ಎ.ಆರ್. ಶಿಂಧೆ, ಸಿದ್ದಯ್ಯ ಕಲ್ಕತ್ತಿಮಠ, ಬಸವರಾಜ ಬಳಗಾರ, ಪ್ರೇಮ ಬಳೂಲಗಿಡದ, ಶಿವಾನಂದ ಕೊಣ್ಣೂರ, ಡಾ.ಟಿ.ಪಿ. ಗಿರಡ್ಡಿ, ಶಂಕರ ಕಾಳೆ, ಗಣೇಶ ಶಿರಗಣ್ಣವರ, ಪ್ರದೀಪ ಮಹಾಲಿಂಗಪುರಮಠ, ಮಲ್ಲು ದಾನಗೌಡ, ರಾಚಯ್ಯ ಮಠಪತಿ, ಅಜಯ ಕಡಪಟ್ಟಿ ಮತ್ತಿತರರು ಇದ್ದರು.



# ಚೈತನ್ಯ ಜ್ಞಾನವಿಕಾಸ ಕೇಂದ್ರದಲ್ಲಿ ವಾರ್ಷಿಕೋತ್ಸವ ಕಾರ್ಯಕ್ರಮ



**ರಾಯಬಾಗ** ತಾಲೂಕಿನ ಚಿಂಚಲಿ ವಲಯದ ಜೈಭೀಮ ನಗರ ಚೈತನ್ಯ ಜ್ಞಾನವಿಕಾಸ ಕೇಂದ್ರದಲ್ಲಿ ವಾರ್ಷಿಕೋತ್ಸವ ಕಾರ್ಯಕ್ರಮ ಯೋಜನೆ ಮಾಡಲಾಗಿತ್ತು.

ಸದರಿ ಕಾರ್ಯಕ್ರಮವನ್ನು ಸ್ಥಳೀಯ ಪಟ್ಟಣ ಪಂಚಾಯತಿ ಅಧ್ಯಕ್ಷರು ಕವಿತಾ ಸಹದೇವ ಯಡ್ರಾವಿ ಇವರು ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದ *ಪ್ರಾಸ್ತಾವಿಕತೆಯನ್ನು ತಾಲೂಕಿನ ಜ್ಞಾನ ವಿಕಾಸ್ ಸಮನ್ವಯಾಧಿಕಾರಿ ಸುರೇಖಾ ಹೆಬ್ಬಳ್ಳಿ ಅವರು ಯೋಜನೆಯ ಕಾರ್ಯಕ್ರಮದ ಕುರಿತು ಮಾತನಾಡಿದರು.

ನಂತರದಲ್ಲಿ ಕಾರ್ಯಕ್ರಮದ *ಮುಖ್ಯ ಅತಿಥಿಗಳಾದ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ಕವಿತಾ ಸಹದೇವ ಯಡ್ರಾವಿ ಅವರು ಮಹಿಳಾ ಆರೋಗ್ಯ ಎಂಬ ವಿಷಯದ ಕುರಿತು ಮತ್ತು ಮಹಿಳೆಯರು ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂತೋಷ ಪಡಬೇಕೆಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಊರಿನ ಗಣ್ಯರು ಸುಭಾಷ್ ಮೇಲಾ ಜುರೆ, ಪ್ರಕಾಶ್ ತೇರದಾಳೆ, ಮಹೇಶ್ ಕುರಣೆ, ಕಾರ್ಯಕ್ರಮಕ್ಕೆ ಶುಭ ಹಾರೈಸಿದರು,

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕವಿತಾ ಶಮನೆವಾಡಿ ಕೇಂದ್ರದ ವರದಿ ಮಂಡಿಸಿದರು.

ಕೇಂದ್ರದ ಸದಸ್ಯರಿಗೆ ಆಟೋಟ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ವಿಜೇತರಿಗೆ ಬಹುಮಾನ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜ್ಞಾನವಿಕಾಸ ಸಮನ್ವಯಾ ಅಧಿಕಾರಿ ಹಾಗೂ ಸೇವಾಪ್ರತಿನಿಧಿ ಋಷಿಕೇಶ್,ಕೇಂದ್ರದ ಸದಸ್ಯರು ಉಪಸ್ಥಿತರಿದ್ದರ.

# ನಿಪ್ಪಾಣಿ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟ ಸ್ಪರ್ಧೆ: ಅರ್ಜಿ ಆಹ್ವಾನ

**ಬೆಳಗಾವಿ,** : 2025-26ನೇ ಸಾಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಪ್ರತಿ ವರ್ಷದಂತೆ ಈ ಬಾರಿಯೂ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷ ಮತ್ತು ಮಹಿಳೆಯರಿಗಾಗಿ ತಾಲೂಕು ಮಟ್ಟದಲ್ಲಿ ಏರ್ಪಡಿಸಲಾಗಿದೆ.

ನಿಪ್ಪಾಣಿ ತಾಲೂಕಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 1 ರಿಂದ 2 ರ ವರೆಗೆ ಬೆಳಿಗ್ಗೆ 9 ಗಂಟೆಗೆ ನಿಪ್ಪಾಣಿ ತಾಲೂಕಿನ ಬೆಡಕಿಹಾಳ ಗ್ರಾಮದ ಬಿ.ಎಸ್ ಪದವಿಪೂರ್ವ ಮಹಾವಿದ್ಯಾಲಯ ಆಟದ ಮೈದಾನದಲ್ಲಿ ಆಯೋಜಿಸಲಾಗಿದೆ.

ಅಥ್ಲೇಟಿಕ್ಸ್ ಕ್ರೀಡೆಗಳಾದ (ಮಹಿಳೆಯರಿಗೆ ಮತ್ತು ಪುರುಷರಿಗೆ) ಓಟ, ಉದ್ದ ಜಿಗಿತ, ಎತ್ತರ ಜಿಗಿತ, ಗುಂಡು ಎಸೆತ, ಟ್ರಿಪಲ್ ಜಂಪ್, ಜಾವಲಿನ್ ಥ್ರೋ, ಹರ್ಡಲ್ಸ್ ಹಾಗೂ ಗುಂಪು ಆಟಗಳಾದ ವಾಲಿಬಾಲ್, ಫುಟ್ಬಾಲ್, ಖೋಖೋ, ಕಬಡ್ಡಿ, ಥ್ರೋಬಾಲ್, ಯೋಗಾಸನ, ಕ್ರೀಡೆಗಳಲ್ಲಿ ಭಾಗವಹಿಸಬಹುದಾಗಿದೆ.

ದಸರಾ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಿರುತ್ತಾರೆ. ಕ್ರೀಡಾಪಟುಗಳು ಪ್ರತಿನಿಧಿಸುವ ತಾಲೂಕು/ಜಿಲ್ಲೆಯ ಸ್ಥಳೀಯವಾದ ದೃಢೀಕರಣದ ಬಗ್ಗೆ ದಾಖಲೆಗಳನ್ನು ಸಲ್ಲಿಸುವುದು (ಶಾಲಾ/ಕಾಲೇಜಿನ ಗುರುತಿನ ಚೀಟಿ, ಆಧಾರಕಾರ್ಡ್, ರೇಷನ್‌ಕಾರ್ಡ್, ಮತದಾರರ ಗುರುತಿನಚೀಟಿ ಹಾಗೂ ಸರ್ಕಾರದಿಂದ ಅಧಿಕೃತ ಇರುವ ಇತರೆ ಗುರುತಿನ ಚೀಟಿಗಳು). ಸದರಿ ಕ್ರೀಡಾಪಟುಗಳು ಬೇರೆ ಜಿಲ್ಲೆಯಿಂದ ಭಾಗವಹಿಸಿದ್ದಲ್ಲಿ ಅವರನ್ನು ನಿಷೇಧಿಸಲಾಗುವುದು. ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳು https://dasaracmcup-2025.etrpindia.com/KA-sports (ಆನ್‌ಲೈನ್ ಲಿಂಕ್) ಮೂಲಕ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ: 9980611131, 9739242278 ಗಳಿಗೆ ಅಥವಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಗೌರಿಗಣೇಶ ಹಬ್ಬದ ಪ್ರಯುಕ್ತ ವಿಶೇಷ ಬಸ್ ಸೌಲಭ್ಯ

**ಬೆಳಗಾವಿ,** : ಗೌರಿಗಣೇಶ ಹಬ್ಬದ ಪ್ರಯುಕ್ತ ಬೆಳಗಾವಿ ನಗರದ ವ್ಯಾಪ್ತಿಯಲ್ಲಿ ಪ್ರತಿಷ್ಠಾನಗೊಳ್ಳಲಿರುವ ಸಾರ್ವಜನಿಕ ಗಣಪತಿ ಮೂರ್ತಿಗಳ ವೀಕ್ಷಣೆಗೆ ಬೆಳಗಾವಿ ನಗರ ಹಾಗೂ ಉಪನಗರಗಳಿಂದ ಆಗಮಿಸುವ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ದಿನಾಂಕ: 31-08-2025 ರಿಂದ 06-09-2025 ರ ವರೆಗೆ ನಗರ ಸಾರಿಗೆಗಳಾದ ಅನಗೋಳ, ವಡಗಾಂವ, ಮಜಗಾಂವ, ವಂಟಮೂರಿ, ಗುರುಪ್ರಸಾದ ಕಾಲನಿ, ಸಹ್ಯಾದ್ರಿನಗರ ಬಡಾವಣೆಯ ಹಾಗೂ ಯಳ್ಳೂರ ಮಾರ್ಗದ ಮಾರ್ಗಸೂಚಿಗಳಿಗೆ ಪ್ರಯಾಣಿಕರ ಜನದಟ್ಟಣೆಗೆ ಅನುಸರಿಸಿ ತಡರಾತ್ರಿವರೆಗೆ ಹೆಚ್ಚುವರಿ ಸುತ್ತುಗಳನ್ನು ಅಳವಡಿಸಿ ವಾಹನ ಕಾರ್ಯಾಚರಣೆಗೊಳಿಸಲು ಯೋಜನೆ ರೂಪಿಸಿಕೊಳ್ಳಲಾಗಿದೆ.

ಬೆಳಗಾವಿ ವಿಭಾಗದ ವ್ಯಾಪ್ತಿಗೆ ಒಳಪಡುವ ಬೈಲಹೊಂಗಲ/ಖಾನಾಪೂರ ಘಟಕಗಳ ವಿವಿಧ ಮಾರ್ಗಗಳಿಂದ ಮತ್ತು ಗೋಕಾಕ, ಕೊಲ್ಹಾಪೂರ, ಚಿಕ್ಕೋಡಿ ಮುಂತಾದ ಮಾರ್ಗಗಳಿಂದ ಬೆಳಗಾವಿ ನಗರಕ್ಕೆ ಸಾರ್ವಜನಿಕ ಗಣಪತಿ ಮೂರ್ತಿಗಳ ವೀಕ್ಷಣೆಗಾಗಿ ಬರುವ ಪ್ರಯಾಣಿಕರ ಜನದಟ್ಟಣೆಗಣುಗುಣವಾಗಿ ಈ ಅವಧಿಯಲ್ಲಿ ತಡರಾತ್ರಿ ವರೆಗೆ ಪ್ರತಿ ಘಟಕದಿಂದ 2 ರಿಂದ 3 ವಾಹನಗಳನ್ನು ಹೆಚ್ಚುವರಿಯಾಗಿ ಕಾರ್ಯಾಚರಣೆಗೆ ವ್ಯವಸ್ಥೆ ಮಾಡಲಾಗಿದ್ದು, ಸದರಿ ವಿಶೇಷ ಸಾರಿಗೆಗಳ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ವಾಕರಸಾಸಂಸ್ಥೆ, ಬೆಳಗಾವಿ ವಿಭಾಗದ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಕ್ಕೇರಿ ವಿದ್ಯುತ್ ಸಂಘಕ್ಕೆ ಸಚಿವ ಜಾರಕಿಹೊಳಿ ಭೇಟಿ: ಗ್ರಾಹಕ-ಸದಸ್ಯರ ಕುಂದುಕೊರತೆ ಪರಿಹರಿಸಲು ಸೂಚನೆ

**ಹುಕ್ಕೇರಿ:** ಸಹಕಾರಿ ತತ್ವದಡಿ ವಿದ್ಯುತ್ ಸರಬರಾಜು ಮಾಡುತ್ತಿರುವ ದೇಶದ ಏಕೈಕ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಗುರುವಾರ ಸಂಸ್ಥೆಯ ಗ್ರಾಹಕ–ಸದಸ್ಯರ ಅಹವಾಲು ಆಲಿಸಿದರು.

ತಾಲೂಕಿನ ವಿವಿಧೆಡೆಯಿಂದ ಆಗಮಿಸಿದ ಗ್ರಾಹಕ–ಸದಸ್ಯರ ಕುಂದುಕೊರತೆಗಳನ್ನು ಸಮಚಿತ್ತದಿಂದ ಆಲಿಸಿದ ಸಚಿವ ಜಾರಕಿಹೊಳಿ ಅವರು, ಕೂಡಲೇ ಈ ಸಮಸ್ಯೆಗಳನ್ನು ಇತ್ಯಥ–ರ್ಪಡಿಸುವಂತೆ ಸಂಸ್ಥೆಯ ಅಧಿಕಾರಿಗಳಿಗೆ ಸೂಚಿಸಿದರು. ಬಳಿಕ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ತೋಟದ ಮನೆಗಳಿಗೆ ನಿರಂತರ ಮತ್ತು ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಲು ಹಲವು ಕ್ರಮ ವಹಿಸಲಾಗಿದೆ. ಇದರಿಂದ ವಿದ್ಯಾರ್ಥಿಗಳ ವಿದ್ಯಾರ್ಜನೆ, ಗ್ರಾಹಕರ ದಿನಬಳಕೆಗೆ ಅನುಕೂಲವಾಗಿದೆ. ವಿದ್ಯುತ್ ಸಂಘದಿಂದ ಉತ್ತಮ ಆಡಳಿತ ನೀಡುವ ಉದ್ದೇಶ ಹೊಂದಲಾಗಿದೆ. ಹಾಗಾಗಿ ಬರುವ ಚುನಾವಣೆಯಲ್ಲಿ ತಮ್ಮ ಗುಂಪಿಗೆ ಮತ ನೀಡುವ ಮೂಲಕ ಸಹಕಾರಿ ಸಂಸ್ಥೆಯನ್ನು ಉಳಿಸಿ ಬೆಳೆಸಲು ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.



ಹಿರಣ್ಯಕೇಶಿ ಮತ್ತು ವಿದ್ಯುತ್ ಸಂಘದ ನಿರ್ದೇಶಕರಿಗೆ ತಡವಾಗಿ ಜ್ಞಾನೋದಯವಾದಂತಾಗಿದೆ. ಅನೇಕ ದಶಕಗಳ ದಬ್ಬಾಳಿಕೆ, ದೌರ್ಜನ್ಯದಿಂದ ಇದೀಗ ಹೊರ ಬಂದಿರುವ ನಿರ್ದೇಶಕರು ಇದೀಗ ಎಚ್ಚರಿಕೆ ಹೆಜ್ಜೆ ಇಡಬೇಕು. ತಾಲೂಕಿನ ಜನರಲ್ಲಿ ಅರಿವು ಮೂಡಿಸಿ ವಿದ್ಯುತ್ ಸಂಘದ ಹಾನಿಗೆ ಕಾರಣವಾದ ವಿರೋಧಿಗಳಿಗೆ ತಕ್ಕ ಪಾಠ ಕಲಿಸಬೇಕು ಎಂದು ಅವರು ಹೇಳಿದರು.

ಇದೇ ವೇಳೆ ಸಚಿವರು ತಾಲೂಕಿನ ವಿವಿಧ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಸ್ಥೆಯ ಕಾರ್ಯದರ್ಶಿಗಳ ಸಭೆ ನಡೆಸಿದರು. ಹಿರಣ್ಯಕೇಶಿ ಕಾರ್ಖಾನೆ ಅಧ್ಯಕ್ಷ ಅಜ್ಜಪ್ಪ ಕಲ್ಲಟ್ಟಿ, ಉಪಾಧ್ಯಕ್ಷ ಅಶೋಕ ಪಟ್ಟಣಶೆಟ್ಟಿ, ನಿರ್ದೇಶಕ ಬಸವರಾಜ ಮರಡಿ. ವಿದ್ಯುತ್ ಸಂಸ್ಥೆಯ ಅಧ್ಯಕ್ಷ ಜಯಗೌಡ ಪಾಟೀಲ, ನಿರ್ದೇಶಕರಾದ ರವೀಂದ್ರ ಹಿಡಕಲ್, ಶಶಿರಾಜ ಪಾಟೀಲ, ವ್ಯವಸ್ಥಾಪಕ ನಿರ್ದೇಶಕ ರವೀಂದ್ರ ಪಾಟೀಲ, ಪುರಸಭೆ ಅಧ್ಯಕ್ಷ ಇಮ್ರಾನ ಮೋಮಿನ್, ಗ್ಯಾರಂಟಿ ಯೋಜನೆ ತಾಲೂಕು ಅಧ್ಯಕ್ಷ ಶಾನೂಲ್ ತಹಶೀಲ್ದಾರ, ಸಚಿವರ ಆಪ್ತ ಸಹಾಯಕರಾದ ಪಾಂಡುರಂಗ ಮನ್ನಿಕೇರಿ, ಅರವಿಂದ ಕಾರ್ಚಿ, ಕಿರಣ ರಜಪೂತ, ದಯಾನಂದ ಪಾಟೀಲ, ಮುಖಂಡರಾದ ರಿಷಭ್ ಪಾಟೀಲ, ಮಹಾಂತೇಶ ಮಗದುಮ್ಮ, ಮೌನೇಶ ಪೋತದಾರ, ಸಂತೋಷ ಮುಡಸಿ, ರಾಜು ಸಿದ್ನಾಳ, ಬಸವರಾಜ ಕೋಳಿ, ಮಲ್ಲಿಕಾರ್ಜುನ ರಾಶಿಂಗೆ, ಬಸವರಾಜ ದೊಡಮನಿ, ಮಹೇಶ ಹಟ್ಟಿಹೊಳಿ, ಅಕ್ಷಯ ವೀರಮುಖ, ಲಕ್ಷ್ಮಣ ಹೂಲಿ, ಕೆಂಪಣ್ಣಾ ಶಿರಹಟ್ಟಿ, ಕೆ.ವೆಂಕಟೇಶ, ಭೀಮಸೇನ ಬಾಗಿ, ವೀರುಪಾಕ್ಷಿ ಮರೆನ್ನವರ, ಭೀಮಗೌಡ ಅಮ್ಮಣಗಿ, ಸ್ಥಾನಿಕ ಅಭಿಯಂತರ ನೇಮಿನಾಥ ಖೆಮಲಾಪುರೆ, ವ್ಯವಸ್ಥಾಪಕ ದುರದುಂಡಿ ನಾಯಿಕ ಮತ್ತಿತರರು ಉಪಸ್ಥಿತರಿದ್ದರು.

# 5 ಲಕ್ಷ ರೂ. ಪರಿಹಾರ ವಿತರಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್



**ಬೆಳಗಾವಿ :** ಕೆಲಸದ ವೇಳೆ ವಿದ್ಯುತ್ ಪ್ರವಹಿಸಿ ಮೃತಪಟ್ಟಿದ್ದ ಯುವಕನ ಕುಟುಂಬಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗುರುವಾರ ಪರಿಹಾರ ವಿತರಿಸಿದರು.

ತುಮ್ಮರಗುದ್ದಿ ಗ್ರಾಮದ ಲಕ್ಷ್ಮಣ ಕೆಂಪದಿನ್ನಿ ಇವರ ಮಗ ಸಾಯಿನಾಥ್ ಕೆಲವು ದಿನಗಳ ಹಿಂದೆ ಗುತ್ತಿಗೆ ಆಧಾರದ ಮೇಲೆ ವಿದ್ಯುತ್ ಕೆಲಸಕ್ಕೆ ತೆರಳಿದ ವೇಳೆ ವಿದ್ಯುತ್ ತಂತಿ ಪ್ರವಹಿಸಿ ಮೃತಪಟ್ಟಿದ್ದ. ಈ ಹಿನ್ನೆಲೆಯಲ್ಲಿ ವ್ಯಕ್ತಿಯ ಕುಟುಂಬಕ್ಕೆ 5 ಲಕ್ಷ ರೂ.ಗಳ ಚೆಕ್ ನ್ನು ಹಸ್ತಾಂತರಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಕುಟುಂಬಸ್ಥರಿಗೆ ಧೈರ್ಯ ತುಂಬಿದರು.

ಈ ವೇಳೆ ಶೇಖರ್ ಹೊಸೂರಿ, ಶಂಕರಗೌಡ ಪಾಟೀಲ, ಕಲ್ಲಪ್ಪ ಸುತಗಟ್ಟಿ, ಬಾಳಪ್ಪ ಸಿನಗಿ, ಸತ್ಯಪ್ಪ ನಂದ್ಯಾಗೋಳ, ಬಸುನಿ ಪಾಟೀಲ, ವಿಲ್ಸನ್ ಮಹಾರ್, ಮಲ್ಲಪ್ಪ ಗೋಸಾವಿ, ಶೇಖರ್ ಸಿನಗಿ, ಶಿವಾಜಿ ತಳವಾರ್, ಬಾಳಪ್ಪ ಯದ್ದಲಗುಡ್ಡ ಇದ್ದರು.

# ನಶಾ ಮುಕ್ತ ಭಾರತ ಅಭಿಯಾನ: ಬಂಡೀಪುರದಿಂದ ಬೀದರ್ ವರೆಗೆ 3 ದಿನಗಳ ಬೈಕ್ ಜಾಥಾ

**ಕಾರವಾರ, :** ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು ಆಚರಿಸುತ್ತಿರುವ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ, ಆ. 29 ರಿಂದ 31 ರವರೆಗೆ ಬಂಡೀಪುರದಿಂದ ಬೀದರ್ ವರೆಗೆ 3 ದಿನಗಳ ಬೈಕ್ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಮದ್ಯಪಾನ ಮತ್ತು ಮಾದಕ ವಸ್ತುಗಳ ದುರುಪಯೋಗದ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣಕ್ಕೆ ಪ್ರೇರಣೆ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ರಾಜ್ಯ ಸರ್ಕಾರದ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್‌ಸಿಂಗ್ ತಿಳಿಸಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅರಣ್ಯ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ (ಎನ್.ಎಸ್.ಎಸ್.) ಮತ್ತು ಎನ್.ಸಿ.ಸಿ. ಸಹಯೋಗದೊಂದಿಗೆ ಜಾಥಾ ಆಯೋಜಿಸಲಾಗುತ್ತಿದೆ. ಸಾರ್ವಜನಿಕರಿಂದ ಆಯ್ಕೆಯಾದ 20 ಬೈಕ್ ಸವಾರರು ಭಾಗವಹಿಸಲಿದ್ದಾರೆ. ಈ ಜಾಥಾ ಕಾರ್ಯಕ್ರಮವು ಮಾರ್ಗದುದ್ದಕ್ಕೂ ರಾಜ್ಯದ ಪ್ರಮುಖ ಜಿಲ್ಲೆಗಳ ಮೂಲಕ ಸಾಗುತ್ತಾ ಶಾಲೆಗಳು, ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಿದೆ.

ಈ ಬೃಹತ್ ಅಭಿಯಾನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್ ಸಿಂಗ್, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಅರಣ್ಯ) ಮನೋಜ ಕುಮಾರ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅಭಿವೃದ್ಧಿ) ಆರ್. ರವಿಶಂಕರ್, ಬಂಡೀಪುರ ಹುಲಿ ಮೀಸಲು ಪ್ರದೇಶದ ಉಪ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ನಿರ್ದೇಶಕ ಎಸ್.ಪ್ರಭಾಕರನ್, ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ ಸರ್ಫರಾಜ್ ಖಾನ್ ಹಾಗೂ ಇತರ ಸರ್ಕಾರದ ಹಿರಿಯ ಅಧಿಕಾರಿಗಳು ಮತ್ತು ಗಣ್ಯರು ರೂಪಿಸಿದ್ದಾರೆ.

ದೇಶಾದ್ಯಂತ 1 ಲಕ್ಷ ಕಿಲೋಮೀಟರುಗಳಿಗೂ ಹೆಚ್ಚು ಪ್ರಯಾಣವನ್ನು ಸೈಕ್ಲಿಂಗ್‌ನಲ್ಲಿ ಕ್ರಮಿಸಿ ಅಪ್ರತಿಮ ಸಾಧನೆ ಮಾಡಿರುವ ರೈಡರ್ ನಂದಿನಿ ಮಿಥುನ್ ಈ ಜಾಥಾ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವುದು ವಿಶೇಷವಾಗಿದೆ. ಅವರು ತಮ್ಮ ಅಸಾಧಾರಣ ಅನುಭವಗಳು ಮತ್ತು ಬದ್ಧತೆಯಿಂದ ಸಾಮಾಜಿಕ ಉದ್ದೇಶಗಳ ಕಡೆಗೆ ಯುವಕರನ್ನು ಪ್ರೇರೇಪಿಸಲಿದ್ದಾರೆ.

ಈ ಗಣ್ಯರು ಶಾಲೆಗಳು, ಕಾಲೇಜುಗಳು, ಮತ್ತು ಸಾರ್ವಜನಿಕ ವೇದಿಕೆಗಳಲ್ಲಿ ಭಾಗವಹಿಸಿ, ಯುವಜನತೆಗೆ ಉದ್ದೇಶಿತ ಜಾಗೃತಿ ಭಾಷಣಗಳು ಮತ್ತು ಸಂದೇಶಗಳನ್ನು ನೀಡಲಿದ್ದಾರೆ. ಕರ್ನಾಟಕ ಸರ್ಕಾರವು ಈ ಜಾಥಾ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಗೆ ಮಾದಕ ದ್ರವ್ಯ ಮುಕ್ತ ಹಾಗೂ ಆರೋಗ್ಯಕರ ಸಮಾಜವನ್ನು ಸೃಷ್ಟಿಸುವ ಪ್ರಯತ್ನವಾಗಿ ಹಮ್ಮಿಕೊಳ್ಳುತ್ತಿದೆ.

# ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ:ಯಾವುದೇ ಜಾತಿಗಳು ಬಿಟ್ಟು ಹೋಗಿದ್ದರೆ ಮಾಹಿತಿ ನೀಡಲು ಸೆ.1 ರವರೆಗೆ ಅವಧಿ ವಿಸ್ತರಣೆ

ಕಾರವಾರ : ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರ್ಕಾರದ ಆದೇಶಾನುಸಾರ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳು ಮತ್ತು ಇತರೆ ಜಾತಿ/ಉಪಜಾತಿಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ದಿನಾಂಕ: 22.08.2025 ರಂದು ಪತ್ರಿಕೆಗಳಲ್ಲಿ ಪ್ರಕಟಣೆ ನೀಡಿ ಯಾವುದೇ ಜಾತಿ/ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆಗಳು ಇದ್ದಲ್ಲಿ, 07 ದಿನಗಳ ಒಳಗೆ ನೀಡಲು ಕೋರಲಾಗಿತ್ತು.

ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಈ ಅವಧಿಯನ್ನು ವಿಸ್ತರಿಸಲು ಕೋರಿರುವ ಕಾರಣ, ಈ ಬಗ್ಗೆ ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ದಿನಾಂಕ: 01.09.2025 ರ ಸಂಜೆ 5.00 ಘಂಟೆಯವರೆಗೆ ವಿಸ್ತ–ರಿಸಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಸಂಗ್ರಹಿಸಲಾದ ಜಾತಿ/ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು.

ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಸದಸ್ಯ ಕಾರ್ಯದರ್ಶಿಗಳು,ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ,ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ,ಬೆಂಗಳೂರು ಅಥವಾ **ksc-bcbgmail.com** ಇ–ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ. ಹೆಚ್ಚಿನವಿವರಗಳಿಗೆ ದೂ.ಸಂಖ್ಯೆ 080–29506668 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಕರಿಕಟ್ಟಿಯಲ್ಲಿ 2 ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಲಕ್ಷ್ಮೀ ಹೆಬ್ಬಾಳಕರ್ ಭೂಮಿ ಪೂಜೆ

# ಯಾವುದೇ ಕಾರಣದಿಂದ ಮಕ್ಕಳು ಶಾಲೆ ಬಿಡಬೇಡಿ - ಸಚಿವರ ಕರೆ



**ಬೆಳಗಾವಿ :** ಕರಿಕಟ್ಟಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಮಾರು 30.16 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಾಣಗೊಳ್ಳಲಿರುವ 2 ಹೆಚ್ಚುವರಿ ಕೊಠಡಿ ನಿರ್ಮಾಣದ ಕಾಮಗಾರಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಗುರುವಾರ ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣಕ್ಕೆ ಹಿಂದಿನಿಂದಲೂ ಆದ್ಯತೆ ನೀಡುತ್ತಿಲ್ಲ. ಹಾಗಾಗಿ ನಾನು ಶಾಸಕಿಂ–ಮಾದ ನಂತರ ಶೈಕ್ಷಣಿಕ ಮೂಲ ಸೌಕರ್ಯ ಸೃಷ್ಟಿಗೆ ಮೊದಲ ಆದ್ಯತೆ ನೀಡುತ್ತ ಬಂದಿದ್ದೇನೆ. ಗ್ರಾಮೀಣ ಮಕ್ಕಳು ಶಿಕ್ಷಣದಿಂದ ಯಾವುದೇ ಕಾರಣದಿಂದ ವಂಚಿತರಾಗಬಾರದೆನ್ನುವುದೇ ನನ್ನ ಧ್ಯೇಯ. ಪ್ರತಿ ಊರಲ್ಲಿ ಅಗತ್ಯವಿರುವಷ್ಟು ಕೊಠಡಿ, ಶೈಕ್ಷಣಿಕ ಉಪಕರಣ ಸೇರಿದಂತೆ ಎಲ್ಲ ಸೌಲಭ್ಯ ಕಲ್ಪಿಸಲಾಗುತ್ತಿದೆ. ಯಾವುದೇ ಕಾರಣದಿಂದ ಮಕ್ಕಳು ಶಾಲೆ ಬಿಡಬಾರದು ಎಂದು ಸಚಿವರು ಕರೆ ನೀಡಿದರು.

ಈ ವೇಳೆ ಕ್ಷೇತ್ರ ಶಿಕ್ಷಣಾಧಿಕಾರಿ ಆಂಜನೇಯ, ಚನಬಸ್ಸು ಧರನಟ್ಟಿ, ಯಲ್ಲಪ್ಪ ಕರಡಿಗುದ್ದಿ, ದುರಗಪ್ಪ ದಾಸನಟ್ಟಿ, ರಮೇಶ ಕಪರಟ್ಟಿ, ಸಿದರು ಕಪರಟ್ಟಿ, ತುಕಾರಾಮ ಕರಡಿಗುದ್ದಿ, ಯಲ್ಲಪ್ಪ ಧರನಟ್ಟಿ. ಯಲ್ಲಪ್ಪ ನಾಯಿಕ, ಸಿದರು ಕಪರಟ್ಟಿ ಮುಂತಾದವರು ಉಪಸ್ಥಿತರಿದ್ದರು.

*****

# ಹೈಟೆಕ್ ಹಾರ್ವೆಸ್ಟರ್ ಹಬ್ ಅರ್ಜಿ ಆಹ್ವಾನ

**ವಿಜಯಪುರ, :** 2025–26 ನೇ ಸಾಲಿಗೆ ಕೃಷಿ ಇಲಾಖೆ ವತಿಯಿಂದ ಹೈಟೆಕ್ ಹಾರ್ವೆಸ್ಟರ್ ಹಬ್ ಕಾರ್ಯಕ್ರಮದಡಿ ಶುಗರ್ ಕೇನ ಹಾರ್ವೆಸ್ಟರ್ ಹಬ್ ಗಳನ್ನು ಹಾಗೂ ಕಂಬೈನ್ಸ್ ಹಾರ್ವೆಸ್ಟರ್ ಹಬ್‌ಗಳನ್ನು ಸಹಾಯಧನದಡಿ ವಿತ–ರಿಸಲು ವೈಯಕ್ತಿಕ ಫಲಾನುಭವಿಗಳಿಗೆ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅವಕಾಶ ನೀಡುವ ನಿಟ್ಟಿನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಸಾಮಾನ್ಯ ಹಾಗೂ ಪರಿಶಿಷ್ಟ ವರ್ಗದಡಿ ವೈಯಕ್ತಿಕ ಫಲಾನುಭವಿಗಳಿಗೆ ಶುಗರ್ ಕೇನ ಹಾರ್ವೆಸ್ಟರ್ ಹಾಗೂ ಕಂಬೈನ್ಸ್ ಹಾರ್ವೆಸ್ಟರ್ ಹಬ್‌ಗಳನ್ನು ಸಹಾಯಧನದಡಿ ಅನುಷ್ಠಾನಗೊಳಿಸಲಾಗುತ್ತಿದೆ. ಯಂತ್ರೋಪಕರಣ ಖರೀದಿಸಲು ಸಹಾಯಧನ ಆದ್ಯತೆ ಹಾಗೂ ಅನುದಾನ ಲಭ್ಯತೆ ಮೇರೆಗೆ ವಿತರಿಸಲಾಗುವುದು. ಆಸಕ್ತರು, ಅರ್ಜಿಗಳನ್ನು ಎಲ್ಲಿ ಸಲ ಹಾಗೂ ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕವಲಗಿಯ ಹಾಗೂ ಹೊನ್ನುಟಗಿಯಲ್ಲಿ ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ





**ವಿಜಯಪುರ, ;** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ವಿಜಯಪುರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಲಬುರ್ಗಿಯ ಖಾಯಂ ಜನತಾ ನ್ಯಾಯಾಲಯ, ಜಿಲ್ಲಾ ನ್ಯಾಯಾಂಗ ಇಲಾಖೆ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತಿ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ವಿಜಯಪುರ ತಾಲೂಕಿನ ಕವಲಗಿಯ ಆಂಜನೇಯ ದೇವಸ್ಥಾನದ ಸಭಾ ಭವನದಲ್ಲಿ ಹಾಗೂ ಹೊನ್ನುಟಗಿಯ ಗ್ರಾಮ ಪಂಚಾಯತಿಯ ಆವರಣದಲ್ಲಿ ಖಾಯಂ ಜನತಾ ನ್ಯಾಯಾಲಯ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಯಿತು.

ಅಭಿಯಾನವನ್ನು ಜಿಲ್ಲಾ ನ್ಯಾಯಾಧೀಶರು ಹಾಗೂ ಕಲಬುರ್ಗಿ ಖಾಯಂ ಜನತಾ ನ್ಯಾಯಾಲಯದ ಅಧ್ಯಕ್ಷರಾದ ಎಸ್. ಎಲ್.ಚವ್ಹಾಣ ಅವರು ಉದ್ಘಾಟಿಸಿದರು. ಮದಭಾವಿ ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀಮತಿ ಭಾಗವ್ವ ಮಾದರ ಹಾಗೂ ಹೊನ್ನುಟಗಿಯ ಗ್ರಾಮ ಪಂಚಾಯತಿಯ ಅಧ್ಯಕ್ಷರಾದ ಶ್ರೀಮತಿ ಸಾವಿತ್ರಿ ಶಿವಪ್ಪ ಕೊಳುರ್ಗಿ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಕಲಬುರಗಿ ಖಾಯಂ ಜನತಾ ನ್ಯಾಯಾಲಯದ ಸದಸ್ಯರಾದ ವಿಜಯ ವಿಠ್ಠಲ, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಡಿ.ಜಿ.ಬಿರಾದಾರ, ವಿಜಯಪುರ ತಹಶೀಲ್ದಾರರಾದ ಪ್ರಶಾಂತ ಚನಗೊಂಡ, ವಿಜಯಪುರ ತಾಲೂಕು ಪಂಚಾಯತಿಯ ಕಾರ್ಯ ನಿರ್ವಹಣಾಧಿಕಾರಿಯಾದ ಬಾಬು ರಾಠೋಡ ಭಾಗವಹಿಸಿದ್ದರು. ವಕೀಲರಾದ ಬಾಬು ಅವತಾಡೆ ಅವರು ಅತಿಥಿ ಉಪನ್ಯಾಸ ನೀಡಿದರು. ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳು, ಗ್ರಾಮಸ್ಥರು ಇದ್ದರು.

# ಸತತ 50ನೇ ವರ್ಷವೂ ಗಣೇಶ ಮೂರ್ತಿ ಪ್ರತಿಷ್ಠಾಪನೆ

**ಜಮಖಂಡಿ:** ತಾಲೂಕಿನ ಹುಲ್ಯಾಳ ಗ್ರಾಮ ಬೀಳಗಿ ಓಣಿಯಲ್ಲಿ ಸತತ 50 ವರ್ಷದಿಂದ ಶ್ರೀ ವಿನಾಯಕ ಉತ್ಸವ ಸಮೀತಿಯವರು ಗಣೇಶಮೂರ್ತಿಯನ್ನು ಪ್ರತಿಷ್ಠಾಪಿಸುವ ಮೂಲಕ ಪೂಜೆ, ಭಕ್ತಿ, ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದಾರೆ.



ಗ್ರಾಮದ ಬೀಳಗಿ ಓಣಿಯಲ್ಲಿ 1975ರಲ್ಲಿ ಪ್ರತಿಷ್ಠಾಪನೆಗೊಂಡಿರುವ ಗುರುವಾರ ಪ್ರತಿಷ್ಠಾಪನೆಗೊಂಡಿರುವ ಗಣೇಶ 50 ವಸಂತಗಳನ್ನು ಪೂರೈಸಿದ್ದಾನೆ. ವಿಶೇಷ ಏನಂದರೇ ಪ್ರತಿವರ್ಷ ಕೂಡ ಸತತ 11 ದಿನಗಳವರೆಗೆ ವಿಶೇಷ ಪೂಜೆ, ಅಲಂಕಾರದಿಂದ ಪೂಜಿಸಲ್ಪಡುತ್ತಾನೆ. ಪ್ರತಿಷ್ಠಾಪನೆಗೊಂಡ ದಿನದಿಂದ ಅನಂತ ಚತುರ್ಥಿವರೆಗೆ ಪ್ರತಿನಿತ್ಯ ಮಕ್ಕಳಿಗೆ ರಂಗೋಲಿ, ಭಾಷಣ ಸ್ಪರ್ಧೆಗಳು ನಡೆಯುತ್ತಿವೆ. ಸತತ 11 ದಿನಗಳವರೆಗೆ ಆಧ್ಯಾತ್ಮಿಕ ಪ್ರವಚನವನ್ನು ಶ್ರೀ ವಿನಾಯಕ ಉತ್ಸವ ಸಮೀತಿಯವರು ಹಮ್ಮಿಕೊಂಡಿರುತ್ತಾರೆ.

# ವಿಶೇಷ ಸಹಕಾರ ತರಬೇತಿ ಶಿಬಿರದ ಉದ್ಘಾಟನೆ

**ಗದಗ :** ಸಹಕಾರ ಇಲಾಖೆ, ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಕೆ.ಸಿ.ಸಿ. ಬ್ಯಾಂಕ್ ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕುಗಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಹಾಗೂ ಒಬ್ಬ ನಿರ್ದೇಶಕರುಗಳಿಗೆ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರವನ್ನು ಗುರುವಾರ ದಿ.ಕೆ.ಸಿ.ಸಿ ಬ್ಯಾಂಕ್ ಲಿ., ರೋಣ ಇದರ ಸಭಾಭವನ, ತಾ. ರೋಣ ಜಿ.ಗದಗ ಇದರ ಸಭಾಭವನದಲ್ಲಿ ಜರುಗಿತು.

ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ನಿ., ಬೆಂಗಳೂರು ಇದರ ಅಧ್ಯಕ್ಷರು ಹಾಗೂ ಕೆ.ಸಿ.ಸಿ.ಬ್ಯಾಂಕ್ ಲಿ., ಧಾರವಾಡ ನಿರ್ದೇಶಕರಾದ ಜಿ. ಪಿ. ಪಾಟೀಲ ಉದ್ಘಾಟಿಸಿ ಮಾತನಾಡುತ್ತಾ ಇತ್ತೀಚಗೆ ಪ್ರಾಥಮಿಕ ಸಹಕಾರ ಸಹಕಾರ ಸಂಘಗಳಲ್ಲಿ ಹಣ ದುರುಪಯೋಗ ಪ್ರಕರಣಗಳು ಹೆಚ್ಚಾಗುತ್ತಿದ್ದು ಇದಕ್ಕೆ ಕಡಿವಾಣ ಹಾಕಬೇಕಾಗಿದೆ. ಕಾರಣ ಸಂಘದ ಅಧ್ಯಕ್ಷರು ಹಾಗೂ ಆಡಳಿತ ಮಂಡಲಿ ನಿರ್ದೇಶಕರುಗಳ ಕರ್ತವ್ಯ ಪ್ರಮುಖವಾಗಿರುತ್ತದೆ. ಈ ಕುರಿತು ಇಂದು ಸಂಘಗಳ ಪ್ರಗತಿಗೆ ಶ್ರಮಿಸಿದ ಸಹಕಾ–ರಿಗಳು ಮತ್ತು ಇಲಾಖಾ ಅಧಿಕಾರಿಗಳಿಂದ ಉಪನ್ಯಾಸಗಲನ್ನು ಏರ್ಪಡಿಸಲಾಗಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

ಕೆ.ಸಿ.ಸಿ ಬ್ಯಾಂಕ್ ಲಿ., ಗದಗ ಇದರ ಮಾಜಿ ನಿರ್ದೇಶಕರಾದಸಿ.ಕೆ.ಮಾಳಶೆಟ್ಟಿ ರವರು ಸಂಸ್ಥೆಗಳ ಮೂಲಕ ಭಾರತದ ಗ್ರಾಮೀಣ ಆರ್ಥಿಕತೆಯನ್ನು ಪುನರುಜ್ಜೀವನಗೊಳಿಸುವ ದಿಟ್ಟ ಮಾರ್ಗಸೂಚಿ ರಾಷ್ಟ್ರೀಯ ಸಹಕಾರಿ ನೀತಿ–2025 ಅನ್ನು ಕೇಂದ್ರ ಸಚಿವರು ಈಗಾಗಲೇ ಅನಾವರಣಗೊಳಿಸಿದ್ದಾರೆ. ಮಾದರಿ ಸಹಕಾರಿ ಗ್ರಾಮಗಳನ್ನು ರಚಿಸುವುದು ಇದರ ಉದ್ದೇಶವಾಗಿದೆ. ನಬಾರ್ಡ ಬೆಂಬಲದೊಂದಿಗೆ ಈ ಮಾದರಿ ಗ್ರಾಮಗಳು ತಂತ್ರಜ್ಞಾನ ಮತ್ತು ಸಮುದಾಯದ ಮಾಲೀಕತ್ವದಿಂದ ನಡೆಸುವ ಆಧುನೀಕೃತ ಸಹಕಾರಿ ಸಂಸ್ಥೆಗಳ ಸಂಪೂರ್ಣ ಸಾಮರ್ಥ್ಯವನ್ನು ಪ್ರದರ್ಶಿಸುತ್ತವೆ ಸಹಕಾರ ಕ್ಷೇತ್ರದ ಆರೋಗ್ಯಕರ ಬೆಳವಣಿಗೆ ಜನಾಗೃತಿಯನ್ನು ಅವಲಂಬಿಸಿರುತ್ತದೆ. ಜಾಗೃತ ಜನರಲ್ಲಿ ಸಹಕಾರ ಪ್ರಜ್ಞೆ ಮೂಡಿಬಂದಲ್ಲಿ ಸಹಕಾರಿ ವ್ಯವಸ್ಥೆಯ ಅರಿವು ಜಾಗೃತಗೊಳ್ಳುತ್ತದೆ. ಸಹಕಾರ ಸಂಸ್ಥೆಗಳ ಸದಸ್ಯ ಬಳಗ ತಮ್ಮ ಸಹಕಾರ ಸಂಸ್ಥೆಗಳ ಬಗ್ಗೆ ಸದಾ ಜಾಗೃತರಾಗಿರುವುದೇ ಆ ಸಂಘದ ಬೆಳವಣಿಗೆಗೆ ಪೋಷಕ ಎನಿಸುತ್ತದೆ ಎಂದರು

ಹಿರಿಯ ಸಹಕಾರಿಗಳಾದ ವ್ಹಿ. ಡಿ. ಮೇಘರಾಜ ರವರು ಮಾತನಾಡುತ್ತಾ ಸಹಕಾರ ತತ್ವಗಳು ಸಮಾಜದಲ್ಲಿ ಸಮಾನತೆ, ಆರ್ಥಿಕತೆ ಸಬಲೀಕರಣಕ್ಕೆ ಪೂರಕವಾಗಿವೆ. ಇದರಿಂದ ಸಾರ್ವಜನಿಕ ವಲಯ ಮತ್ತು ಖಾಸಗಿ ಕ್ಷೇತ್ರಗಳ ನಡುವೆ ಸಹಕಾರಿ ಕ್ಷೇತ್ರದ ಪೈಪೋಟಿಯನ್ನು ಎದುರಿಸಲು ಸಾಧ್ಯವಾಗುತ್ತದೆ. ಹಾಗೂ ಅತಿ ಸಣ್ಣ ಹಿಡುವಳಿದಾರರು, ಸಣ್ಣ ರೈತರು, ಸಣ್ಣ ವ್ಯಾಪಾರಿಗಳು, ಚಿಲ್ಲರೆ ಮಾರಾಟಗಾರರು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ, ಔದ್ಯೋಗಿಕವಾಗಿ ಮುಂದುವರೆಯಲು ಸಾಧ್ಯವಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.



ಹಿರಿಯ ಸಹಕಾರಿಗಳು ಹಾಗೂ ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಇದರ ನಿರ್ದೇಶಕರಾದ ಸಿ. ಬಿ. ದೊಡ್ಡಗೌಡ್ರ ರವರು ಮಾತನಾಡುತ್ತಾ ಪ್ಯಾಕ್ಸಗಳನ್ನು ಸಾಮಾನ್ಯ ಸೇವಾ ಕೇಂದ್ರಗಳಲ್ಲಿಯ ಸೌಲಭ್ಯಗಳನ್ನು ಅಳವಡಿಕೊಂಡು ಸಹಕಾ–ರಿಗಳಿಗೆ ಅನುವು ಮಾಡಿಕೊಡುವುದು ಅತೀ ಅವಶ್ಯ ಅದರೊಂದಿಗೆ ಅಧ್ಯಕ್ಷದಾದವರು ಸದಸ್ಯರಿಂದ ಸ್ವೀಕರಿಸಲಾಗುತ್ತಿರುವ ಠೇವು ಮತ್ತು ಸಾಲಗಳ ಒಳನಿಯಮಾವಳಿಗಳ ಪ್ರಕಾರ ಸಂಘದಲ್ಲಿ ಠೇವುಗಳನ್ನು ಸ್ವೀಕ–ರಿಸಲಾಗಿತ್ತೀದೆಯೇ ಕೃಷಿ, ಕೃಷಿಯೇರತ ಸಾಲಗಳನ್ನು ನೀಡಲಾಗಿತ್ತಿದೆಯೇ? ಹಾಗೆ ಸಂಘದ ದುಡಿಯುವ ಬಂಡವಾಳವು ಯಾವ ಯಾವ ಲೆಕ್ಕಶಿರ್ಷಿಕೆಯಲ್ಲಿ ಎಷ್ಟೇಷ್ಟು ಮೊತ್ತ ದುಡಿತಾ ಇದೆ? ಮತ್ತು ಸಂಘದಿಂದ ಸಾಲಗಳ ಗುಣಮಟ್ಟವನ್ನು ಪರಿಶೀಲಿಸುವುದು, ಅದರಲ್ಲಿ ಕೃಷಿಗೆ ಅಲ್ಪಾವಧಿ ಬೆಳೆಸಾಲ, ಪಶುಸಂಗೋಪನೆ ಸಾಲ ಮತ್ತು ಕೃಷಿ ಮಧ್ಯಮಾವಧಿ ಸಾಲ, ಈ ಎಲ್ಲ ಅಂಶಗಳನ್ನು ಪರಿಶೀಲನೆ ಮಾಡಿದ ಮೇಲೆ ಮುದ್ದತ ಮೀರಿದ ಸಾಲದ ವಸೂಲಾತಿಗೆ ಕ್ರಮ ವಿಡುವುದು, ಸುಸ್ತಿ ಸಾಲವನ್ನು ವಸೂಲು ಮಾಡಲು ಸಾಕಷ್ಟು ತಿಳುವಳಿಕೆ ನೋಟಿಸುಗಳನ್ನು ಕಳಿಸಲು ಕ್ರಮ ವಹಿಸುವುದು. ಇವುಗಳೆಲ್ಲಾ ಉತ್ತಮವಾಗಿ ನಿರ್ವಹಿಸುವುದ–ರಿಂದ ಸಂಘದ ಮೇಲೆ ಹೆಚ್ಚು ವಿಶ್ವಾಸ ಹಾಗೂ ಪ್ರಗತಿ ಹೊಂದಲು ಕಾರಣವಾಗುತ್ತದೆ.

ಗದಗ ಜಿಲ್ಲಾ ಸಹಕಾರ ಯುನಿಯನ್ ನಿ., ನಿರ್ದೇಶಕರಾದ ಸುರೇಶಗೌಡ ಎಂ. ಪಾಟೀಲ ರವರು ಮಾತನಾಡುತ್ತಾ ಇತ್ತೀಚಿನ ದಿನಗಳಲ್ಲಿ ಪ್ಯಾಕ್ಸಗಳ ಬಲವೃದ್ದಿಗೆ ರಾಷ್ಟ್ರದಾದ್ಯಂತ ವಿಶೇಷ ಪ್ರಯತ್ನಗಳು ನಡೆಯುತ್ತಿವೆ. ಪ್ಯಾಕ್ಸಗಳು ಆರ್ಥಿಕವಾಗಿ ಸಬಲಗೊಂಡು ಲಾಭದಾಯಕವಾಗಿ ಕೆಲಸ ನಿರ್ವಹಿಸಿದರೆ ಸಹಕಾರ ಚಳುವಳಿಗೆ ದೊಡ್ಡ ಕೊಡುಗೆ ನೀಡಿದಂತಾಗುತ್ತದೆ ಎಂಬ ಭಾವನೆಗೆ ಅವಕಾಶವಾಗಿದೆ. ಆರ್ಥಿಕ ಸಮಾನತೆ, ದುರ್ಬಲ ಜನರ ಏಳಿಗೆಗೆ ಮತ್ತು ಸಮಾಜದ ಪ್ರಗತಿಯ ರೂವಾರಿಯಾಗಿರುವ ಸಹಕಾರ ಕ್ಷೇತ್ರ ಇಂದು ಜೀವನದ ಎಲ್ಲಾ ಪ್ರಕಾರಗಳನ್ನು ಆವರಿಸಿಕೊಂಡು ಮಾನವ ಜೀವನದ ಅವಿಭಾಜ್ಯ ಅಂಗವೇ ಆಗಿದೆ. ಸಹಕಾರ ತತ್ವಗಳು ಸಮಾಜದಲ್ಲಿ ಸಮಾನತೆ, ಆರ್ಥಿಕ ಸಬಲೀಕರಣಕ್ಕೆ ಪೂರಕವಾಗಿದೆ. ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಇದರ ಅಧ್ಯಕ್ಷರಾದ ಸಿ.ಎಂ.ಪಾಟೀಲ ರವರು ಅಧ್ಯಕ್ಷಿಯ ಭಾಷಣ ಮಾಡುತ್ತ ಉತ್ತಮ ಸೇವೆ ಎಂದರೆ, ಎಲ್ಲರೂ ಸಂಸ್ಥೆಗೆ ಬಂದು ಯಾವುದೇ ತಾರತಮ್ಯವಿಲ್ಲದೆ ಅವರ ಕೆಲಸಗಳನ್ನು ಸಕಾಲದಲ್ಲಿ ಪೂರೈಸಿಕೊಂಡು ಹೋಗುವಂತಿರಬೇಕು.ಸಹಕಾರ ಸಂಸ್ಥೆಗಳು ತಮ್ಮ ಸದಸ್ಯರಿಗೆ ಅಥವಾ ಗ್ರಾಹಕರಿಗೆ ನೀಡುವ ಸೇವೆಗಳಲ್ಲಿ ಏನಾದರೂ ನ್ಯೂನತೆಗಳು ಕಂಡು ಬಂದಲ್ಲಿ ತಕ್ಷಣವೇ ಅವುಗಳನ್ನು ಗಮನಿಸಿ, ಸೂಕ್ತ ಕ್ರಮಗಳನ್ನು ಕೈಗೊಂಡಾಗ, ಸಂಸ್ಥೆಯ ಮೇಲಿನ ವಿಶ್ವಾಸ ಹೆಚ್ಚುತ್ತದೆ. ಇದನ್ನು ಸಹಕಾರ ಸಂಸ್ಥೆಗಳು ಮಾಡದಿದ್ದರೆ, ಅವರಿಗಿಂತ ಮುಂಚೆಯೆ, ಅಂದರೆ ಸಹಕಾರಿ ಸಂಸ್ಥೆಗಳು ಯೋಚಿಸುವಷ್ಟರಲ್ಲಿ... ಬೇರೆ ಸಂಸ್ಥೆಗಳು ಜನರಿಗೆ ಬೇಕಾದ ಕೆಲಸಗಳನ್ನು ಮಾಡಿಕೊಟ್ಟಿರುತ್ತಾರೆ. ಇದರಿಂದ ಸಹಕಾರ ಸಂಸ್ಥೆಗಳ ವ್ಯವಹಾರ ಕುಸಿದು ಬೀಳುವ ಸಾಧ್ಯತೆ ಇದೆ.

ಕಾರ್ಯಕ್ರಮದಲ್ಲಿ ಕೆ.ಸಿ.ಸಿ ಬ್ಯಾಂಕ್ ರೋಣ ನಿರೀಕ್ಷಕರಾದ ಎ.ಎ. ಶಾಬಾದಿ, ಕೆ.ಸಿ.ಸಿ ಬ್ಯಾಂಕ್ ರೋಣ ಕಿರಿಯ ನಿರೀಕ್ಷಕರುಗಳಾದ ಜಿ. ಪಿ.ರಾಠೊಡ, ಎಂ. ಬಿ. ಪೂಜಾರಿ, ಉಪಸ್ಥಿತರಿದ್ದರು.

ತರಬೇತಿ ಕಾರ್ಯಾಗಾರದಲ್ಲಿ "ಪ್ರಾಥ–'ಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಆಡಳಿತ ನಿರ್ವಹಣೆ" ಕುರಿತು ಕೆ.ಸಿ.ಸಿ. ಬ್ಯಾಂಕ್ ಲಿ., ಧಾರವಾಡ ಇದರ ನಿರ್ದೇಶಕರಾದ ಸಿ. ಬಿ. ದೊಡ್ಡಗೌಡ್ರ "ಸಭೆಗಳು ಹಾಗೂ ಸಭೆಗಳಲ್ಲಿನ ಪ್ರಕಾರಗಳ" ಕುರಿತು ಕೆ.ಓ. ಎಫ್. ಹುಬ್ಬಳ್ಳಿ ಮಾಜಿ ಅಧ್ಯಕ್ಷರಾದ ವ್ಹಿ. ಬಿ. ಚಿಕ್ಕರಡ್ಡಿ ಹಾಗೂ "ಸಾಲ ತರುವುದು, ವಿತ–ರಿಸುವುದು, ವಸೂಲಿ ಹಾಗೂ ಸಂಬಂಧಿಸಿದ ಬ್ಯಾಂಕಿಗೆ ಮರುಪಾವತಿಸುವ" ಕುರಿತು ರೋಣ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ ಉಪನ್ಯಾಸ ನೀಡಿದರು.

ಹಿರೇಹಾಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕರಾದ ಶಂಕರಗೌಡ ವ್ಹಿ. ಗೌಡರ ಪ್ರಾರ್ಥನೆ ಮಾಡಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ ಹಾಗೂ ಕಾರ್ಯಕ್ರಮವನ್ನು ನಿರೂಪಿಸಿದರು, ಯೂನಿಯನ್‌ದ ಮಹಿಳಾ ಸಹಕಾರ ಶಿಕ್ಷಕಿ ಶ್ರೀಮತಿ ರಶೀದಾಬಾನು ಸಿ. ಯಲಿಗಾರ ವಂದಿಸಿದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :173, Postal Reg No. PMG/KA/NK/BM/135/25-27 / POST AT Vantamury Colony Post Office